ಸಂಪುಟ: 22, ಸಂಚಿಕೆ: 258, ಪುಟಗಳು: 8, ಶುಕ್ರವಾರ, 27 ಜೂನ್ 2025 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ





ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು



ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು

ನಾಡಪ್ರಭು ಕೆಂಪೇಗೌಡರ
516ನೇ ಜಯಂತ್ಯುತ್ಸವ

ಬೆಂಗಳೂರು ನಿರ್ಮಾತೃ
ನಾಡಪ್ರಭು
ಕೆಂಪೇಗೌಡರಿಗೆ
ಗೌರವಪೂರ್ಣ ನಮನ ಸಮರ್ಪಣೆ

ಉತ್ತಮ ಬೆಂಗಳೂರು ನಿರ್ಮಾಣಕ್ಕೆ
ಕ್ರಾಂತಿಕಾರಿ ದೂರದೃಷ್ಟಿಯ ಅನುಸರಣೆಗೆ ಸಂಕಲ್ಪ,



ಶ್ರೀ ಡಿ.ಕೆ. ಶಿವಕುಮಾರ್, ಮಾನ್ಯ ಉಪ ಮುಖ್ಯಮಂತ್ರಿಗಳು
ಶ್ರೀ ಎನ್.ಎ. ಹ್ಯಾರಿಸ್, ಮಾನ್ಯ ಶಾಸಕರು, ಶಾಂತಿನಗರ ವಿಧಾನಸಭಾ ಕ್ಷೇತ್ರ
ಮತ್ತು ಅಧ್ಯಕ್ಷರು, ಬಿಡಿಎ, ಅವರಿಗೆ ಹೂಗುಚ್ಛ ನೀಡಿ ಶುಭಕೋರುತ್ತಿರುವುದು.



"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು
ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಟಿ. ಚೌಡಯ್ಯ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು-560 020.

ಸಂಪುಟ: 22, ಸಂಚಿಕೆ: 258, ಪುಟಗಳು: 8, ಶುಕ್ರವಾರ, 27 ಜೂನ್ 2025 RNI NO. KARKAN/2002/08054
epaper: www.sanjemugilu.com


ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ನೇಹಾ ಸಾರಥ್ಯದಲ್ಲಿ...
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3


ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines


**ಸುಭಾಷಿತ**

ವೈಫಲ್ಯಗಳಿಂದ ಯಶಸ್ಸನ್ನು ಗಳಿಸಿ, ವೈಫಲ್ಯವು ಯಶಸ್ಸಿನ ಖಚಿತವಾದ ಮೆಟ್ಟಿಲುಗಳಲ್ಲಿ ಒಂದು.

## ಪಂಚಾಂಗ

(ಶುಕ್ರವಾರ 27 ಜೂನ್-2025)

- ಶ್ರೀ ವಿಶ್ವಾವಸುನಾಮ ಸಂವತ್ಸರ,
- ಉತ್ತರಾಯಣ, ಗ್ರೀಷ್ಮ ಋತು,
- ಆಷಾಢ ಮಾಸ, ಶುಕ್ಲ ಪಕ್ಷ,
- ದ್ವಿತೀಯ / ತೃತೀಯ,
- ಶುಕ್ರವಾರ, ಪುನರ್ವಸು ನಕ್ಷತ್ರ / ಪುಷ್ಯ ನಕ್ಷತ್ರ
- ರಾಹುಕಾಲ - 10:50 ರಿಂದ 12:26
- ಗುಳಿಕಕಾಲ - 07:38 ರಿಂದ 09:14
- ಯಮಗಂಡಕಾಲ - 03:38 ರಿಂದ 05:14

## ಸಂಕ್ಷಿಪ್ತ ಸುದ್ದಿ

### ಭಾರತದ ಜೊತೆ ಶೀಘ್ರವೇ ಬಿಗ್ ಟ್ರೇಡ್ ಡೀಲ್ ಟ್ರಂಪ್ ಘೋಷಣೆ

**ವಾಷಿಂಗ್ಟನ್:** ಭಾರತದ ಜೊತೆ ಶೀಘ್ರವೇ ಬಹಳ ದೊಡ್ಡ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲಿದ್ದೇವೆ ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಘೋಷಿಸಿದ್ದಾರೆ. ಭಾರತ ಮತ್ತು ಅಮೆರಿಕ ನಡುವೆ ಕಳೆದ 4 ದಿನಗಳಿಂದ ವ್ಯಾಪಾರ ಒಪ್ಪಂದ ಸಂಬಂಧ ಸುದೀರ್ಘ ಮಾತುಕತೆ ನಡೆಯುತ್ತಿದೆ. ಈ ಮಾತುಕತೆಯ ಸಮಯದಲ್ಲೇ ಟ್ರಂಪ್ ಅವರು ಶ್ವೇತ ಭವನದಲ್ಲಿ ನಡೆದ ಬಿಗ್ ಬ್ಯೂಟಿಫುಲ್ ಕಾರ್ಯಕ್ರಮದಲ್ಲಿ ಭಾರತದ ಜೊತೆಗಿನ ಒಪ್ಪಂದ ಬಗ್ಗೆ ಮಾತನಾಡಿದರು. ಪ್ರತಿಯೊಬ್ಬರೂ ಒಪ್ಪಂದ ಮಾಡಿಕೊಳ್ಳಲು ಮತ್ತು ಅದರಲ್ಲಿ ಭಾಗವಹಿಸಲು ಬಯಸುತ್ತಾರೆ. ನಾವು ನಿನ್ನೆ ಚೀನಾದೊಂದಿಗೆ ಸಹಿ ಹಾಕಿದ್ದೇವೆ. ನಾವು ಕೆಲವು ಉತ್ತಮ ಒಪ್ಪಂದಗಳನ್ನು ಹೊಂದಿದ್ದೇವೆ. ಬಹುಶಃ ಭಾರತದೊಂದಿಗೆ ಬಹಳ ದೊಡ್ಡ ಒಪ್ಪಂದ ಮಾಡುತ್ತಿದ್ದೇವೆ. ಈ ವೇಳೆ ಅವರು ನಾವು ಎಲ್ಲರೊಂದಿಗೆ ಒಪ್ಪಂದ ಮಾಡಿಕೊಳ್ಳುವುದಿಲ್ಲ. ಕೆಲವರಿಗೆ ಮಾತ್ರ ಪತ್ರ ಕಳುಹಿಸುತ್ತೇವೆ ಎಂದು ಅವರು ಹೇಳಿದರು.

ಪುಟ 2



### ಪತ್ನಿ ಕೊಂದು ಬಸ್‌ನಲ್ಲಿ ಲಗೇಜ್ ಎಂದು ಕಳುಹಿಸಿ ಪರಾರಿಯಾಗಿದ್ದ ವೃದ್ಧ ಕೊನೆಗೂ ಅರೆಸ್ಟ್

**ಕೊಪ್ಪಳ:** ಅಪರೂಪದಲ್ಲೇ ಅಪರೂಪದ ಅಪರಾಧ ಕೃತ್ಯವೊಂದಕ್ಕೆ ಕೊಪ್ಪಳ ಜಿಲ್ಲೆ ಸಾಕ್ಷಿಯಾಗಿದೆ. ವ್ಯಕ್ತಿಯೊಬ್ಬ ಇಳಿ ವಯಸ್ಸಿನಲ್ಲಿ ತನ್ನ ಮೂರನೇ ಹೆಂಡತಿಯನ್ನು ಹತ್ಯೆ ಮಾಡಿ ಮೃತದೇಹವನ್ನು ಲಗೇಜ್ ಎಂದು ಬಸ್ಸಿನಲ್ಲಿ ಕಳುಹಿಸಿ ಪರಾರಿಯಾಗಿದ್ದಲ್ಲದೆ, ತಲೆಮರೆಸಿಕೊಂಡು ಹಾಯಾಗಿದ್ದ! ಇದೀಗ ಕೃತ್ಯ ಎಸಗಿ ಮೂರು ವರ್ಷಗಳ ಬಳಿಕ ರಾಯಚೂರಿನಲ್ಲಿ ಪೊಲೀಸರ ಬಲೆಗೆ ಬಿದ್ದಿದ್ದಾನೆ. ಆರು ತಿಂಗಳ ಹಿಂದೆ ಸ್ವಗ್ರಾಮಕ್ಕೆ ಬಂದಿದ್ದ ಹಂತಕನ ಜಾಡು ಹಿಡಿದು ಶೋಧ ನಡೆಸಿದ ಪೊಲೀಸರು, ಕೊನೆಗೂ ಆತನನ್ನು ಖೆಡ್ಡಾಕ್ಕೆ ಕೆಡವುವಲ್ಲಿ ಯಶಸ್ವಿಯಾಗಿದ್ದಾರೆ. ರಾಯಚೂರ ಜಿಲ್ಲೆಯ ಮಾನ್ವಿಯಲ್ಲಿ ಆರೋಪಿ 75 ವರ್ಷದ ಹುಸೇನಪ್ಪನನ್ನು ಬಂಧಿಸಲಾಗಿದೆ. ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಿರಿಯ ಸಹಾಯಕ ಅಧಿಕಾರಿಯಾಗಿದ್ದ ಹುಸೇನಪ್ಪನ ಮೊದಲ ಪತ್ನಿ ತೀರಿಕೊಂಡಿದ್ದರು.

ಪುಟ 2



# ಆಷಾಢ ಮಾಸದ ಮೊದಲ ಶುಕ್ರವಾರ

## ಚಾಮುಂಡಿ ಬೆಟ್ಟದಲ್ಲಿ ಭಕ್ತ ಸಾಗರ



**ಮೈಸೂರು:** ಆಷಾಢ ಮಾಸದ ಮೊದಲ ಶುಕ್ರವಾರ ಹಿನ್ನೆಲೆ ಮೈಸೂರಿನ ಚಾಮುಂಡೇಶ್ವರಿ ಬೆಟ್ಟಕ್ಕೆ ಭಕ್ತ ಸಾಗರವೇ ಹರಿದು ಬಂದಿದೆ. ಚಾಮುಂಡಿ ಬೆಟ್ಟದಲ್ಲಿ ಜನಸಾಗರ ನೆರೆದಿತ್ತು. ರಾಜ್ಯದ ವಿವಿಧ ಭಾಗಗಳಿಂದ ಭಕ್ತರ ದಂಡೇ ಹರಿದು ಬಂದಿತ್ತು. ಆಷಾಢದ ಶುಕ್ರವಾರ ತಾಯಿಯ ಉತ್ಸಾಹ ಮೂರ್ತಿಗೆ ನಾನಾ ಬಗೆಯ ಹೂಗಳಿಂದ ಅಲಂಕಾರ ಮಾಡಿದ್ದು, ಭಕ್ತರು ದೇವಿ ಕಣ್ತುಂಬಿಕೊಂಡ್ರು.

### ಬೆಳಗಿನ ಜಾವ 3 ಗಂಟೆಯಿಂದಲೇ ಜನಸಾಗರ

ಆಷಾಢದ ಮೊದಲ ಶುಕ್ರವಾರದ ಹಿನ್ನೆಲೆ ಚಾಮುಂಡಿ ಬೆಟ್ಟಕ್ಕೆ ಭಕ್ತರ ದಂಡೇ ಹರಿದು ಬರ್ತಿದೆ. ಬೆಳಗಿನ ಜಾವ 3 ಗಂಟೆಯಿಂದಲೇ ಬೆಟ್ಟಕ್ಕೆ ಜನರು ಆಗಮಿಸಿದ್ದು, ಇಷ್ಟಾರ್ಥಗಳ ಈಡೇರಿಕೆಗಾಗಿ ತಾಯಿ ದರ್ಶನ ಪಡೆಯುತ್ತಿದ್ದಾರೆ.



### ದರ್ಶನಕ್ಕೆ 2000 ರೂ, ಟಿಕೆಟ್ ಬೆಲೆ ನಿಗದಿ

ಜಿಲ್ಲಾಡಳಿತ ಧರ್ಮದರ್ಶನದ ಜೊತೆಗೆ 300 ರೂಪಾಯಿ ಹಾಗೂ 2000 ರೂ ಟಿಕೆಟ್ ನಿಗದಿಪಡಿಸಿದೆ. ಜೊತೆಗೆ ಲಲಿತ್ ಮಹಲ್ ಆವರಣದಲ್ಲೇ ಟಿಕೆಟ್ ಪಡೆಯಲು ವ್ಯವಸ್ಥೆ ಮಾಡಲಾಗಿದೆ. 2000 ರೂ ದರ್ಶನ ಟಿಕೆಟ್ ಪಡೆದವರಿಗೆ ಎಸಿ ಬಸ್ ನಲ್ಲಿ ಉಚಿತ ಪ್ರಯಾಣ ನೇರ ದರ್ಶನವಿರಲಿದೆ. ಆಷಾಢ ಶುಕ್ರವಾದಲ್ಲಿ ವಿವಿಐಪಿ ಗಳಿಗೆ ಬೆಳಿಗ್ಗೆ 5 ರಿಂದ 10 ಗಂಟೆಗೆ ದರ್ಶನಕ್ಕೆ ಸಮಯ ನಿಗದಿ ಮಾಡಲಾಗಿದೆ.

### 4 ವಾರ ವಿಶೇಷ

ಚಾಮುಂಡೇಶ್ವರಿಗೆ ನಾಲ್ಕು ವಾರಗಳ ಕಾಲ ಚಾಮುಂಡೇಶ್ವರಿಗೆ ವಿಶೇಷ ಪೂಜೆ ನಡೆಯಲಿದ್ದು, ದೇವಿಯ ಉತ್ಸವ ಮೂರ್ತಿಗೆ ವಿವಿಧ ಬಗೆಯಲ್ಲಿ ಅಲಂಕಾರ ಮಾಡಲಾಗುತ್ತೆ. ಇತ್ತ ದೇಗುಲಕ್ಕೆ ಬರುವ ಭಕ್ತಾದಿಗಳಿಗೆ ತೊಂದರೆಯಾಗದಂತೆ ಜಿಲ್ಲಾಡಳಿತ ಸಕಲ ವ್ಯವಸ್ಥೆ ಕಲ್ಪಿಸಿದೆ. ಭಕ್ತರು ಕೂಡ ಸರದಿ ಸಾಲಿನಲ್ಲಿ ನಿಂತು ತಾಯಿಯ ದರ್ಶನ ಪಡೆಯುತ್ತಿದ್ದಾರೆ.

### ಖಾಸಗಿ ವಾಹನಕ್ಕೆ ಬೆಟ್ಟಕ್ಕಿಲ್ಲ ಎಂಟ್ರಿ!

ಪ್ರಮುಖವಾಗಿ ಖಾಸಗಿ ವಾಹನಗಳಿಗೆ ಚಾಮುಂಡಿ ಬೆಟ್ಟಕ್ಕೆ ಪ್ರವೇಶ ನಿರ್ಬಂಧಿಸಲಾಗಿದೆ. ಶುಕ್ರವಾರ, ಶನಿವಾರ, ಭಾನುವಾರ ಖಾಸಗಿ ವಾಹನಗಳಿಗೆ ಎಂಟ್ರಿ ಇರುವುದಿಲ್ಲ. ಶುಕ್ರವಾರದಂದು ಬೆಟ್ಟಕ್ಕೆ ಸರ್ಕಾರಿ ಬಸ್ ನಲ್ಲಿ ಉಚಿತ ಪ್ರಯಾಣ ಮಾಡಬೇಕಿದೆ. ಲಲಿತ ಮಹಲ್ ಆವರಣದಿಂದ ಸರ್ಕಾರಿ ಬಸ್ ವ್ಯವಸ್ಥೆ ಮಾಡಲಾಗಿದ್ದು, ಶನಿವಾರ, ಭಾನುವಾರ ಎಂದಿನಂತೆ ಬಸ್ ಶುಲ್ಕ ಅನ್ವಯವಾಗಲಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

### ಮೊಬೈಲ್ ಬಳಕೆ ನಿಷೇಧ

ದೇವಸ್ಥಾನದ ಆವರಣದಲ್ಲಿ ಮೊಬೈಲ್ ಬಳಕೆಯನ್ನ ನಿಷೇಧ ಮಾಡಲಾಗುತ್ತದೆ. ನಿಯಮ ಮೀರಿ ಬಳಸಿದ್ರೆ ಮೊಬೈಲ್, ಕ್ಯಾಮೆರಾ ಎಲ್ಲವೂ ಶಾಶ್ವತವಾಗಿ ವಶಕ್ಕೆ ಪಡೆಯಲಾಗುತ್ತದೆ. ಉತ್ಸವ ಮೂರ್ತಿಯ ಫೋಟೋ, ವಿಡಿಯೋ ಚಿತ್ರೀಕರಿಸಿ ಪ್ರಾಧಿಕಾರವೇ ಸಾಮಾಜಿಕ ಜಾಲತಾಣದಲ್ಲಿ ಪ್ರಸರಣೆ ಮಾಡಲಿದೆ.

### ಮುತ್ತೈದೆಯರಿಗೆ ಮಡಿಲಕ್ಕಿ

ಎಲ್ಲಾ ಭಕ್ತಾದಿಗಳಿಗೆ ಕುಂಕುಮ ಪ್ರಸಾದ, ಮುತ್ತೈದೆಯರಿಗೆ ಮಡಿಲಕ್ಕಿ ಪ್ಯಾಕೆಟ್ ಹಂಚಿಕೆಗೂ ವ್ಯವಸ್ಥೆ ಮಾಡಲಿದೆ. ಧರ್ಮದರ್ಶನದ ಸಾಲಿನಲ್ಲಿ ಬರುವವರಿಗೆ ಮಳಿಗೆಯಲ್ಲಿ ನಂದಿನಿ ಉತ್ಪನ್ನಗಳ ಮಾರಾಟಕ್ಕೆ ಅವಕಾಶ ನೀಡಲಾಗಿದೆ.

# ಕಾಫಿನಾಡಲ್ಲಿ ಭೂಕುಸಿತ

## ಮಳೆಗೆ ಮನೆಗಳು ಜಲಾವೃತ ■ ಸೂರು ಬಿಟ್ಟ ಕುಟುಂಬಗಳು

**ಚಿಕ್ಕಮಗಳೂರು:** ರಾಜ್ಯದಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಗೆ ಹಲವಾರು ಅವಾಂತರಗಳು ಸೃಷ್ಟಿಯಾಗುತ್ತಿದೆ. ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು ಸೇರಿದಂತೆ ಹಲವೆಡೆ ವರುಣಾರ್ಭಟ ಹೆಚ್ಚಾಗಿದೆ. ಇದರಿಂದ ಈ ಭಾಗದಲ್ಲಿ ಧರೆಕುಸಿತದ ಆತಂಕ ಮತ್ತಷ್ಟು ಹೆಚ್ಚಾಗಿದೆ. ಇದೇ ಭೀತಿ ಹಿನ್ನಲೆ ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ತಾಲೂಕಿನ ಸಂಕ್ಲಾಪುರ ಗ್ರಾಮದಲ್ಲಿ ಕುಟುಂಬಸ್ಥರು ಮನೆ ಬಿಟ್ಟು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳ್ಳುತ್ತಿದ್ದಾರೆ.

ಕಾಫಿನಾಡಿನ ಮಲೆನಾಡು ಭಾಗದಲ್ಲಿ ಕಳೆದ ಕೆಲವು ದಿನಗಳಿಂದ ಮುಂದುವರಿದ ಧಾರಾಕಾರ ಮಳೆಯಿಂದ ಸಂಕ್ಲಾಪುರ ಗ್ರಾಮದ ಸುಬ್ರಹ್ಮಣ್ಯ ಎಂಬುವವರ ಮನೆಯ ಸುತ್ತಮುತ್ತ ಭೂಮಿ ಕುಸಿದಿದೆ. ಈ ಘಟನೆಯಿಂದ ಮನೆ ಕುಸಿದು ಬೀಳುವ ಸ್ಥಿತಿಯಲ್ಲಿದ್ದು, ಸುಬ್ರಹ್ಮಣ್ಯ ಮತ್ತು ಅವರ ತಾಯಿಯನ್ನು ಸುರಕ್ಷಿತವಾಗಿ ಕಾಳಜಿ ಕೇಂದ್ರಕ್ಕೆ ಸ್ಥಳಾಂತರಿಸಲಾಗಿದೆ.

ರಾಷ್ಟ್ರೀಯ ಹೆದ್ದಾರಿ 169ರ ಅವೈಜ್ಞಾನಿಕ ಕಾಮಗಾರಿಯೇ ಈ ಭೂಕುಸಿತಕ್ಕೆ ಕಾರಣ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಈ ಬಗ್ಗೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವಿರುದ್ಧ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪುಟ 2



### ನದಿ ತೀರದಲ್ಲಿ ಪ್ರವಾಹ ಭೀತಿ

**ಬೆಳಗಾವಿ:** ಮಹಾರಾಷ್ಟ್ರದ ಘಟ್ಟ ಪ್ರದೇಶ ಹಾಗೂ ಬೆಳಗಾವಿ ಜಿಲ್ಲೆಯಲ್ಲಿ ನಿರಂತರ ಮಳೆ ಸುರಿಯುತ್ತಿದೆ. ಪರಿಣಾಮ ಕೃಷ್ಣಾ ಹಾಗೂ ಅದರ ಉಪ ನದಿಗಳ ನೀರಿನ ಒಳ ಹರಿವಿನಲ್ಲಿ ಗಣನೀಯ ಏರಿಕೆಯಾಗಿದ್ದು, ನದಿ ತೀರಗಳಲ್ಲಿ ಕ್ಷಣಕ್ಷಣಕ್ಕೂ ಪ್ರವಾಹದ ಭೀತಿ ಆವರಿಸಿದೆ. ನಿರಂತರ ಮಳೆಯಿಂದ ಕೃಷ್ಣಾನದಿಯ ಒಳ ಹರಿವು 1 ಲಕ್ಷ ಕ್ಯೂಸೆಕ್ ದಾಟಿದೆ. ದೂದಗಂಗಾ, ವೇದಗಂಗಾ, ಹೀರಣ್ಯಕೇಶಿ ನದಿಗಳ ನೀರಿನ ಮಟ್ಟದಲ್ಲೂ ಗಣನೀಯ ಏರಿಕೆಯಾಗಿದೆ.

ಪುಟ 2



## ಘಟಪ್ರಭಾ ತಟದಲ್ಲಿ ಪ್ರವಾಹ ಭೀತಿ

### ಮುಧೋಳ ತಾಲೂಕಿನ ಸೇತುವೆ ಜಲಾವೃತ ಸಾಧ್ಯತೆ

**ಬಾಗಲಕೋಟೆ:** ಘಟಪ್ರಭಾ ನದಿಗೆ ಅಪಾರ ನೀರು ಹರಿದುಬರುತ್ತಿದ್ದು, ಮುಧೋಳ ತಾಲೂಕಿನ ಸೇತುವೆಗಳು ಜಲಾವೃತವಾಗುವ ಸಾಧ್ಯತೆ ಇದೆ. ಮಹಾರಾಷ್ಟ್ರ, ಬೆಳಗಾವಿ ಜಿಲ್ಲೆಯಲ್ಲಿ ಸುರಿಯುತ್ತಿರುವ ಭಾರೀ ಮಳೆಯಿಂದ ಘಟಪ್ರಭಾ ನದಿ ಮೈದುಂಬಿ ಹರಿಯು ತ್ತಿದೆ. ಬೆಳಗಾವಿ ಜಿಲ್ಲೆಯಿಂದ ನದಿಗೆ 17 ಸಾವಿರ ಕ್ಯೂಸೆಕ್ ನೀರು ಹರಿದುಬರುತ್ತಿದೆ. ಬುಧವಾರ 10 ಸಾವಿರ ಕ್ಯೂಸೆಕ್ ಬರುತ್ತಿದ್ದರೆ ಗುರುವಾರ ಇದು 17 ಸಾವಿರ ಕ್ಯೂಸೆಕ್‌ಗೆ ಏರಿಕೆಯಾಗಿದೆ. ಸದ್ಯ ನಂದಗಾಂವ ಸೇತುವೆ ಜಲಾವೃತವಾಗಿದ್ದು, ಮಿರ್ಜಿ ಬಳಿಯ ಸೇತುವೆ ಜಲಾವೃತವಾಗುವ ಸಾಧ್ಯತೆಯಿದೆ. ಮುಧೋಳ ತಾಲೂಕಿನ 12 ಸೇತುವೆಗಳಲ್ಲಿ ಅಪಾಯ ಮಟ್ಟದಲ್ಲಿ ನೀರು ಹರಿಯುತ್ತಿದೆ. ಘಟಪ್ರಭಾ ನದಿಗೆ 25 ಸಾವಿರ ಕ್ಯುಸೆಕ್‌ಗಿಂತ ಹೆಚ್ಚಿನ ನೀರು ಹರಿದುಬಂದರೆ ಎರಡ್ಮೂರು ದಿನಗಳಲ್ಲಿ ಪ್ರವಾಹ ಎದುರಾಗಲಿದೆ. ಮಾಚಕನೂರ, ಮಿರ್ಜಿ, ಚನಾಳ, ಜಾಲಿಬೇರಿ, ಯಡಹಳ್ಳಿ, ಇಂಗಳಗಿ ಗ್ರಾಮ ಗಳು ಮೊದಲ ಹಂತದಲ್ಲಿ ಜಲಾವೃತವಾಗಲಿವೆ. ತಾಲೂಕು ಆಡಳಿತದಿಂದ ನೀರಿನ ಮಟ್ಟದ ಮೇಲೆ ನಿಗಾ ವಹಿಸಲಾಗಿದ್ದು, ಪ್ರವಾಹ ಸ್ಥಿತಿ ಎದುರಿಸಲು ಸಿದ್ಧತೆ ಕೈಗೊಳ್ಳಲಾಗಿದೆ.



### ಹುಲಿಗಳು ಸತ್ತ 10 ಹೆಜ್ಜೆ ದೂರದಲ್ಲಿಯೇ ಹಸು ಕಳೇಬರ ಪತ್ತೆ

# ಹುಲಿಗಳಿಗೆ ವಿಷಪ್ರಾಶನ ಶಂಕೆ

**ಚಾಮರಾಜನಗರ:** ಹುಲಿಗಳ ನಾಡು ಚಾಮರಾಜನಗರದಲ್ಲಿ ಬರೋಬ್ಬರಿ ಐದು ಹುಲಿಗಳು ಮೃತಪಟ್ಟಿವೆ. ವಿಷಪ್ರಾಶನದಿಂದ ಹುಲಿಗಳು ಸಾವನ್ನಪ್ಪಿವೆ ಎಂಬುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ. ಹುಲಿಗಳ ಸಂಖ್ಯೆ ಕ್ಷೀಣಿಸುತ್ತಿರುವ ಈ ದಿನಗಳಲ್ಲಿ, ಐದು ಹುಲಿಗಳನ್ನು ವಿಷವಿಕ್ಕಿ ಕೊಂದಿರುವುದು ಆಘಾತಕಾರಿಯಾಗಿದೆ.

ಚಾಮರಾಜನಗರ ಜಿಲ್ಲೆಯ ಮಲೆಮಹದೇಶ್ವರ ವನ್ಯಧಾಮದಲ್ಲಿ ತಾಯಿ ಹುಲಿ ಹಾಗೂ ನಾಲ್ಕು ಮರಿ ಹುಲಿಗಳ ಅಸಹಜ ಸಾವು ತಲ್ಲಣ ಉಂಟುಮಾಡಿದೆ. ಹೂಗ್ಯಂ ಅರಣ್ಯ ವಲಯದ ಮೀಣ್ಯಂ ಸಮೀಪ ಮಹದೇಶ್ವರ ಗುಡಿ ಬಯಲಿನಲ್ಲಿ ಈ ಐದೂ ಹುಲಿಗಳು ಸತ್ತುಬಿದ್ದಿವೆ. ಅರಣ್ಯ ಸಿಬ್ಬಂದಿ ಗಸ್ತಿನ ವೇಳೆ ಐದು ಹುಲಿಗಳ ಮೃತದೇಹ ಪತ್ತೆಯಾಗಿದ್ದು, ಅನತಿ ದೂರದಲ್ಲಿ ಹಸುವೊಂದರ ಮೃತದೇಹವೂ ಕಂಡು ಬಂದಿದೆ.

ವನ್ಯಪ್ರಾಣಿಯ ದಾಳಿಯಿಂದ ಹಸು ಸಾವನ್ನಪ್ಪಿದ್ದು, ಇದರ ಅರ್ಧಂಬರ್ಧ ದೇಹವನ್ನು ವನ್ಯಪ್ರಾಣಿಗಳು ತಿಂದು ಹೋಗಿವೆ. ಉಳಿದ ಮಾಂಸ ತಿನ್ನಲು ವನ್ಯಪ್ರಾಣಿ ಬರಬಹುದು ಎಂಬ ಕಾರಣಕ್ಕೆ ಅದನ್ನು ಕೊಲ್ಲಲು ಹಸುವಿನ ಮಾಂಸಕ್ಕೆ ಯಾರೋ ವಿಷ



ಸಿಂಪಡಣೆ ಮಾಡಿರಬಹುದು ಎಂಬ ಗುಮಾನಿ ಇದೆ. ವಿಷ ಮಿಶ್ರಿತ ಹಸುವಿನ ಮಾಂಸ ತಿಂದು ತಾಯಿ ಹುಲಿ ಹಾಗೂ ನಾಲ್ಕು ಮರಿ ಹುಲಿಗಳು ಸಾವನ್ನಪ್ಪಿರಬಹುದು ಎಂದು ಶಂಕಿಸಲಾಗಿದೆ. ಐದು ಹುಲಿಗಳು ಒಮ್ಮೆಲೆ ಮೃತಪಟ್ಟಿರುವುದಕ್ಕೆ ಅರಣ್ಯ ಸಚಿವ ಈಶ್ವರ ಖಂಡ್ರೆ ದಿಗ್ಭ್ರಮೆ ವ್ಯಕ್ತಪಡಿಸಿದ್ದು, ಪ್ರಕರಣದ ತನಿಖೆಗೆ ಪಿಸಿಸಿಎಫ್ ನೇತೃತ್ವದಲ್ಲಿ ಉನ್ನತ ಮಟ್ಟದ ತಂಡ ರಚಿಸಲಾಗಿದೆ. ಅರಣ್ಯ ಇಲಾಖೆ ಸಿಬ್ಬಂದಿ ನಿರ್ಲಕ್ಷ್ಯ ಇದ್ದರೆ ಅವರ ವಿರುದ್ಧ ಅಥವಾ ವಿಷಪ್ರಾಶನದಿಂದ ಮೃತಪಟ್ಟಿದ್ದರೆ ಅದಕ್ಕೆ ಕಾರಣರಾಗಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವಂತೆ ಆದೇಶ ನೀಡಿದ್ದಾರೆ. ಸದ್ಯ ಆರು ಮಂದಿ ತನಿಖಾ ತಂಡಲಿದ್ದಾರೆ. ಪಿಸಿಸಿಎಫ್ ರವಿ, ಎಪಿಸಿಸಿಎಫ್ ಶ್ರೀನಿವಾಸಲು, ಸಿಎಫ್ ಹೀರಾಲಾಲ್, ಎನ್‌ಟಿಸಿಎ ಪ್ರತಿನಿಧಿ ಮಲ್ಲೇಶಪ್ಪ, ವನ್ಯಜೀವಿ ತಜ್ಞ ಸಂಜಯ್ ಗುಬ್ಬಿ ಹಾಗೂ ಮೈಸೂರು ಮೃಗಾಲಯದ ಪಶು ವೈದ್ಯಾಧಿಕಾರಿಕಾರಿ ಈ ತಂಡದಲ್ಲಿದ್ದಾರೆ. 14 ದಿನಗಳ ಒಳಗೆ ತನಿಖಾ ತಂಡದ ವರದಿ ಕೊಡಲೂ ಸೂಚಿಸಲಾಗಿದೆ. ಸಂತಾನೋತ್ಪತ್ತಿ ಮಾಡುವ ಹೆಣ್ಣು ಹುಲಿ ಮತ್ತು ನಾಲ್ಕು ಮರಿಗಳು ಅಸಹಜವಾಗಿ ಸಾಯುವುದು ದೊಡ್ಡ ಆಘಾತಕಾರಿ ವಿಷಯವಾಗಿದೆ ಎಂದು ವನ್ಯಜೀವಿ ತಜ್ಞರು ಬೇಸರ ಆಘಾತ ವ್ಯಕ್ತಪಡಿಸಿದ್ದಾರೆ. ಹುಲಿಗಳು ಕಡಿಮೆ ಸಾಂದ್ರತೆಯಿರುವ ಮಲೆ ಮಹದೇಶ್ವರಬೆಟ್ಟದಲ್ಲಿ ಹೀಗಾಗಿರುವುದು ಅತ್ಯಂತ ಖಂಡನೀಯವಾಗಿದ್ದು, ಈ ವಿಚಾರದಲ್ಲಿ ಅತ್ಯಂತ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಪರಿಸರವಾದಿಗಳು ಆಗ್ರಹಿಸಿದ್ದಾರೆ.

# ಪಿಂಕ್ ಲೈನ್ ಆರು ಸ್ಟೇಷನ್‌ಗಳಲ್ಲಿ ಮೆಟ್ರೋ ಸಂಚಾರ



**ಬೆಂಗಳೂರು:** ಕಾಳೇನ ಅಗ್ರಹಾರದಿಂದ ನಾಗಾವರ ವರೆಗಿನ ಪಿಂಕ್ ಲೈನ್ ಮೆಟ್ರೋದಲ್ಲಿ ಒಟ್ಟು 18 ಸ್ಟೇಷನ್‌ಗಳಿದ್ದು, ಆ ಪೈಕಿ ಈ ಡಿಸೆಂಬರ್ ವೇಳೆಗೆ 6 ಮೆಟ್ರೋ ಸ್ಟೇಷನ್‌ಗಳಲ್ಲಿ ಚಾಲಕರಹಿತ ರೈಲು ಸಂಚಾರ ಮಾಡಲಿದೆ. 12 ಅಂಡರ್ ಗ್ರೌಂಡ್ ಮೆಟ್ರೋ ಸ್ಟೇಷನ್‌ಗಳಿಗೆ ಮುಂದಿನ ವರ್ಷ ಡಿಸೆಂಬರ್‌ನಲ್ಲಿ ಚಾಲನೆ ಸಿಗಲಿದೆ. ಸದ್ಯ ಹಳದಿ ಲೈನ್‌ನಲ್ಲಿ ಈಗಾಗಲೇ ಡ್ರೈವರ್‌ಲೆಸ್ ರೈಲು ಪ್ರಾಯೋಗಿಕ ಸಂಚಾರ ಮಾಡುತ್ತಿದೆ. ಡಿಸೆಂಬರ್ ವೇಳೆಗೆ ಪಿಂಕ್ ಲೈನ್ ಮಾರ್ಗದಲ್ಲಿಯೂ ಸಂಚಾರ ಮಾಡಲಿದೆ ಎಂದು ಬಿಎಂಆರ್‌ಸಿಎಲ್ ಮೂಲಗಳು ತಿಳಿಸಿವೆ. ಕಾಳೇನ ಅಗ್ರಹಾರ ದಿಂದ ನಾಗವಾರ ಮಾರ್ಗ 21.25 ಕಿಮೀ ವಿಸ್ತೀರ್ಣವಿದ್ದು, ಒಟ್ಟು 18 ಮೆಟ್ರೋ ಸ್ಟೇಷನ್‌ಗಳು ಇರಲಿವೆ. ಅದರಲ್ಲಿ 6 ಎಲಿವೇಟೆಡ್ ಸ್ಟೇಷನ್‌ಗಳು, 12 ಅಂಡರ್ ಗ್ರೌಂಡ್ ಮೆಟ್ರೋ ಸ್ಟೇಷನ್‌ಗಳಾಗಿವೆ. ಕಾಳೇನ ಅಗ್ರಹಾರ ದಿಂದ ಸ್ವಾಗತ್ ಕ್ರಾಸ್ ವರೆಗೆ ಎಲಿವೇಟೆಡ್ ಮೆಟ್ರೋ ಸ್ಟೇಷನ್ಗಳಿದ್ದು, ಅವುಗಳ ಕಾಮಗಾರಿ ಈಗಾಗಲೇ ಮುಗಿಯುವ ಹಂತದಲ್ಲಿದೆ. ಹೀಗಾಗಿ ಮೊದಲ ಹಂತದಲ್ಲಿ ಈ ಸ್ಟೇಷನ್‌ಗಳ ಮಧ್ಯೆ ಡ್ರೈವರ್‌ಲೆಸ್ ರೈಲುಗಳನ್ನು ಓಡಿಸಲು ಬಿಎಂಆರ್‌ಸಿಎಲ್ ಸಿದ್ಧತೆ ಮಾಡಿಕೊಂಡಿದೆ. ಸ್ವಾಗತ್ ಕ್ರಾಸ್ ದಿಂದ ನಾಗವಾರ 12 ಅಂಡರ್ ಗ್ರೌಂಡ್ ಸ್ಟೇಷನ್ ಇದ್ದು, ಅವುಗಳ ಕಾಮಗಾರಿ ಇನ್ನೂ ನಡೆಯುತ್ತಿದೆ.

ಪುಟ 2

# ಸಂಜೆ ಟಿಪ್ಸ್

## ಕೆನರಾ ಉತ್ಸವಕ್ಕೆ ಚಾಲನೆ

**ಬೆಂಗಳೂರು:** ಮಹಿಳಾ ಸಬಲೀಕರಣಕ್ಕೆ ನೆರವಾಗಲು ಮತ್ತು ಪ್ರೋತ್ಸಾಹಿಸುವ ದೃಷ್ಟಿಯಿಂದ ಕೆನರಾ ಬ್ಯಾಂಕ್ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬಂದಿದೆ,ಕೆನರಾ ಉತ್ಸವ ಒಂದು ವಿನೂತನ ಯೋಜನೆಯಾಗಿದ್ದು ಇದರಲ್ಲಿ ಮಹಿಳಾ ಉದ್ಯಮಿಗಳಿಂದ ತಯಾರಿಸಲ್ಪಟ್ಟ ವಿವಿಧ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕೆ ವೇದಿಕೆಯನ್ನು ಕಲ್ಪಿಸುತ್ತದೆ ಎಂದು ಕೆನರಾ ಬ್ಯಾಂಕ್ ಮಹಾಪ್ರಬಂಧಕ ಭಾಸ್ಕರ್ ಚಕ್ರವರ್ತಿ ರವರು ತಿಳಿಸಿದರು.

ಬೆಂಗಳೂರಿನ ಮಾತೃ ಛಾಯಾ ಸೇವಾಕ್ಷೇತ್ರ ಆಸ್ಪತ್ರೆ ಆವರಣದಲ್ಲಿ ಆಯೋಜಿಸಲಾಗಿದ್ದ ಎರಡು ದಿನಗಳ ಕೆನರಾ ಉತ್ಸವ ಉದ್ಘಾಟಿಸಿ ಮಾತನಾಡಿದ ಅವರು ಮಹಿಳೆಯರು ಯಾವುದೇ ಉದ್ಯಮ ಸ್ಥಾಪಿಸಲು ಮತ್ತು ಬೆಳೆಸಲು ಕೆನರಾ ಬ್ಯಾಂಕ್ ಸಂಪರ್ಕಿಸಬಹುದು ಎಂದು ಹೇಳಿದರು.ಕೆನರಾ ಬ್ಯಾಂಕ್ ನ ನಿವೃತ್ತ ಮಹಾ ಪ್ರಬಂಧಕರಾದ ಕೆ ಎಸ್ ಎಸ್ ಕಾಮತ್ ರವರು ಮಾತನಾಡಿ, ಬ್ಯಾಂಕ್ ಹಮ್ಮಿಕೊಂಡಿರುವ ಹಲವು ಮಹಿಳಾ ಪರ ಯೋಜನೆಗಳ ಬಗ್ಗೆ ವಿವರಿಸಿದರು.

ಕೆನರಾ ಉತ್ಸವ ವಿವಿಧ ಬಗ್ಗೆಯ ಉತ್ಪನ್ನಗಳ ಐವತ್ತು ಮಹಿಳಾ ಉದ್ಯಮಿಗಳು ಭಾಗವಹಿಸಿದ್ದಾರೆ.ಕೆನರಾ ಬ್ಯಾಂಕ್ ನ ಹಿರಿಯ ಅಧಿಕಾರಿಗಳಾದ ಕೆ ಭಾನುಮೂರ್ತಿ , ಶ್ರೀದರ್ ಸಗಬಾಲ, ರವಿಸಿಂಗ್,ವಿಜುಶಾ ಬಲಾ, ಮಾತೃ ಛಾಯಾ ಸೇವಾ ಕ್ಷೇತ್ರ ಆಸ್ಪತ್ರೆಯ ಹಿರಿಯ ಪ್ರಬಂಧಕ ಶ್ರೀಮತಿ ಸುಮಂಗಲ ಜಿ ಅಂಗಡಿ ಉಪಸ್ಥಿತರಿದ್ದರು. ಶ್ರೀಮತಿ ಮಾಲತಿ ಮೋಹನ್ ಕಾರ್ಯಕ್ರಮವನ್ನು ನಿರೂಪಿಸಿದರು.



## ನಿಪ್ಪಟ್ಟು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಕಡಲೆ ಬೀಜ – ಕಾಲು ಕಪ್ ಹುರಿಗಡಲೆ – ಕಾಲು ಕಪ್ ಅಕ್ಕಿ ಹಿಟ್ಟು – 1 ಕಪ್ ಕಡಲೆ ಹಿಟ್ಟು– ಸ್ವಲ್ಪ ಜೀರಿಗೆ ಕೊತ್ತಂಬರಿ ಸೊಪ್ಪು ಕರಿಬೇವು ಉಪ್ಪು ಎಣ್ಣೆ ತುಪ್ಪ ಖಾರದ ಪುಡಿ

### ಮಾಡುವ ವಿಧಾನ

ಮೊದಲಿಗೆ ಕಡಲೆ ಬೀಜ ಹಾಗೂ ಹುರಿಗಡಲೆಯನ್ನು ಮಿಕ್ಸಿ ಜಾರ್‌ಗೆ ಹಾಕಿಕೊಂಡು ತರಿತರಿಯಾಗಿ ಪುಡಿ ಮಾಡಿಕೊಳ್ಳಿ. ಈ ತರಿ ತರಿಯ ಪುಡಿಯನ್ನು ಒಂದು ಬೌಲ್‌ಗೆ ಹಾಕಿಕೊಳ್ಳಿ. ಬಳಿಕ ಇದಕ್ಕೆ 1 ಕಪ್ ಅಕ್ಕಿ ಹಿಟ್ಟು ಹಾಕಿ, ಕಡಲೆ ಹಿಟ್ಟು, ಖಾರದ ಪುಡಿ, ಜೀರಿಗೆ, ಉಪ್ಪು, ಕರಿಬೇವು, ಖಾರದ ಪುಡಿ, ಕೊತ್ತಂಬರಿ ಸೊಪ್ಪು ಸಹ ಹಾಕಿಕೊಂಡು ಮಿಕ್ಸ್ ಮಾಡಿ. ಇಲ್ಲಿ ಅಳತೆಗೆ ಒಂದೇ ಕಪ್ ಬಳಸಿ. ಹಾಗೆ ಕೊತ್ತಂಬರಿ, ಕರಿಬೇವಿನ ಸೊಪ್ಪನ್ನು ಸಣ್ಣದಾಗಿ ಹೆಚ್ಚಿಕೊಂಡು ಬಳಸಿಕೊಳ್ಳಿ. ನೀವು ಬೇಕಾದರೆ ಹಸಿ ಮೆಣಸಿನಕಾಯಿಯನ್ನು ಸಹ ಸಣ್ಣದಾಗಿ ಹೆಚ್ಚಿಕೊಂಡು ಬಳಸಬಹುದು. ಈಗ ಮಿಕ್ಸ್ ಮಾಡಿದ ವಸ್ತುಗಳಿಗೆ 2 ಸ್ಪೂನ್ ತುಪ್ಪ ಹಾಕಿ ಮಿಕ್ಸ ಮಾಡಿ. ತುಪ್ಪ ಹಿಟ್ಟಿಗೆ ಚೆನ್ನಾಗಿ ಹಿಡಿಯುವಂತೆ ಕಲಸಿಕೊಳ್ಳಿ. ಈಗ ಸ್ವಲ್ಪ ಸ್ವಲ್ಪ ನೀರು ಹಾಕಿಕೊಳ್ಳುತ್ತಾ ಕಲಸಿಕೊಳ್ಳಬೇಕು. ಚಪಾತಿ ಹಟ್ಟು ಹದ ಮಾಡುವಂತೆ ಹದ ಮಾಡಿಕೊಳ್ಳಿ. ನಂತರ ಈ ಹಿಟ್ಟನ್ನು ಸಣ್ಣ ನಿಂಬೆ ಗಾತ್ರಕ್ಕೆ ಉಂಡೆ ಮಾಡಿಕೊಳ್ಳಿ. ಈಗ ಒಂದು ಪ್ಲಾಸ್ಟಿಕ್ ಇಟ್ಟುಕೊಂಡು ಅದಕ್ಕೆ ಎಣ್ಣೆ ಸವರಿಕೊಳ್ಳಿ. ಈಗ ಒಂದೊಂದೆ ಉಂಡೆಯನ್ನು ತೆಗೆದುಕೊಂಡು ಕೈಯಲ್ಲಿ ಒತ್ತಿಕೊಳ್ಳಬೇಕು. ಅಥವಾ ಚಪಾತಿ ಲಟ್ಟಿಗೆಯಲ್ಲೂ ಲಟ್ಟಿಸಿಕೊಳ್ಳಬಹುದು. ತೆಳುವಾಗಿ ಮಾಡಿದಷ್ಟು ಕ್ರಿಸ್ಪಿಯಾಗಿರುತ್ತದೆ. ಈಗ ಒಲೆ ಮೇಲೆ ಎಣ್ಣೆ ಇಟ್ಟು ಸಣ್ಣ ಉರಿ ಇಡಿ. ಎಣ್ಣೆ ಕಾದ ಬಳಿಕ ಒಂದೊಂದೇ ನಿಪ್ಪಟ್ಟನ್ನು ಹಾಕಿ ಕರಿದುಕೊಳ್ಳಿ. ನಿಪ್ಪಟ್ಟನ್ನು ಎರಡೂ ಕಡೆ ಚೆನ್ನಾಗಿ ಕರಿದುಕೊಂಡು ಒಲೆ ಆಫ್ ಮಾಡಿಕೊಳ್ಳಿ. ನಿಪ್ಪಟ್ಟು ಚೆನ್ನಾಗಿ ಎಣ್ಣೆ ಇಳಿಯುವವರೆಗೂ ಜರಡಿಯಲ್ಲಿ ಇಡಿ. ಇಷ್ಟಾದರೆ ನಿಮ್ಮ ಮುಂದೆ ನಿಪ್ಪಟ್ಟು ರೆಡಿಯಾಗುತ್ತದೆ.

## ನ್ಯಾಷನಲ್ ಕ್ರಶ್ ನಟಿ ರಶ್ಮಿಕಾ ಮಂದಣ್ಣಗೆ ಮೆಗಾ ಸ್ಟಾರ್ ಫಿದಾ

ಪಡ್ಡೆ ಹೈಕಳಿಂದ ಹಿಡಿದು ಹಣ್ಣಣ್ಣು ಮುದುಕರವರೆಗೂ ತನ್ನ ಕ್ಯೂಟ್ ಸ್ಮೈಲ್ ನಿಂದಲೇ ಮೋಡಿ ಮಾಡುವ ನಟಿ ರಶ್ಮಿಕಾ ಮಂದಣ್ಣ ಸದ್ಯ ನ್ಯಾಷನಲ್ ಕ್ರಶ್ ಎಂತಲೇ ಫೇಮಸ್. ಆದರೆ, ಈ ಕಿರಿಕ್ ಬೆಡಗಿಗೆ ಸಾಮಾನ್ಯ ಜನರಷ್ಟೇ ಅಲ್ಲ ಸೂಪರ್ ಸ್ಟಾರ್, ಮೆಗಾ ಸ್ಟಾರ್ ಗಳು ಸಹ ಫಿದಾ ಆಗಿದ್ದಾರೆ. ಇತ್ತೀಚಿನ ವಿಡಿಯೋವೊಂದು ಇದೀಗ ಸಖತ್ ವೈರಲ್ ಆಗುತ್ತಿದ್ದು ಇದಕ್ಕೆ ಸಾಕ್ಷಿಯಾಗಿದೆ.

ನಟಿ ರಶ್ಮಿಕಾ ಮಂದಣ್ಣಅವರ 'ಕುಬೇರಾ' ಸಿನಿಮಾ ಇತ್ತೀಚೆಗೆ ಬಿಡುಗಡೆಯಾಗಿದ್ದು ಗಲ್ಲಾಪೆಟ್ಟಿಗೆಯಲ್ಲಿ ಸಖತ್ ಸದ್ದು ಮಾಡುತ್ತಿದೆ. ಇದರ ಪ್ರಯುಕ್ತ ನಡೆದ ಕುಬೇರಾ ಸಕ್ಸಸ್ ಕಾರ್ಯಕ್ರಮದಲ್ಲಿ ನಟಿ ರಶ್ಮಿಕಾ ಮಂದಣ್ಣ. ನಟರಾದ ಧನುಷ್, ಆಕ್ಕಿನೇನಿ ನಾಗಾರ್ಜುನ ಹಾಗೂ ಪದ್ಮಭೂಷಣ ಪುರಸ್ಕೃತ ನಟ ಚಿರಂಜೀವಿ ಸಹ ಉಪಸ್ಥಿತರಿದ್ದರು.

'ಕುಬೇರ' ಚಿತ್ರದ ಯಶಸ್ಸಿಗಾಗಿ ಚಿತ್ರತಂಡ ಪ್ರೇಕ್ಷಕರಿಗೆ ಧನ್ಯವಾದ ಅರ್ಪಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ನಟ ನಾಗಾರ್ಜುನ, ನಟಿ ರಶ್ಮಿಕಾ ಮಂದಣ್ಣ ಅವರ ಅಮೋಘ ಅಭಿನಯವನ್ನು ಹೊಗಳಿದರಲ್ಲದೆ, ರಶ್ಮಿಕಾ ಅವರನ್ನು ಸ್ಕ್ರೀನ್ ಮೇಲೆ ಕಂಡಾಗ ಒಂದು ಕ್ಷಣ ಶ್ರೀದೇವಿ ಅವರು ನೆನಪಾದರು. ರಶ್ಮಿಕಾ ನ್ಯಾಷನಲ್ ಕ್ರಶ್ ಮಾತ್ರವಲ್ಲ 'ನನ್ನ ಕ್ರಶ್' ಸಹ ಹೌದು ಎಂದಿದ್ದಾರೆ.

ಅದೇ ವೇದಿಕೆಯಲ್ಲಿ ಉಪಸ್ಥಿತರಿದ್ದಮೆಗಾಸ್ಟಾರ್ ಚಿರಂಜೀವಿ ರಶ್ಮಿಕಾ ಮಂದಣ್ಣಬಗ್ಗೆ ಮಾತನಾಡುತ್ತಾ ನಾಚಿ ನೀರಾಗಿರುವ ದೃಶ್ಯ ಇದೀಗ ವೈರಲ್ ಆಗುತ್ತಿದೆ.

ಚಿರಂಜೀವಿ ಹೇಳಿದ್ದು ಹೀಗೆ... ನನ್ನ ಡೈಲಾಗ್ ನೀನು ಹೇಳಿಬಿಟ್ಟೆ ನಾಗ್, ಆಗ್ಲೇ ಮಾತಾಡ್ಬೇಕಾದ್ರೆ ನೀನು ನ್ಯಾಷನಲ್ ಕ್ರಶ್ ನನ್ನ ಕ್ರಶ್ ಅಂತಾ ಹೇಳಿದೆ.. ?ನ್ಯಾಷನಲ್ ಕ್ರಶ್... ನನ್ನ ಕ್ರಶ್?... ಆದರೆ, ನಾನು ಆ ಮಾತು ಹೊರಗೆ ಹೇಳಲ್ಲ.. ಆದ್ರೆ ಮನಸ್ಸಿನೊಳಗೆ ಅಂದುಕೊಳ್ಳುತ್ತೇನೆ.. ಅಂತ ನಾಗಾರ್ಜುನ್‌ಗೆ ಚಿರಂಜೀವಿ ಹೇಳಿದರು.. ಅಲ್ಲದೆ, ಚಿರು ಈ ಮಾತು ಕೇಳಿ ರಶ್ಮಿಕಾ ಮಂದಣ್ಣ ಸಹ ಫುಲ್ ಖುಷ್ ಆದ್ರು....

ಶೇಖರ್ ಕಮಲ್ ನಿರ್ದೇಶನ ಕುಬೇರ ಮೂವಿ ಸಕ್ಸಸ್ ಮೀಟ್‌ನಲ್ಲಿ ಮೆಗಾಸ್ಟಾರ್ ಚಿರಂಜೀವಿ ಹೇಳಿದ ಈ ವಿಡಿಯೋ ಈಗ ಸಾಮಾಜಿಕ ಜಾಲತಾಣದಲ್ಲಿ ಸಖತ್ ವೈರಲ್ ಆಗಿದೆ.. ಅದರಲ್ಲೂ ಚಿರಂಜೀವಿ ಅವ್ರು ಹೇಳಿದ ಸ್ಟೈಲು, ಅವ್ರ ಬಾಡಿ ಲಾಗ್ವೇಜ್ ಸಿಕ್ಕಾಪಟ್ಟೆ ವೈರಲ್ ಆಗ್ತಾ ಇದೆ.







## ಆಹಾರಕ್ಕೆ ಬೇಕು ಕ್ಯಾರೆಟ್

### ಹೆಲ್ತ್ ಟಿಪ್ಸ್



ಕ್ಯಾರೆಟ್ ಕಡಿಮೆ ಗ್ಲೈಸೆಮಿಕ್ ಸೂಚ್ಯಂಕವನ್ನು ಹೊಂದಿರುವ ತರಕಾರಿಯಾಗಿದೆ. ಇದು ನೈಸರ್ಗಿಕವಾಗಿ ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿಯಂತ್ರಿಸುತ್ತದೆ. ವಿಟಮಿನ್ ಸಿ ಮತ್ತು ಇತರ ಉತ್ಕರ್ಷಣ ನಿರೋಧಕಗಳು ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತವೆ ಮತ್ತು ಮಧುಮೇಹ ರೋಗಿಗಳನ್ನು ರಕ್ಷಿಸುತ್ತವೆ. ಕ್ಯಾರೆಟ್ ತಿನ್ನುವುದು ಇನ್ಸುಲಿನ್ ಪ್ರತಿಕ್ರಿಯೆಯನ್ನು ಸುಧಾರಿಸುತ್ತದೆ. ಆದ್ದರಿಂದ, ಮಧುಮೇಹ ಹೊಂದಿರುವ ಜನರು ತಮ್ಮ ಆಹಾರದಲ್ಲಿ ಕ್ಯಾರೆಟ್ ಅನ್ನು ಸೇರಿಸುವ ಮೂಲಕ ಉತ್ತಮ ಫಲಿತಾಂಶಗಳನ್ನು ಪಡೆಯಬಹುದು.

ಕ್ಯಾರೆಟ್‌ನಲ್ಲಿರುವ ಆಹಾರದ ನಾರು ಜೀರ್ಣಕ್ರಿಯೆಯನ್ನು ಸುಧಾರಿಸುವುದಲ್ಲದೆ, ಹಸಿವನ್ನು ನಿಯಂತ್ರಿಸುತ್ತದೆ ಮತ್ತು ಅತಿಯಾಗಿ ತಿನ್ನುವುದನ್ನು ತಡೆಯುತ್ತದೆ. ಇದು ದೇಹದಲ್ಲಿ ಕೊಬ್ಬನ್ನು ಕರಗಿಸಲು ಸಹಾಯ ಮಾಡುತ್ತದೆ. ಕ್ಯಾರೆಟ್ ತಿನ್ನುವುದರಿಂದ ಕಡಿಮೆ ಕ್ಯಾಲೊರಿಗಳನ್ನು ಒದಗಿಸುತ್ತದೆ ಆದರೆ ಪೋಷಕಾಂಶಗಳ ಪ್ರಮಾಣವನ್ನು ಹೆಚ್ಚಿಸುತ್ತದೆ. ಅದಕ್ಕಾಗಿಯೇ ತೂಕ ಇಳಿಸಿಕೊಳ್ಳಲು ಬಯಸುವವರು ಇದನ್ನು ಸಲಾಡ್, ಸೂಪ್ ಮತ್ತು ಜ್ಯೂಸ್ ರೂಪದಲ್ಲಿ ತೆಗೆದುಕೊಳ್ಳಬಹುದು.

ಕ್ಯಾರೆಟ್‌ನಲ್ಲಿರುವ ಆಹಾರದ ನಾರು ಜೀರ್ಣಕ್ರಿಯೆಯನ್ನು ಸುಧಾರಿಸುವುದಲ್ಲದೆ, ಹಸಿವನ್ನು ನಿಯಂತ್ರಿಸುತ್ತದೆ ಮತ್ತು ಅತಿಯಾಗಿ ತಿನ್ನುವುದನ್ನು ತಡೆಯುತ್ತದೆ. ಇದು ದೇಹದಲ್ಲಿನ ಕೊಬ್ಬನ್ನು ಕರಗಿಸಲು ಸಹಾಯ ಮಾಡುತ್ತದೆ. ಕ್ಯಾರೆಟ್ ತಿನ್ನುವುದರಿಂದ ಕಡಿಮೆ ಕ್ಯಾಲೊರಿಗಳನ್ನು ಒದಗಿಸುತ್ತದೆ ಆದರೆ ಪೋಷಕಾಂಶಗಳ ಪ್ರಮಾಣವನ್ನು ಹೆಚ್ಚಿಸುತ್ತದೆ. ಅದಕ್ಕಾಗಿಯೇ ತೂಕ ಇಳಿಸಿಕೊಳ್ಳಲು ಬಯಸುವವರು ಇದನ್ನು ಸಲಾಡ್, ಸೂಪ್ ಮತ್ತು ಜ್ಯೂಸ್ ರೂಪದಲ್ಲಿ ತೆಗೆದುಕೊಳ್ಳಬಹುದು.

ಕ್ಯಾರೆಟ್‌ನಲ್ಲಿರುವ ಪೊಟ್ಯಾಸಿಯಮ್ ಹೃದಯದ ಆರೋಗ್ಯವನ್ನು ಕಾಪಾಡಿಕೊಳ್ಳಲು ಸಹಾಯ ಮಾಡುತ್ತದೆ. ಇದು ರಕ್ತದೊತ್ತಡವನ್ನು ಸಮತೋಲನಗೊಳಿಸುತ್ತದೆ. ಇದಲ್ಲದೆ, ಕ್ಯಾರೆಟ್‌ನಲ್ಲಿರುವ ಫೈಬರ್ ಕರುಳಿನ ಸೂಕ್ಷ್ಮಜೀವಿಯನ್ನು ಬಲಪಡಿಸುತ್ತದೆ ಮತ್ತು ಮಲಬದ್ಧತೆಯನ್ನು ಕಡಿಮೆ ಮಾಡುತ್ತದೆ. ಆರೋಗ್ಯಕರ ಜೀರ್ಣಾಂಗ ವ್ಯವಸ್ಥೆಯು ಉತ್ತಮ ರೋಗನಿರೋಧಕ ಶಕ್ತಿಯನ್ನು ನೀಡುತ್ತದೆ.

ಕ್ಯಾರೆಟ್ ಅನ್ನು ಹಾಗೆಯೇ ತಿನ್ನಬಹುದು. ಅಥವಾ ಸಲಾಡ್‌ಗಳಿಗೆ ಸೇರಿಸಬಹುದು, ಕ್ಯಾರೆಟ್ ಸೂಪ್‌ಗಳು ತುಂಬಾ ರುಚಿಕರವಾಗಿರುತ್ತವೆ ಕ್ಯಾರೆಟ್ ರಸವು ಬೆಳಿಗ್ಗೆ ತೆಗೆದುಕೊಂಡರೆ ಶಕ್ತಿಯನ್ನು ನೀಡುತ್ತದೆ ಇದನ್ನು ಕರಿಗಳಿಗೆ ಸೇರಿಸುವ ಮೂಲಕವೂ ಬೇಯಿಸಬಹುದುನೀವು ಪ್ರತಿದಿನ ಕ್ಯಾರೆಟ್ ಅನ್ನು ನಿಮ್ಮ ಆಹಾರದ ಭಾಗವಾಗಿಸಿದರೆ, ಮಧುಮೇಹ, ತೂಕ ಹೆಚ್ಚಾಗುವುದು, ಕಣ್ಣಿನ ಸಮಸ್ಯೆಗಳು, ಹೃದಯ ಆರೋಗ್ಯ ಸಮಸ್ಯೆಗಳು ಇತ್ಯಾದಿಗಳು ನೈಸರ್ಗಿಕವಾಗಿ ಕಡಿಮೆಯಾಗುತ್ತವೆ.

## ಬಣ್ಣ ಮಾಡಿದ ಕೂದಲನ್ನೂ ಹೆಚ್ಚು ತೊಳೆಯಬೇಡಿ

### ಬ್ಯೂಟಿ ಟಿಪ್ಸ್



ಬಣ್ಣ ಮಾಡಿದ ಕೂದಲುಗಳನ್ನು ಅಂದರೆ, ಪದೇಪದೇ ತೊಳೆಯುವುದು ಉತ್ತಮವಲ್ಲ. ಹೇರ್ ಕಲರ್ ಪ್ಯಾಕ್ ಮೇಲಿರುವ ಸೂಚನೆಗಳನ್ನು ಅನುಸರಿಸಿ. ಕೂದಲಿನ ಬಣ್ಣ ಹೆಚ್ಚು ಕಾಲ ಉಳಿಯಲು ನೀವು ಅದರಲ್ಲಿ ನೀಡಿದ ಸೂಚನೆಗಳನ್ನು ಅನುಸರಿಸಬೇಕು.ಸಾಮಾನ್ಯವಾಗಿ ಕೆಲವೊಂದು ರೀತಿಯ ಶಾಂಪುಗಳನ್ನು ಬಳಸುವುದರಿಂದ ಕೂದಲಿನ ಬಣ್ಣ ಬೇಗ ಹೋಗುತ್ತದೆ. ಆದ್ದರಿಂದ ನಿಮ್ಮ ಬಣ್ಣದ ಕೂದಲಿಗೆ ನಿರ್ದಿಷ್ಟವಾಗಿ ಯಾವ ಶಾಂಪೂ ಬಳಸಬೇಕು ಎಂಬುದನ್ನು ಮೊದಲು ಆರಿಸಿಕೊಳ್ಳಿ. ಇದರಿಂದ ನಿಮ್ಮ ಕೂದಲಿನ ಬಣ್ಣ ಬೇಗ ಹಾಳಾಗುವುದಿಲ್ಲ. ನಿಮ್ಮ ಕೂದಲನ್ನು ಬಣ್ಣ ಮಾಡಿದ ನಂತರ, ತಕ್ಷಣವೇ ನೀವು ಶಾಂಪೂವನ್ನು ಬದಲಾಯಿಸಲು ಸಾಧ್ಯವಿಲ್ಲ. ನಿಮ್ಮ ಕೂದಲಿಗೆ ನೀವು ಬಳಸುತ್ತಿರುವ ಉತ್ಪನ್ನಗಳ ಬಗ್ಗೆ ನಿಮಗೆ ತಿಳಿದಿರಬೇಕು. ಸೌಮ್ಯವಾದ ಮತ್ತು ಶಾಂತವಾದ, ಸಲ್ಫೇಟ್ ಇಲ್ಲದ ಶಾಂಪೂಗಳನ್ನು ಆರಿಸಿಕೊಳ್ಳಿ. ಈ ರೀತಿಯ ಶಾಂಪು ಗಳನ್ನು ನೀವು ಆರಿಸಿಕೊಳ್ಳುವುದರಿಂದ ನಿಮ್ಮ ಕೂದಲಿಗೆ ಯಾವುದೇ ರೀತಿಯ ತೊಂದರೆ ಉಂಟಾಗುವುದಿಲ್ಲ.

ಪ್ರತಿ ಬಾರಿ ನೀವು ನಿಮ್ಮ ಕೂದಲನ್ನು ಶಾಂಪೂ ಮಾಡುವಾಗ, ನಿಮ್ಮ ಕೂದಲಿಗೆ ಹಚ್ಚಿರುವ ಬಣ್ಣದ ಪ್ರಮಾಣವನ್ನು ನೀವು ಕಳೆದುಕೊಳ್ಳುವಿರಿ. ಈ ರೀತಿ ಬಣ್ಣ ಹಚ್ಚಿದ ನಂತರ ಕೂದಲನ್ನು ಪದೇಪದೇ ತೊಳೆಯುವುದರಿಂದ ನಿಮ್ಮ ಕೂದಲು ಮತ್ತಷ್ಟು ಒರಟಾಗುತ್ತದೆ.ನಿಮ್ಮ ಕೂದಲಿಗೆ ಬಣ್ಣ ಹಚ್ಚಿದ ನಂತರ ಹೆಚ್ಚಿನ ಬಾರಿ ತೊಳೆಯುವುದಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಿ. ಬಣ್ಣ ಹಚ್ಚಿದ ನಂತರ ನಿಮ್ಮ ಕೂದಲು ತೊಳೆಯುವಿಕೆಯಲ್ಲಿ ಅಂತರವಿರುವಂತೆ ನೋಡಿಕೊಳ್ಳಿ.ಕೆಲವು ಸಂದರ್ಭಗಳಲ್ಲಿ ನಿಮ್ಮ ಕೂದಲನ್ನು ತೊಳೆಯಲೇಬೇಕು ಎಂದು ನೀವು ಭಾವಿಸಿದರೆ ಒಣ ಶಾಂಪೂವನ್ನು ಬಳಸಿ.

ನಿಮ್ಮ ಕೂದಲನ್ನು ಬಣ್ಣ ಮಾಡಲು ಬಳಸುವ ರಾಸಾಯನಿಕಗಳು ನಿಮ್ಮ ಕೂದಲನ್ನು ಒರಟು ಮತ್ತು ಒಣಗಿಸಬಹುದು. ಆದ್ದರಿಂದ ನೀವು ನಿಮ್ಮ ಕೂದಲನ್ನು ಪೋಷಣೆ ಮಾಡಬೇಕು. ನಿಮ್ಮ ಕೂದಲನ್ನು ತೊಳೆಯುವಾಗಲೆಲ್ಲಾ, ನಿಮ್ಮ ಕೂದಲಿಗೆ ಸುರಕ್ಷಿತವಾದ ಕಂಡಿಷ್ನರ್ ಬಳಸಬೇಕು ಎಂಬುದನ್ನು ಖಚಿತಪಡಿಸಿಕೊಳ್ಳಿ. ಈ ರೀತಿಯ ಕಂಡಿಷ್ನರ್ ಗಳು ನಿಮ್ಮ ಕೂದಲನ್ನು ಆರೋಗ್ಯಕರ, ಹೊಳೆಯುವಂತೆ ಮತ್ತು ಮೃದುವಾಗಿ ಕಾಣುವಂತೆ ಮಾಡಲು ನಿಮಗೆ ಸಹಾಯ ಮಾಡುತ್ತದೆ.

## ನಾಡ ಸಂಭ್ರಮ ಸಂಗೀತ ಕಛೇರಿ ಸರಣಿ



ನಡತ್ತೂರ್ ಪ್ರತಿಷ್ಠಾನವು ''ನಾಡ ಸಂಭ್ರಮ'' ದ 3ನೇ ಆವೃತ್ತಿಯನ್ನು ಆಯೋಜಿಸುತ್ತಿದೆ. ಇದು ಭಾರತೀಯ ಶಾಸ್ತ್ರೀಯ ಸಂಗೀತದ ಶ್ರೀಮಂತ ಸಂಪ್ರದಾಯವನ್ನು ಉತ್ತೇಜಿಸಲು ಮತ್ತು ಆಚರಿಸಲು ಸಮರ್ಪಿತವಾದ ಸಂಗೀತ ಕಛೇರಿ ಸರಣಿಯಾಗಿದೆ. ಈ ಕಾರ್ಯಕ್ರಮಗಳ ಸರಣಿಯು ಅಸಾಧಾರಣ ಪ್ರತಿಭೆಗಳನ್ನು ಪ್ರದರ್ಶಿಸುವ, ಸಾಂಸ್ಕೃತಿಕ ಮೆಚ್ಚುಗೆಯನ್ನು ಬೆಳೆಸುವ ಮತ್ತು ಸ್ಥಾಪಿತ ಹಾಗೂ ಉದಯೋನ್ಮುಖ ಕಲಾವಿದರಿಬ್ಬರಿಗೂ ವೇದಿಕೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ.

ಈ ಬಾರಿ ನಾದ ಸಂಭ್ರಮವು ಸಂಗೀತದ ಮಾಂತ್ರಿಕ ಅಭಿಷೇಕ್ ರಘುರಾಮ್ ಅವರನ್ನು ನಿಮ್ಮ ಮುಂದೆ ಪ್ರಸ್ತುತಪಡಿಸಲಿದೆ. ಕಾರ್ಯಕ್ರಮವು ಶನಿವಾರ, ಜೂನ್ 28ರಂದು ಸಂಜೆ 6:30 ಕ್ಕೆ ಎನ್‌ಎಂಕೆಆರ್‌ವಿ ಕ್ಯಾಂಪಸ್ನ ಮಂಗಳ ಮಂಟಪ ಆಡಿಟೋರಿಯಂನಲ್ಲಿ ನಡೆಯಲಿದೆ. ಅಭಿಷೇಕ್ ರಘುರಾಮ್ ಅವರು ಭಾರತದ ಪ್ರಖ್ಯಾತ ಸಂಗೀತಗಾರ, ಸಂಯೋಜಕ ಮತ್ತು ಗಾಯಕ. ಕರ್ನಾಟಕ ಸಂಗೀತದಲ್ಲಿ ಅವರ ಅಸಾಧಾರಣ ಪರಿಣತಿಗಾಗಿ ಅವರು ಹೆಸರುವಾಸಿಯಾಗಿದ್ದಾರೆ. ಅವರ ಪ್ರದರ್ಶನಗಳು ತಾಂತ್ರಿಕ ಉತ್ಕೃಷ್ಟತೆ ಮತ್ತು ಆಳವಾದ ಭಾವನಾತ್ಮಕ ಅನುರಣನಕ್ಕಾಗಿ ವ್ಯಾಪಕ ಮೆಚ್ಚುಗೆ ಗಳಿಸಿವೆ. ಅಭಿಷೇಕ್ ಅವರ ಕಲಾತ್ಮಕತೆಯು ದೈಹಿಕತೆ ಮತ್ತು ಸಾಂಪ್ರದಾಯಿಕ ಸಂಯೋಜನೆಯ ಬಲವಾದ ಅಡಿಪಾಯದ ವಿಶಿಷ್ಟ ಮಿಶ್ರಣವನ್ನು ಪ್ರತಿಬಿಂಬಿಸುತ್ತದೆ, ಇದು ಕೇಳುಗರನ್ನು ಈ ಪ್ರಕಾರದ ಆಳವಾದ ಪರಿಶೋಧನೆಯ ಮೂಲಕ ಕೊಂಡೊಯ್ಯುತ್ತದೆ. ಅವರ ಆಳವಾದ ಸಂಗೀತದ ಹಿನ್ನೆಲೆಯು ವೈವಿಧ್ಯಮಯ ಪ್ರಭಾವಗಳಿಂದ ತುಂಬಿದ ಬಾಲ್ಯದ ವಾತಾವರಣದಿಂದ ರೂಪುಗೊಂಡಿದೆ. ಅವರ ತಾಯಿ ಉಷಾ ಅವರ ಸಂಗೀತ ಮತ್ತು ಅವರ ಅಜ್ಜ, ಶ್ರೀ ಪಾಲಕ್ಕಾಡ್ ರಘು ಅವರ ಮೃದಂಗದ ನಾದಗಳಿಂದ ಪ್ರೇರಿತರಾದ ಅಭಿಷೇಕ್, ಸಂಗೀತದ ಸಂಕೀರ್ಣತೆಗಳ ಬಗ್ಗೆ ಅಪಾರ ಮೆಚ್ಚುಗೆಯನ್ನು ಬೆಳೆಸಿಕೊಂಡರು. ಅವರ ಗುರು, ಪಿ. ಎಸ್. ನಾರಾಯಣಸ್ವಾಮಿ ಅವರ ಮಾರ್ಗದರ್ಶನದಲ್ಲಿ, ಅವರು ಸಂಗೀತದಲ್ಲಿ ಸಮರ್ಪಣೆ ಮತ್ತು ಜ್ಞಾನದ ನಿರಂತರ ಅನ್ವೇಷಣೆಯ ಮಹತ್ವವನ್ನು ಕಲಿತರು.

ಅಭಿಷೇಕ್ ತಮ್ಮ ಕಲೆಯನ್ನು ನಿರಂತರ ಅನ್ವೇಷಣೆಯ ಪ್ರಯಾಣವೆಂದು ಪರಿಗಣಿಸುತ್ತಾರೆ, ಅಲ್ಲಿ ಸಂಗೀತದ ಸೌಂದರ್ಯವು ಸ್ವರಗಳ ನಡುವಿನ ಸೂಕ್ಷ್ಮ ವ್ಯತ್ಯಾಸಗಳಲ್ಲಿದೆ. ಅವರ ಉತ್ಸಾಹವು ಅವರ ಪ್ರಬಲ ಧ್ವನಿಯಲ್ಲಿ ಸ್ಪಷ್ಟವಾಗಿ ವ್ಯಕ್ತವಾಗುತ್ತದೆ, ಅದು ಪ್ರಕಾರಗಳನ್ನು ಮೀರಿದೆ ಮತ್ತು ಭಾರತದಾದ್ಯಂತ ಹಾಗೂ ಅಂತರರಾಷ್ಟ್ರೀಯವಾಗಿ ಕಛೇರಿಗಳಲ್ಲಿ ಅನುರಣಿಸುತ್ತದೆ. ಪ್ರತಿ ಪ್ರದರ್ಶನದೊಂದಿಗೆ, ಅಭಿಷೇಕ್ ತಮ್ಮ ಪ್ರೇಕ್ಷಕರನ್ನು ಬೌದ್ಧಿಕ ಮತ್ತು ಭಾವನಾತ್ಮಕ ಪರಿಶೋಧನೆಗೆ ತೊಡಗಿಸಿಕೊಳ್ಳಲು ಆಹ್ವಾನಿಸುತ್ತಾರೆ, ಇದು ಅವರ ಕೆಲಸವನ್ನು ಪ್ರಾಥಮಿಕ ಮತ್ತು ಸುಸಂಸ್ಕೃತ, ಸೂಕ್ಷ್ಮ ಮತ್ತು ಸ್ವರಮಯವಾಗಿಸುತ್ತದೆ.

ಅಭಿಷೇಕ್ ರಘುರಾಮ್ ಅವರೊಂದಿಗೆ: ಸುನಿತಾ ಹೆಚ್.ಎಂ. ಪಿಟೀಲು, ಪತ್ರಿ ಸತೀಶ್ ಕುಮಾರ್ ಮೃದಂಗ, ಗಿರಿಧರ್ ಉಡುಪ ಘಟಂ

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ–9964739507

www.jyotishyavaastu.com

**ಮೇಷ:** ಮಾನಸಿಕ ಕಿರಿಕಿರಿ ಮತ್ತು ಮನಸ್ತಾಪ, ಕೆಲಸಕಾರ್ಯಗಳಲ್ಲಿ ಹಿನ್ನಡೆ, ಅಸಮಾಧಾನ, ತಂತ್ರದ ಆತಂಕ, ನೀರು ಮತ್ತು ವಾಹನಗಳಿಂದ ಎಚ್ಚರಿಕೆ.

**ವೃಷಭ:** ಬಂಧು ಬಾಂಧವರಿಂದ ತೊಂದರೆ, ಪೆಟ್ಟು ಮಾಡಿಕೊಳ್ಳುವ ಸಂಭವ, ಪ್ರಯಾಣದಲ್ಲಿ ಎಚ್ಚರಿಕೆ, ತಂದೆ ಆರೋಗ್ಯದಲ್ಲಿ ವ್ಯತ್ಯಾಸ.

**ಮಿಥುನ:** ಆರ್ಥಿಕ ಸಂಕಷ್ಟ, ಮಾನಸಿಕ ನೋವು, ಕುಟುಂಬದಲ್ಲಿ ಕಲಹ, ಸ್ತ್ರೀಯರಿಂದ ಅನುಕೂಲ, ಮೋಜು ಮಸ್ತಿಗಳಿಂದ ತೊಂದರೆ.

**ಕಟಕ:** ಪಾಲುದಾರಿಕೆಯಲ್ಲಿ ಅನುಕೂಲ, ಅವಕಾಶ ಕೈತಪ್ಪುವ ಸಂಭವ, ದೃಷ್ಟಿದೋಷ, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸ.

**ಸಿಂಹ:** ಅಧಿಕ ಖರ್ಚು ಮತ್ತು ನಷ್ಟ, ಅನಾರೋಗ್ಯ ಸಮಸ್ಯೆ, ಆತಂಕ, ನಿದ್ರಾಭಂಗ, ಬಂಧು ಬಾಂಧವರೊಂದಿಗೆ ಶತ್ರುತ್ವ.

**ಕನ್ಯಾ:** ಮಕ್ಕಳಿಂದ ಲಾಭ, ಪ್ರೀತಿ ಪ್ರೇಮದಲ್ಲಿ ಯಶಸ್ಸು, ಸ್ವಯಂಕೃತಾಪರಾಧದಿಂದ ತೊಂದರೆ, ಮಿತ್ರರಿಂದ ಹಿನ್ನಡೆ, ಅಧಿಕಾರಿಗಳಿಂದ ನಷ್ಟ ಮತ್ತು ಅವಮಾನ.

**ತುಲಾ:** ಉದ್ಯೋಗದಲ್ಲಿ ನಿರಾಸಕ್ತಿ, ತಂತ್ರದ ಭೀತಿ ಮತ್ತು ಸಮಸ್ಯೆ, ನೀರಿನಿಂದ ಸಮಸ್ಯೆ ಎಚ್ಚರಿಕೆ, ಅಪವಾದಗಳು, ನೋವು ಮತ್ತು ನಿರಾಸೆ.

**ವೃಶ್ಚಿಕ:** ತಂದೆ ಆರೋಗ್ಯದಲ್ಲಿ ವ್ಯತ್ಯಾಸ, ದೂರ ಪ್ರಯಾಣ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ, ಅವಕಾಶಗಳು ಕೈತಪ್ಪುವ ಸನ್ನಿವೇಶ.

**ಧನಸ್ಸು:** ಧನಾಗಮನ, ಉತ್ತಮ ಅವಕಾಶಗಳ ಸೂಚನೆ, ಸೋಲು ನಷ್ಟ ನಿರಾಸೆ ಅಪಕೀರ್ತಿ, ಕುಟುಂಬದಲ್ಲಿ ಆತಂಕ.

**ಮಕರ:** ದಾಂಪತ್ಯದಲ್ಲಿ ಸಮಸ್ಯೆ, ಮಕ್ಕಳಿಂದ ಬೇಸರ, ಪ್ರೀತಿ ವಿಷಯಗಳು ಬಯಲು, ಉದ್ಯಮ ವ್ಯಾಪಾರದಲ್ಲಿ ನಷ್ಟ.

**ಕುಂಭ:** ಆರೋಗ್ಯದಲ್ಲಿ ವ್ಯತ್ಯಾಸ, ಗುಪ್ತ ಶತ್ರುಗಳಿಂದ ಮೋಸ ವಂಚನೆ ಅಪವಾದಗಳು, ಆರೋಗ್ಯದಲ್ಲಿ ವ್ಯತ್ಯಾಸ.

**ಮೀನ:** ಮಕ್ಕಳ ಜೀವನದಲ್ಲಿ ಏರುಪೇರು, ಸಂತಾನ ಸಮಸ್ಯೆ, ದುಶ್ಚಟಗಳಿಂದ ತೊಂದರೆ, ಅಪವಾದಗಳಿಂದ ಗೌರವಕ್ಕೆ ದಕ್ಕೆ.

## ಜಗನ್ನಾಥನ ರಥ ಯಾತ್ರೆ

ರಥಯಾತ್ರೆಯನ್ನು ಹಿಂದೂ ಕ್ಯಾಲೆಂಡರ್‌ನ ಎರಡು ವಾರಗಳ ಆಷಾಢ ಮಾಸದ ಎರಡನೇ ದಿನದಂದು ಆಚರಿಸಲಾಗುತ್ತದೆ ಮತ್ತು ಈ ವರ್ಷ ಇದು ಜೂನ್ 27 ರಂದು ನಡೆಯುತ್ತದೆ. ಈ ಹಬ್ಬವು ಸಾಮಾನ್ಯವಾಗಿ ಜೂನ್ ಮತ್ತು ಜುಲೈ ನಡುವೆ ಬರುತ್ತದೆ. ಭಾರತದಾದ್ಯಂತ ಲಕ್ಷಾಂತರ ಭಕ್ತರು ಒಡಿಶಾದ ಪುರಿಯಲ್ಲಿ ಜಗನ್ನಾಥನ ರಥಯಾತ್ರೆಯಲ್ಲಿ ಭಾಗವಹಿಸಲು ಸೇರುತ್ತಾರೆ. ರಥಯಾತ್ರೆ ಹಿಂದೂ ಧರ್ಮದ ಪ್ರಮುಖ ಹಬ್ಬಗಳಲ್ಲಿ ಒಂದಾಗಿದೆ ಮತ್ತು ಇದು ಅನಾದಿ ಕಾಲದಿಂದಲೂ ಆಚರಣೆಯಲ್ಲಿದೆ ಎಂದು ನಂಬಲಾಗಿದೆ. ದಿನವು ಮಂಗಳಪರ್ಣ ಆಚರಣೆಯೊಂದಿಗೆ ಪ್ರಾರಂಭವಾಗುತ್ತದೆ, ನಂತರ ಶ್ರೀ ಗುಂಡಿಚ ದೇವಸ್ಥಾನವನ್ನು ತಲುಪಲು ಸುಮಾರು ಮೂರು ಕಿಲೋಮೀಟರ್‌ಗಳ ಬೃಹತ್ ಮರದ ರಥಗಳ ಪ್ರಯಾಣ. ಜಗನ್ನಾಥ ರಥಯಾತ್ರೆ ಹಿಂದೂ ಧರ್ಮದ ಪ್ರಮುಖ ಹಬ್ಬಗಳಲ್ಲಿ ಒಂದಾಗಿದೆ. ಪ್ರತಿ ವರ್ಷ, ಭಕ್ತರು ಜಗನ್ನಾಥ ದೇವಸ್ಥಾನವನ್ನು ತಲುಪಲು ಶ್ರೀಕೃಷ್ಣ, ಬಲರಾಮ ಮತ್ತು ಸುಭದ್ರೆಯರ ಪ್ರತಿರೂಪಗಳನ್ನು ಹೊತ್ತ ಭವ್ಯ ಮೆರವಣಿಗೆಯನ್ನು ಎಳೆಯುತ್ತಾರೆ. ಈ ಯಾತ್ರೆಯು ಸನಾತನ ಧರ್ಮದ (ಹಿಂದೂ ಧರ್ಮ) ಸರ್ವೋಚ್ಚ ದೇವರು ಜಗನ್ನಾಥನ ಪ್ರಯಾಣವನ್ನು ಗೌರವಿಸುತ್ತದೆ. ಹಿಂದೂ ನಂಬಿಕೆಗಳ ಪ್ರಕಾರ, ಜಗನ್ನಾಥನನ್ನು ವಿಷ್ಣುವಿನ ಅವತಾರವೆಂದು ಪರಿಗಣಿಸಲಾಗುತ್ತದೆ. ಇದನ್ನು ಭಾರತದ ಒಡಿಶಾ ರಾಜ್ಯದ ಪುರಿಯ ಜಗನ್ನಾಥ ದೇವಾಲಯದಲ್ಲಿ ವಾರ್ಷಿಕವಾಗಿ ಆಚರಿಸಲಾಗುತ್ತದೆ. ಪವಿತ್ರ ಆಷಾಢ ಮಾಸವನ್ನು ಜಗನ್ನಾಥನ ಹಿರಿಯ ಸಹೋದರರ ಆರಾಧನೆಯಿಂದ ಗುರುತಿಸಲಾಗುತ್ತದೆ. ಒಡಿಶಾದ ಹಲವಾರು ಬೆಟ್ಟದ ಬುಡಕಟ್ಟು ಜನಾಂಗದವರು ಹಬ್ಬದ ಅನುಷ್ಠಾನದಲ್ಲಿ ಭಾಗವಹಿಸುತ್ತಾರೆ, ಏಕೆಂದರೆ ಜಗನ್ನಾಥನು ಸ್ವತಃ ಬುಡಕಟ್ಟು ದೇವತೆ ಎಂದು ನಂಬಲಾಗಿದೆ.

ಹಬ್ಬದ ಸಿದ್ಧತೆ ಕನಿಷ್ಠ ಒಂದು ತಿಂಗಳ ಮೊದಲು ಪ್ರಾರಂಭವಾಗುತ್ತದೆ. ಬೇವಿನ ಮರದ ಮರವನ್ನು ಮೂರು ಬೃಹತ್ ರಥಗಳನ್ನು ನಿರ್ಮಿಸಲು ಬಳಸಲಾಗುತ್ತದೆ, ಇವುಗಳ ಹೋಲಿಕೆಗಳನ್ನು ಹೊಂದಿವೆ. ಪ್ರಾಚೀನ ಮರಗೆಲಸದಲ್ಲಿ ತರಬೇತಿ ಪಡೆದ 1,400 ಕಾರ್ಮಿಕರು ರಥವನ್ನು ಮೊದಲಿನಿಂದ ನಿರ್ಮಿಸುತ್ತಾರೆ. ಮೂರು ರಥಗಳನ್ನು ಯಾವುದೇ ಅಳತೆ ಟೇಪ್, ಉಗುರುಗಳು ಅಥವಾ ಅಂಟು ಇಲ್ಲದೆ ನಿರ್ಮಿಸಲಾಗಿದೆ – ಕೇವಲ ಮರದ ಗೂಟಗಳು ಮತ್ತು ಹಳೆಯ ಶಾಲಾ ಕೀಲುಗಳು. ಜಗನ್ನಾಥನ ರಥವು ಸುಮಾರು 44 ಅಡಿ ಎತ್ತರವಿದ್ದು, ಚಕ್ರಗಳು ಕೆಂಪು ಮತ್ತು ಹಳದಿ ಬಣ್ಣದಲ್ಲಿ ಮುಳುಗಿವೆ. ಆದರೆ ಇತರ ಎರಡು ರಥಗಳು 43 ಮತ್ತು 42 ಅಡಿ ಎತ್ತರವಿದ್ದು, ಕಿರಿಯ ಸಹೋದರರು ಭಗವಂತನಿಂದ ಆರೋಹಣಗೊಳ್ಳುವುದನ್ನು ಸೂಚಿಸುತ್ತವೆ.

ಜಗನ್ನಾಥ ಎಂಬ ಪದವು 'ಜಗತ್' ಮತ್ತು 'ನಾಥ' ಅಕ್ಷರಗಳಿಂದ ಬಂದಿದೆ, ಇದರರ್ಥ ಬ್ರಹ್ಮಾಂಡದ ಪ್ರಭು. ಈ ಹಬ್ಬವು ಹಿಂದೂ ಧರ್ಮದ ಮಾರ್ಗದರ್ಶಿ ತತ್ವಗಳಾದ ಶೈವ, ಶಕ್ತಿ ಮತ್ತು ವೈಷ್ಣವ ಧರ್ಮಗಳನ್ನು ಸಂಕೇತಿಸುತ್ತದೆ.

# ಚಾಮರಾಜನಗರಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದೆ

**ಚಾಮರಾಜನಗರ :** ತಮಿಳುನಾಡಿಗೆ ಹೊಂದಿಕೊಂಡಿರುವ ಚಾಮರಾಜನಗರಕ್ಕೆ ಸಾವಿರಾರು ವರ್ಷಗಳ ಇತಿಹಾಸವಿದ್ದು, ಅನೇಕ ಮಹಾ ಪುರುಷರು ಜನಿಸಿದ್ದು, ರಾಜ್ಯಕ್ಕೆ ಅಲ್ಲ ದೇಶಕ್ಕೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ದಕ್ಷಿಣ ಜೈನ ಕಾಶಿ ಕನಕಗಿರಿಯ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿ ಎಂದರು.

ಚಾಮರಾಜನಗರದ ಜೈನರ ಬೀದಿಯಲ್ಲಿರುವ ಪಾರ್ಶ್ವನಾಥ ದೇವಾಲಯದ 17 ನೇ ಪ್ರತಿಜ್ಞಾ ವಾರ್ಷಿಕೋತ್ಸವ ಅಂಗವಾಗಿ ನಡೆದ ಧಾರ್ಮಿಕ ಸಭೆಯಲ್ಲಿ ಮಾತನಾಡಿ, ಚಾಮರಾಜನಗರ ಪುರಾತವಾದ ಧಾರ್ಮಿಕ, ಸಾಹಿತ್ಯ ಕಲೆ ಹೊಂದಿರುವ ಪುಣ್ಯಭೂಮಿ ಎಂದು ಅಭಿಪ್ರಾಯಪಟ್ಟರು.

ಧಾರ್ಮಿಕವಾಗಿ ಹರಳುಕೋಟೆ, ಹರದನಹಳ್ಳಿ, ಕನಕಗಿರಿ, ಚಾಮರಾಜನಗರ ಸಾವಿರಾರು ವರ್ಷಗಳ ಇತಿಹಾಸ ಹೊಂದಿದ್ದು, ಹಲವಾರು ಮಹಾಪುರುಷರು ಈ ನೆಲದಲ್ಲಿ ಜನಿಸಿ ರಾಜ್ಯಕ್ಕೆ ಅಲ್ಲ ದೇಶಕ್ಕೆ ತಮ್ಮದೇ ಆದ ಕೊಡುಗೆಯನ್ನು ನೀಡಿದ್ದಾರೆ ಎಂದರು.

ಸಾಹಿತ್ಯದಲ್ಲೂ ಸಹ ಹಲವಾರು ಸಾಹಿತಿ ಈ ಮಣ್ಣಿನ ಚರಿತೆಯನ್ನು ಗುಣಗಳನ್ನು ತಮ್ಮ ಸಾಹಿತ್ಯದ ಮೂಲ



ಕೊಡುಗೆಯಾಗಿ ನೀಡಿದ್ದಾರೆ, ಕಲೆಯ ತವರೂರಾದ ಈ ನೆಲದಲ್ಲಿ ಹುಟ್ಟಿದ ಡಾ. ರಾಜ್ಕುಮಾರ್ ರಾಜ್ಯಕ್ಕೆ ಅತ್ಯುತ್ತಮ ಕೊಡುಗೆ ನೀಡಿದ್ದಾರೆ ಎಂದರು.

ರಾಜಕೀಯವಾಗಿಯೂ ಈ ನೆಲ ಪವಿತ್ರವಾದದ್ದು, ಮೈಸೂರು ಒಡೆಯರು ದ್ವೇಷ, ಅಸೂಯೆ, ಯುದ್ಧ ಇಲ್ಲದೇ ರಾಜ್ಯ ಕಟ್ಟಿದವರು ಅಂತಹ ಒಡೆಯರು ಈ ನೆಲದಲ್ಲಿ ಹುಟ್ಟಿದ್ದಾರೆ. ಇಲ್ಲಿ ಪರಸ್ಪರ ಸಹಕಾರ, ಭಾಂದವ್ಯ ಹೊಂದಾಣಿಕೆ ಬಹಳ ಮಹತ್ವವಾದದ್ದು ಎಂದರು.

ಅಹಿಂಸೆ ಪಾಲನೆ ಮಾಡುವುದೇ ಜೈನ ಧರ್ಮದ ಮುಖ್ಯ ಉದ್ದೇಶ. ಶಾಂತಿ, ನೆಮ್ಮದಿ ಸಂಕೇತವಾಗಿ ಜೈನ ಧರ್ಮ ಮನುಷ್ಯನನ್ನು ಗೆಲ್ಲುತ್ತದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಜೈನ ಸಮುದಾಯದ ಮೃತರ ಅಂತ್ಯಕ್ರಿಯೆಗೆ ಜಾಗ ನೀಡಿ ಸಹಕರಿಸುತ್ತಿರುವ ಆರ್ಯ ವೈಶ್ಯ ಮಂಡಳಿಯ ಮಾಜಿ ಅಧ್ಯಕ್ಷ ಜಿ.ರ್ಆ. ಅಶ್ವತ್ ನಾರಾಯಣ, ಹಾಲಿ ಅಧ್ಯಕ್ಷ ವೆಂಕಟನಾಗಪ್ಪ ಶೆಟ್ಟಿ ಅವರನ್ನು ಗೌರವಿಸಿ ಸನ್ಮಾನಿಸಲಾಯಿತು.

ಸಾಹುಕಾಬ್ರ್ರಹ್ಮದೇವಪ್ಪ ಕುಟುಂಬವರ್ಗದವರು ಬಸದಿಯ ಧರಣೇಂದ್ರ ಸ್ವಾಮಿಗೆ ಬೆಳ್ಳಿ ಕವಚವನ್ನು ದಾನವಾಗಿ ನೀಡಿದರು,

ವಾರ್ಷಿಕೋತ್ಸವದ ಪಾರ್ಶ ನಾಥ ದಿಗಂಬರ ಜೈನ ಬಸದಿಯಲ್ಲಿ ನಡೆದ ವಿವಿಧ ಅಭಿಷೇಕಗಳು ನಡೆದವು, ಸಂಜೆ, ಪಾರ್ಶ ನಾಥ ಸ್ವಾಮಿಯ ಪಲ್ಲಕ್ಕಿ ಉತ್ಸವ ನಡೆಯಿತು,

ಕಾರ್ಯಕ್ರಮದಲ್ಲಿ ಪಾರ್ಶನಾಥ ಜೈನ ಸಂಘದ ನಿರ್ಮಲಕುಮಾರ್, ಶ್ವೇತಾಂಬರ ಜೈನ ಸಂಘದವರ, ಜಯಶಾಮದೇವಿ ಜೈನ ಮಹಿಳಾ ಸಂಘದ ಪದ್ಮಶ್ರೀ ಬ್ರಹ್ಮಶ್ಕುಮಾರ್, ಸತೀಶ್, ಸಿ.ವಿ.ನಾಗರಾಜಯ್ಯ, ಸಂಘಗಳ ಎಲ್ಲಾ ಪದಾಧಿಕಾರಿಗಳು, ಜೈನ ಭಾಂಧವರು ಇದ್ದರು.

## ನಾನು ಎಲ್ಲಾ ಶಾಸಕರ ಕೈಗೆ ಸಿಕ್ತೇನೆ, ಬೇರೆ ಸಚಿವರ ಬಗ್ಗೆ ಹೇಳಲ್ಲ

**ಬೆಂಗಳೂರು:** ರಾಜ್ಯಕ್ಕೆ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಆಗಮಿಸುತ್ತಿರೋದು ಯಾಕೆ ಅಂತ ಗೊತ್ತಿಲ್ಲ. ರಾಜ್ಯಕ್ಕೆ ಅವರು ಬಂದ ಮೇಲೆ ಶಾಸಕರ ಜೊತೆ ಮಾತಾಡಬಹುದು ಅಂತ ಸಚಿವ ಪರಮೇಶ್ವರ್ ತಿಳಿಸಿದ್ದಾರೆ. ಶಾಸಕರ ಅಸಮಾಧಾನ ಹಿನ್ನೆಲೆ ಸುರ್ಜೇವಾಲ ರಾಜ್ಯಕ್ಕೆ ಆಗಮಿಸುತ್ತಿದ್ದಾರಾ ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, ಸುರ್ಜೇವಾಲ ಬರ್ತಿದ್ದಾರೆ ಅಂತ ಕೇಳಿದ್ದೇನೆ. ಅವರು ಮಾಮೂಲಿ ಬರ್ತಾನೇ ಇರ್ತಾರೆ. ಪ್ರಧಾನ ಕಾರ್ಯದರ್ಶಿಯಾಗಿ ಪ್ರತಿ ಬಾರಿ ಬಂದು ಹೋಗ್ತಾರೆ. ಈ ಬಾರಿ ಯಾಕೆ ಬರ್ತಿದ್ದಾರೆ ಗೊತ್ತಿಲ್ಲ. ಸ್ಪೆಷಲ್ ಆಗಿ ಯಾಕೆ ಬರ್ತಿದ್ದಾರೆ ಅಂತ ನನಗೇನು ಮಾಹಿತಿ ಇಲ್ಲ. ಸುರ್ಜೇವಾಲಾ ಬಂದಾಗ ಶಾಸಕರು ಭೇಟಿ ಅಗತ್ಯವಿದ್ದರೇ ಮಾಡಬಹುದು ಎಂದರು. ರಾಜ್ಯ ಉಸ್ತುವಾರಿ ಸುರ್ಜೇವಾಲಾ ಬದಲಾವಣೆ ಒತ್ತಾಯ ಬಂದಿರೋ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಅದು ಹೈಕಮಾಂಡ್‌ಗೆ ಸಂಬಂಧಿಸಿದ ವಿಷಯ. ಎಐಸಿಸಿಗೆ ಸಂಬಂಧಿಸಿದ ವಿಷಯ ನಾನು ಹೇಗೆ ಮಾತಾಡಲಿ? ಎಐಸಿಸಿ ಅಧ್ಯಕ್ಷರು, ರಾಹುಲ್ ಗಾಂಧಿ ಇದನ್ನ ತೀರ್ಮಾನ ಮಾಡ್ತಾರೆ. ಯಾವ ರಾಜ್ಯಕ್ಕೆ ಯಾರನ್ನ ಉಸ್ತುವಾರಿ ಮಾಡಬೇಕು ಅಂತ. ರೀಶಫಲ್ ಒಂದೊಂದು ಸಾರಿ ಅಗುತ್ತದೆ ಎಂದು ತಿಳಿಸಿದ್ದಾರೆ. ನಾನು ಎಲ್ಲಾ ಶಾಸಕರ ಕೈಗೆ ಸಿಗುತ್ತೇನೆ ಸಚಿವರು ಕೈಗೆ ಸಿಗುತ್ತಿಲ್ಲ ಎಂಬ ಶಾಸಕರ ಆರೋಪಕ್ಕೆ ಪ್ರತಿಕ್ರಿಯೆ ನೀಡಿದ ಪರಂ, ನಾನು ಎಲ್ಲಾ ಶಾಸಕರ ಕೈಗೆ ಸಿಕ್ಕುತ್ತೇನೆ. ಶಾಸಕರಿಗೆ ಬೇರೆ ಮಂತ್ರಿಗಳು ಸಿಗದೇ ಹೋದರೆ, ಅದಕ್ಕೆ ನಾನು ಪ್ರತಿಕ್ರಿಯೆ ಕೊಡಲ್ಲ ಅಂತ ಹೇಳಿದ್ದಾರೆ. ಬೆಂಗಳೂರಿನಲ್ಲಿ ಪ್ರತಿಕ್ರಿಯೆ ನೀಡಿದ ಅವರು, ನಾನು ಎಲ್ಲರಿಗೂ ಸಿಕ್ತೀನಿ. ಕಚೇರಿಯಲ್ಲಿ, ಮನೆಯಲ್ಲಿ ಸಿಕ್ತೀನಿ. ನನಗೇನು ಸಮಸ್ಯೆ ಇಲ್ಲ. ಬೇರೆ ಸಚಿವರು ಸಿಗೊಲ್ಲ ಅನ್ನೋ ಬಗ್ಗೆ ನಾನು ಹೇಗೆ ಹೇಳಲಿ? ಬೇರೆ ಸಚಿವರ ಬಗ್ಗೆ ನಾನು ಮಾತಾಡೊಲ್ಲ. ಎಂದಿದ್ದಾರೆ. ಸರ್ಕಾರದಲ್ಲಿ ಯಾವುದೇ ಗೊಂದಲಗಳು ಇಲ್ಲ. ಸಿಎಂಗೂ ಶಾಸಕರಿಗೂ ಯಾವುದೇ ಗೊಂದಲ ಇಲ್ಲ. ಕೆಲ ಶಾಸಕರು ತಮ್ಮ ಕ್ಷೇತ್ರದ ಬಗ್ಗೆ ಮಾತಾಡಿದ್ದಾರೆ ಅಷ್ಟೇ ಇದಕ್ಕೆ ಇಡೀ ಸರ್ಕಾರವೇ ಗೊಂದಲ ಅಂತ ಹೇಳೋದು ಸರಿಯಲ್ಲ. ಸಿಎಂ ಅವರು ಇದೆಲ್ಲವನ್ನೂ ನೋಡ್ತಾರೆ ಅಂತ ತಿಳಿಸಿದ್ದಾರೆ.



# ರಾಜಕೀಯ ಬದಲಾವಣೆಯ ಸುಳಿವು ಕೊಟ್ಟ ಸಚಿವ ರಾಜಣ್ಣ

**ಬೆಂಗಳೂರು:** ಆಗಸ್ಟ್, ಸೆಪ್ಟೆಂಬರ್‌ನಲ್ಲಿ ಭಾರೀ ಬದಲಾವಣೆಯಾಗಲಿದೆ ಎಂದು ಸಹಕಾರ ಸಚಿವ ಕೆಎನ್ ರಾಜಣ್ಣ ಬಾಂಬ್ ಸಿಡಿಸಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಆಗಸ್ಟ್, ಸೆಪ್ಟೆಂಬರ್‌ನಲ್ಲಿ ರಾಜ್ಯ ರಾಜಕೀಯದಲ್ಲಿ ಭಾರೀ ಬದಲಾವಣೆ ನಡೆಯಲಿದೆ. ಗಾಳಿ ತಣ್ಣಗೆ ಬೀಸುತ್ತಿದೆ. ಸೆಪ್ಟೆಂಬರ್ ಕಳೀಲಿ ಎಂದು ಹೇಳುವ ಮೂಲಕ ಸಂಚಲನ ಮೂಡಿಸಿದ್ದಾರೆ.

2013ರಲ್ಲಿ ಇದ್ದ ಹಾಗೆ ಸಿಎಂ ಸಿದ್ದರಾಮಯ್ಯ ಈ ಬಾರಿ ಇಲ್ಲ ಎಂಬ ಶಾಸಕರ ಹೇಳಿಕೆಯ ಬಗ್ಗೆ ಪ್ರತಿಕ್ರಿಯಿಸಿದ ಅವರು, ಏನ್ ಮಾಡೋದು ಪವರ್ ಸೆಂಟರ್‌ಗಳು ಜಾಸ್ತಿಯಾಗಿವೆ. ಒಂದು ಎರಡು ಮೂರು ಲೆಕ್ಕಕ್ಕೆ ಇಲ್ಲದಷ್ಟು ಆಗಿವೆ. 2013 ರಿಂದ 2018ವರೆಗೆ



ಒಂದೇ ಪವರ್ ಸೆಂಟರ್ ಇತ್ತು. ಹೀಗಾಗಿ ಅವರಿಗೆ ಯಾವುದೇ ಒತ್ತಡ ಇರಲಿಲ್ಲ. ಆದರೆ ಈಗ ಪವರ್ ಸೆಂಟರ್ ಜಾಸ್ತಿ ಆಗಿ ಜಂಜಾಟ ಹೆಚ್ಚಾಗಿದೆ ಎಂದರು.

ಶಾಸಕರಿಗೆ ಅನುದಾನ ಸಿಗುತ್ತಿಲ್ಲ ಎಂಬ ಆರೋಪಕ್ಕೆ, ಸಿಎಂ ರಾಜ್ಯಾದ್ಯಂತ ಪ್ರವಾಸ ಮಾಡಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಕೊಡುತ್ತಿದ್ದಾರೆ. ದುಡ್ಡು ಇಲ್ಲದೆ ಇದ್ದರೆ ಅನುದಾನ ಕೊಡಲು ಸಾಧ್ಯವೇ? ಅವರ ಬೇಡಿಕೆಗೆ ತಕ್ಕಂತೆ ಅನುದಾನ ಸಿಕ್ಕಿಲ್ಲ ಎಂಬ ಅಸಮಾಧಾನ ಇರಬಹುದು. ಗ್ಯಾರಂಟಿ ಯೋಜನೆಗಳನ್ನ ಕೊಟ್ಟಿರೋದ್ರಿಂದ ಆರ್ಥಿಕ ಹೊರೆ ಸರ್ಕಾರದ ಮೇಲಿದೆ ಎಂದು ಹೇಳಿದರು.

ಆರ್ಥಿಕ ಲಭ್ಯತೆಗೆ ಅನುಗುಣವಾಗಿ ಯಾವುದೇ ತಾರತಮ್ಯ ಇಲ್ಲ. ಆಡಳಿತ ಪಕ್ಷ ವಿರೋಧ ಪಕ್ಷ ಅಂತಾ ಯಾವುದೇ ತಾರತಮ್ಯ ಮಾಡುವುದಿಲ್ಲ. ಎಲ್ಲಾ ಕ್ಷೇತ್ರಗಳ ಅಭಿವೃದ್ಧಿಗೆ ಹಣಕಾಸನ್ನು ಒದಗಿಸುತ್ತಿದ್ದೇವೆ. ಒಬ್ಬರಿಗೆ ಹೆಚ್ಚಿಗೆ ನಿರೀಕ್ಷೆ ಇರಬಹುದು ಅದಕ್ಕೆ ತಕ್ಕಂತೆ ಆಗದೇ ಇರಬಹುದು. ಏನು ಅಭಿವೃದ್ಧಿ ಅಗುತ್ತಿಲ್ಲ. ಕ್ಷೇತ್ರಕ್ಕೆ ಅನುದಾನ ಕೊಟ್ಟಿಲ್ಲ ಎನ್ನುವುದು ಸತ್ಯಕ್ಕೆ ದೂರವಾದ ಮಾತು ಎಂದರು.

# ಹೇಮಾವತಿ ಲಿಂಕ್ ಕೆನಾಲ್ ಸಭೆ ಮುಂದೂಡಿಕೆ

**ಬೆಂಗಳೂರು:** ಕೇಂದ್ರ ಸಚಿವ ಸೋಮಣ್ಣ ಅವರ ಮನವಿ ಮೇರೆಗೆ ಇದೇ ತಿಂಗಳು 30ರಂದು ನಡೆಯಬೇಕಿದ್ದ ಹೇಮಾವತಿ ಲಿಂಕ್ ಕೆನಾಲ್ ಸಭೆಯನ್ನು ಜುಲೈ 4-5ಕ್ಕೆ ಮುಂದೂಡಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸದಾಶಿವನಗರ ನಿವಾಸದ ಬಳಿ ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಶಿವಕುಮಾರ್ ಗುರುವಾರ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು. ಸೋಮಣ್ಣ ಅವರು ಸ್ಥಳೀಯ ಸಂಸದರೂ ಆಗಿರುವ ಕಾರಣ ಅವರಿಗೆ ಅನುಕೂಲವಾಗುವಂತೆ ಸಭೆ ಮುಂದೂಡಲಾಗಿದೆ. ಈ ಬಗ್ಗೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು.

ಎತ್ತಿನಹೊಳೆ ಯೋಜನೆ ಗುತ್ತಿಗೆದಾರರ ಸಭೆ ಮುಂದೂಡಿಕೆ

ಇಂದು ತುಮಕೂರಿನಲ್ಲಿ ಯೋಜನೆ ಕಾಮಗಾರಿಯ ಗುತ್ತಿಗೆದಾರರ ಸಭೆ ನಡೆಸಲು ತೀರ್ಮಾನಿಸಲಾಗಿತ್ತು. ಆದರೆ, ಪರಮೇಶ್ವರ್ ಅವರ ಅನುಪಸ್ಥಿತಿ ಹಿನ್ನೆಲೆಯಲ್ಲಿ ಈ ಸಭೆಯನ್ನು ಬೆಂಗಳೂರಿಗೆ ಸ್ಥಳಾಂತರಿಸಲಾಗಿದೆ. ಈ ಸಭೆ ನಾಳೆ ಅಥವಾ ನಾಡಿದ್ದು ನಡೆಯಲಿದೆ ಎಂದು ಹೇಳಿದರು.



ಆದ್ಯತೆ ಮೇರೆಗೆ ಎತ್ತಿನಹೊಳೆ ಯೋಜನೆಯನ್ನು ನಿಗದಿತ ಸಮಯದ ಒಳಗೆ ಪೂರ್ಣಗೊಳಿಸಬೇಕು ಎಂದು ಮುಖ್ಯಮಂತ್ರಿಗಳ ನಿರ್ದೇಶನ ನೀಡಿದ್ದಾರೆ. ಹೀಗಾಗಿ, ಈ ಯೋಜನೆ ಕಾಮಗಾರಿ ಪರಿಶೀಲನೆ ಮಾಡಲಾಗುತ್ತಿದೆ. ಈ ಯೋಜನೆಗೆ ಎಲ್ಲೆಲ್ಲಿ ಸಮಸ್ಯೆ ಇದೆ ಎಂದು ಪರಿಶೀಲನೆ ಮಾಡಲು ನಾನು ತುಮಕೂರಿಗೆ ಭೇಟಿ ನೀಡಿದ್ದೇನೆ ಎಂದರು. ನಾನು ಈಗಾಗಲೇ ದೊಡ್ಡಬಳ್ಳಾಪುರ, ಕೊರಟಗೆರೆಗೆ ಭೇಟಿ ನೀಡಿದ್ದೇನೆ. ಸಚಿವ ಸಂಪುಟ ಉಪ ಸಮಿತಿ ಅಧ್ಯಕ್ಷರಾಗಿದ್ದ ಪರಮೇಶ್ವರ್ ಅವರ ಜೊತೆ ಚರ್ಚೆ ಮಾಡಿದ್ದೇನೆ. ಈ ಭಾಗದಲ್ಲಿ ನೀರನ್ನು ಯಾವ ರೀತಿ ಸಂಗ್ರಹಿಸುವುದು ಎಂಬ ತಾಂತ್ರಿಕ ಸಾಧ್ಯತೆಗಳ ಪರಿಶೀಲನೆ ನಡೆಸುತ್ತಿದ್ದೇವೆ. ಈಗಾಗಲೇ ಸ್ಥಳೀಯ ನಾಯಕರು, ಗ್ರಾಮಸ್ಥರ ಜೊತೆ ಚರ್ಚೆ ಮಾಡಿ ಅಭಿಪ್ರಾಯ ಸಂಗ್ರಹಿಸಿದ್ದೇನೆ. ಸಾರ್ವಜನಿಕರು ತಮ್ಮ ನೋವು ಹೇಳಿಕೊಂಡಿದ್ದಾರೆ. ಒಂದು ಕಡೆ ಅಣೆಕಟ್ಟು ನಿರ್ಮಾಣ ಮಾಡಬೇಕೆ, ಎರಡು ಕಡೆ ಮಾಡಬೇಕೆ ಅಥವಾ ಜನರ ಸಲಹೆಯಂತೆ ಕೆರೆಗಳನ್ನು ಬಳಸಿಕೊಂಡು ನೀರು ಸಂಗ್ರಹಿಸಬಹುದೇ ಎಂಬ ಸಾಧ್ಯತೆಗಳನ್ನು ಅಧ್ಯಯನ ಮಾಡಲಾಗುವುದು ಎಂದು ತಿಳಿಸಿದರು.

# ಸುನೀಲ್ ಕುಮಾರ್‌ಗೆ ಸಿಗುತ್ತಾ ವಿರೋಧಪಕ್ಷದ ಸ್ಥಾನ?

**ಬೆಂಗಳೂರು:** ಪಕ್ಷದ ಹೈಕಮಾಂಡ್ ವರಿಷ್ಠರ ಭೇಟಿಗೆ ತೆರಳಿರುವ ರಾಜ್ಯ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಅವರು ವಾಪಸ್ ಬೆಂಗಳೂರಿಗೆ ಬರೋವಾಗ ಸಪ್ಪೆ ಮೋರೆ ಹಾಕಿಕೊಂಡು ಬರುವ ಸಾಧ್ಯತೆ ಇದೆ ಎಂದು ಬಲ್ಲ ಮೂಲಗಳು ತಿಳಿಸಿವೆ.

ಮೂಲಗಳ ಪ್ರಕಾರ, ಆರ್ ಅಶೋಕ್ ಅವರನ್ನು ರಾಜ್ಯ ವಿಧಾನಸಭೆಯ ವಿರೋಧ ಪಕ್ಷದ ನಾಯಕನ ಸ್ಥಾನದಿಂದ ಕೊಕ್ ಕೊಡುವ ಸಾಧ್ಯತೆ ಇದ್ದು, ಅವರ ಬದಲಿಗೆ ಹಿಂದುಳಿದ ವರ್ಗಕ್ಕೆ ಸೇರಿದ ಪ್ರಭಾವಿ ಮತ್ತು ಆಕ್ಟೀವ್ ಆಗಿರುವ ನಾಯಕನನ್ನು ವಿರೋಧ ಪಕ್ಷದ ನಾಯಕನ ಸ್ಥಾನಕ್ಕೆ ಕೂರಿಸುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ.

ಈಗಾಗಲೇ ದೆಹಲಿಯಲ್ಲಿರುವ ವಿಪಕ್ಷ ನಾಯಕ ಆರ್ ಅಶೋಕ್ ದೆಹಲಿಯಲ್ಲಿ ಪಕ್ಷದ ವರಿಷ್ಠರನ್ನು ಭೇಟಿಯಾಗಿದ್ದು, ಈ ವೇಳೆ ರಾಜ್ಯಾಧ್ಯಕ್ಷರ ಬದಲಾವಣೆ ಚರ್ಚೆ ನಡುವೆ ವಿಪಕ್ಷ ನಾಯಕನ ಸ್ಥಾನದ ಬದಲಾವಣೆ ಬಗ್ಗೆಯೂ ಚರ್ಚೆ ನಡೆದಿದೆ ಎನ್ನಲಾಗಿದೆ. ಆರ್ ಅಶೋಕ್ ಬದಲಿಗೆ ಕಾರ್ಕಳ ಶಾಸಕ ಸುನೀಲ್ ಕುಮಾರ್ ಅವರಿಗೆ ಸ್ಥಾನ ನೀಡಲು ವರಿಷ್ಠರು ಯೋಚಿಸಿದ್ದು, ಹಿಂದುಳಿದ ವರ್ಗದ ನಾಯಕ ಸುನೀಲ್ ಕುಮಾರ್‌ಗೆ ಸ್ಥಾನ ನೀಡಲು ಗಂಭೀರ ಆಲೋಚನೆ ಮಾಡಿದ್ದಾರೆ ಎನ್ನಲಾಗಿದೆ.

**ಆರ್.ಅಶೋಕ್ ಬದಲಾವಣೆ ಯಾಕೆ?:** ರಾಜ್ಯದಲ್ಲಿ ಸಿಎಂ ಸಿದ್ದರಾಮಯ್ಯ ಅವರು ರಾಜಕೀಯ ಕ್ಷೇತ್ರದಲ್ಲಿ ಹಿಂದುಳಿದ ವರ್ಗಗಳ ಪರಮೋಚ್ಚ ನಾಯಕನಾಗಿ ಬೆಳೆದಿದ್ದಾರೆ. ಹೀಗಾಗಿ ಅವರಿಗೆ ಪರ್ಯಾಯವಾಗಿ ಹಿಂದುಳಿದ ವರ್ಗದ ನಾಯಕತ್ವ ಬೆಳೆಸಲು ಬಿಜೆಪಿ ಪ್ಲಾನ್ ಮಾಡಿದ್ದು, ಅದಕ್ಕಾಗಿ ವಿಧಾನಸಭೆ ವಿರೋಧ ಪಕ್ಷದ ಸ್ಥಾನ ಸುನೀಲ್ ಕುಮಾರ್‌ಗೆ ನೀಡುವ ಬಗ್ಗೆ ಚಿಂತನೆ ಮಾಡಲಾಗಿದೆ. ಆ ಮೂಲಕ ರಾಜ್ಯದಲ್ಲಿ ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷಗಳಿಗೆ ಚದುರಿ



### ಆರ್.ಅಶೋಕ್ ಮುಂದಿನ ನಡೆ ಏನು?

**ವಿರೋಧ ಪಕ್ಷದ ನಾಯಕನ ಸ್ಥಾನದಿಂದ ತಮಗೆ ಕಿಕ್ ಕೊಡುವ ನೀಡುವ ಬಗ್ಗೆ ಮುನ್ಸೂಚನೆ ಸಿಕ್ಕಿರುವ ಆರ್ ಅಶೋಕ್ ಇದೀಗ ತಮ್ಮ ಬದಲಾವಣೆ ಆತಂಕದಲ್ಲಿದ್ದು, ಹೀಗಾಗಿ ದೆಹಲಿಯಲ್ಲಿರುವಾಗಲೇ ರಾಜ್ಯಾಧ್ಯಕ್ಷ ಸ್ಥಾನಕ್ಕಾಗಿ ಡಿಮ್ಯಾಂಡ್ ಮಾಡಿದ್ದಾರೆ ಎಂದು ಹೇಳಲಾಗಿದೆ. ವಿಪಕ್ಷ ನಾಯಕನ ಸ್ಥಾನದಿಂದ ಹಿಂದೆ ಸರಿಯಲು ತಾನು ಸಿದ್ಧ ಆದರೆ ತನಗೆ ಹಿನ್ನಡೆ ಆಗದಂತೆ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನವನ್ನು ನೀಡಬೇಕು ಎಂದು ವರಿಷ್ಠರಿಗೆ ಡಿಮ್ಯಾಂಡ್ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ಹಾಗೊಂದು ವೇಳೆ ನಿಜವೇ ಆದರೆ, ಈ ತನಕ ಹರಿದಾಡಿದ್ದ ರಾಜ್ಯಾಧ್ಯಕ್ಷ ಮತ್ತು ವಿಪಕ್ಷ ನಾಯಕ ಸ್ಥಾನಗಳ ಬದಲಾವಣೆ' ಸುದ್ದಿ ನಿಜವೂ ಆದಂತೆ ಆಗುತ್ತೆ. ಮತ್ತೊಂದೆಡೆ ಬಿವೈ ವಿಜಯೇಂದ್ರಗೆ ಹಿನ್ನಡೆ ಆಗುವುದರಲ್ಲಿ ಅನುಮಾನವೇ ಇಲ್ಲ. ಮತ್ತೊಂದೆಡೆ ವಿಜಯೇಂದ್ರಗೆ ಹಿನ್ನಡೆ ಆಗದಂತೆ ಬಿಜೆಪಿ ಹೈಕಮಾಂಡ್ ಅವರಿಗೆ ಬೇರೆ ಹುದ್ದೆ ನೀಡುವ ಸಾಧ್ಯತೆ ಕೂಡ ಇದೆ ಎನ್ನಲಾಗಿದೆ.**

ಹೋಗಿರುವ ಹಿಂದುಳಿದ ವರ್ಗಗಳ ಮತಗಳನ್ನು ಮತ್ತೆ ಕಮಲ ಪಾಳಯದತ್ತ ಸೆಳೆಯಲು ಬಿಜೆಪಿ ಪ್ಲ್ಯಾನ್ ಮಾಡಿದೆ ಎನ್ನಲಾಗಿದೆ.

ರಾಜ್ಯ ಬಿಜೆಪಿಯಲ್ಲಿ ಪ್ರಭಾವಿ ನಾಯಕರು ಮಾತ್ರವಲ್ಲದೇ ಆಡಳಿತಾರೂಢ ಕಾಂಗ್ರೆಸ್ ಪಕ್ಷದ ವಿರುದ್ಧ ಪರಿಣಾಮಕಾರಿಯಾಗಿ ಹೋರಾಟ ನಡೆಸುವವರ ಪೈಕಿ ಕಾರ್ಕಳ ಶಾಸಕ ಸುನೀಲ್ ಕುಮಾರ್ ಮುಂಚೂಣಿಯಲ್ಲಿದ್ದಾರೆ. ತಮ್ಮ ಪ್ರಖರ ಮಾತಿನ ಶೈಲಿಯಿಂದ ಕಾಂಗ್ರೆಸ್ ಪಕ್ಷವನ್ನು ಆಗಾ ಇಕ್ಕಟ್ಟಿಗೆ ಸಿಲುಕಿಸಿದ್ದಾರೆ. ಹನಿಟ್ರ್ಯಾಪ್ ಪ್ರಕರಣ ಸೇರಿ ಸರ್ಕಾರದ ವೈಫಲ್ಯಗಳ ಬಗ್ಗೆ ಸದನದಲ್ಲಿ ಧ್ವನಿ ಎತ್ತಿದ್ದ ಸುನೀಲ್ ಕುಮಾರ್ ಕಳೆದ ಅಧಿವೇಶನದಲ್ಲಿ ರಾಜ್ಯ ಸರ್ಕಾರವನ್ನು ಇಕ್ಕಟ್ಟಿಗೆ ಸಿಲುಕಿಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು. ಇದನ್ನು ಬಿಜೆಪಿ ಹೈಕಮಾಂಡ್ ನಾಯಕರು ಗಮನಿಸಿದ್ದು, ಹೀಗಾಗಿ ರಾಜ್ಯ ಬಿಜೆಪಿಗೆ ಮತ್ತೆ ಬೂಸ್ಟ್ ನೀಡಲು ಒಬ್ಬ ಚಲನಾಶೀಲ ನಾಯಕ ಅಗತ್ಯ ಇದ್ದು, ಅದಕ್ಕೆ ಸುನೀಲ್ ಕುಮಾರ್ ಸೂಕ್ತ ಅಭ್ಯರ್ಥಿ ಎಂದು ಬಿಜೆಪಿ ಹೈಕಮಾಂಡ್ ಮನಗಂಡಿದೆ ಎನ್ನಲಾಗಿದೆ.

ಕುಮಾರ್ ಪರವಾಗಿ ಬಿಜೆಪಿಯ ಕೆಲ ಶಾಸಕರಿಂದಲೂ ಒಲವು ಮೂಡಿದ್ದು, ಅದಕ್ಕಾಗಿ ಈಗ ವಿಪಕ್ಷ ಸ್ಥಾನವನ್ನು ಸುನೀಲ್ ಕುಮಾರ್ ಕಾರ್ಕಳಗೆ ನೀಡುವ ಬಗ್ಗೆ ಬಿಜೆಪಿ ವರಿಷ್ಠರು ಗಂಭೀರ ಚಿಂತನೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

## ಚಿನ್ನಸ್ವಾಮಿ ಕಾಲ್ತುಳಿತ ಪ್ರಕರಣ: ವಿಚಾರಣೆ ಎದುರಿಸಿದ ಐಪಿಎಸ್ ಅಧಿಕಾರಿ ದಯಾನಂದ್

**ಬೆಂಗಳೂರು:** ಚಿನ್ನಸ್ವಾಮಿ ಕಾಲ್ತುಳಿತ ಪ್ರಕರಣ ಸಂಬಂಧ ಅಮಾನತು ಆದ ಐಪಿಎಸ್ ಅಧಿಕಾರಿ ದಯಾನಂದ್ ಬೆಂಗಳೂರು ನಗರ ಜಿಲ್ಲಾಧಿಕಾರಿಗಳ ಮುಂದೆ ವಿಚಾರಣೆಗೆ ಹಾಜರಾಗಿದ್ದರು. ಎರಡು ನೋಟಿಸ್‌ಗಳ ಜಾರಿ ಬಳಿಕ ನಿನ್ನೆ ದಯಾನಂದ್ ವಿಚಾರಣೆಗೆ ಹಾಜರಾಗಿದ್ದರು. ಒಂದು ಗಂಟೆಗೂ ಹೆಚ್ಚು ಕಾಲ ಜಿಲ್ಲಾಧಿಕಾರಿ ಜಗದೀಶ್ ದಯಾನಂದ್ ಅವರ ಹೇಳಿಕೆಯನ್ನು ದಾಖಲು ಮಾಡಿಕೊಂಡರು. ಭದ್ರತಾ ಲೋಪ, ಕರ್ತವ್ಯ ಲೋಪ ಸಂಬಂಧ ಪ್ರಶ್ನೆಗಳ ಸುರಿಮಳೆಗೈದರು. ಡಿಸಿಪಿ ವಿಧಾನಸೌಧ ಕರಿ ಬಸವನಗೌಡ ಪತ್ರದ ಬಗ್ಗೆಯೂ ಜಿಲ್ಲಾಧಿಕಾರಿ ಮಾಹಿತಿ ಕೇಳಿದರು. ಆರ್‌ಸಿಬಿ ಹಾಗೂ ಡಿಎನ್‌ಎ ಅಧಿಕಾರಿಗಳಿಗೆ ನೀವೇನಾದರೂ ಇವೆಂಟ್ ಮಾಡಲು ತಿಳಿಸಿದ್ದೀರಾ ಎಂದು ಪ್ರಶ್ನೆ ಮಾಡಿದರು. ಅಲ್ಲದೇ ಕಬ್ಬನ್ ಪಾರ್ಕ್ ಇನ್ಸ್ಪೆಕ್ಟರ್ ನಿಮಗೆ ಮಾಹಿತಿ ನೀಡಿದ್ದಾರಾ? ಅಭಿಮಾನಿಗಳು ಭಾರಿ ಸಂಖ್ಯೆಯಲ್ಲಿ ಬರುತ್ತಾರೆ ಎಂದು ನಿರೀಕ್ಷೆ ಇತ್ತಾ? ಒಂದು ವೇಳೆ ನಿರೀಕ್ಷೆ ಇಟ್ಟಿದ್ದರೆ ಯಾಕೆ ನೀವು ಸರಿಯಾದ ರೀತಿ ಬಂದೋಬಸ್ತ್ ಮಾಡಲಿಲ್ಲ? ನೀವು ಆರ್‌ಸಿಬಿ ತಂಡಕ್ಕೆ ಅಥವಾ ಡಿಎನ್‌ಎ ತಂಡಕ್ಕೆ ನೋಟಿಸ್ ನೀಡಿದ್ದೀರಾ? ನಿಮಗೆ ಸಾವಿನ ಬಗ್ಗೆ ಯಾವಾಗ ತಿಳಿಯಿತು? ಮಧ್ಯಾಹ್ನ ಮೂರು ಗಂಟೆಗೆ ಇರುವ ಕಾರ್ಯಕ್ರಮಕ್ಕೆ ಬೆಳಗ್ಗೆ ಯಾಕೆ ಬಂದೋಬಸ್ತ್ ಮಾಡಲು ತಡವಾಯಿತು ಎಂಬ ಪ್ರಶ್ನೆಗಳನ್ನು ಕೇಳಲಾಯಿತು. ಈ ಎಲ್ಲಾ ಪ್ರಶ್ನೆಗಳಿಗೆ ದಯಾನಂದ್ ಉತ್ತರಿಸಿದ್ದಾರೆ. ಈಗಾಗಲೇ 65 ಗಾಯಾಳುಗಳು, ಮೃತರಾದ 11 ಕುಟುಂಗಳ ಜೊತೆಗೆ ಭದ್ರತೆಗೆ ಇದ್ದ ಎಸಿಪಿ, ಡಿಸಿಪಿ, ಇನ್ಸ್ಪೆಕ್ಟರ್ ಸೇರಿ 60ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ವಿಚಾರಣೆ ಮುಕ್ತಾಯ ಆಗಿದ್ದು, ಏನಾದ್ರು ಸ್ಪಷ್ಟನೆ ಬೇಕಿದ್ದರೆ ಕೆಲ ಅಧಿಕಾರಿಗಳಿಂದ ಮಾಹಿತಿ ಪಡೆಯಲಿದ್ದಾರೆ. ಮ್ಯಾಜಿಸ್ಟ್ರೇಟ್ ತನಿಖೆ ಬಹುತೇಕ ಅಂತಿಮ ಹಂತಕ್ಕೆ ಬಂದಿದ್ದು, ಈ ವಾರ ಅಥವಾ ಮುಂದಿನ ವಾರದಲ್ಲಿ ಸರ್ಕಾರಕ್ಕೆ ಜಿಲ್ಲಾಧಿಕಾರಿಗಳು ವರದಿ ಸಲ್ಲಿಕೆ ಮಾಡಲಿದ್ದಾರೆ.

## ಕಾಫಿನಾಡಲ್ಲಿ ಭೂಕುಸಿತ

ಮಳೆಯ ತೀವ್ರತೆಯಿಂದ ಭೂಮಿಯ ಸಾಂದ್ರತೆ ಕಡಿಮೆಯಾಗಿ, ಮರಗಳ ಬೇರುಗಳು ಮಣ್ಣನ್ನು ಗಟ್ಟಿಯಾಗಿ ಹಿಡಿದಿಟ್ಟಿಲ್ಲ. ಇದರ ಜೊತೆಗೆ, ಹೆದ್ದಾರಿ ಕಾಮಗಾರಿಯ ಸಂದರ್ಭದಲ್ಲಿ ಸೂಕ್ತ ಒಳಚರಂಡಿ ವ್ಯವಸ್ಥೆಯನ್ನು ನಿರ್ಮಿಸದಿರುವುದು ಭೂಕುಸಿತದ ಅಪಾಯವನ್ನು ಇನ್ನಷ್ಟು ಹೆಚ್ಚಿಸಿದೆ ಎಂದು ಗ್ರಾಮಸ್ಥರು ದೂರಿದ್ದಾರೆ. ಚಿಕ್ಕಮಗಳೂರಿನಂತಹ ಬೆಟ್ಟಗುಡ್ಡ ಪ್ರದೇಶಗಳಲ್ಲಿ ಭೂಕುಸಿತಗಳು ಸಾಮಾನ್ಯವಾದರೂ, ಅವೈಜ್ಞಾನಿಕ ರಸ್ತೆ ನಿರ್ಮಾಣವು ಈ ಸಮಸ್ಯೆಯನ್ನು ಉಲ್ಬಣಗೊಳಿಸಿದೆ ಎಂಬ ಆರೋಪ ಕೇಳಿಬಂದಿದೆ.

ಸಂಕ್ಲಾಪುರ ಗ್ರಾಮದಲ್ಲಿ ಈ ಘಟನೆಯಿಂದ ಸ್ಥಳೀಯರಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಸುಬ್ರಹ್ಮಣ್ಯ ಅವರ ಮನೆಯ ಸುತ್ತಲಿನ ಭೂಕುಸಿತದಿಂದಾಗಿ ಇತರ ಮನೆಗಳಿಗೂ ಅಪಾಯ ಒಡ್ಡಿದೆ. ಗ್ರಾಮಸ್ಥರು ತಕ್ಷಣವೇ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಿದ್ದು, ಅಗತ್ಯ ಕ್ರಮಕ್ಕಾಗಿ ಮನವಿ ಸಲ್ಲಿಸಿದ್ದಾರೆ. ಜಿಲ್ಲಾಡಳಿತದಿಂದ ತಾಂತ್ರಿಕ ತಜ್ಞರ ತಂಡವು ಸ್ಥಳಕ್ಕೆ ಭೇಟಿ ನೀಡಿ, ಭೂಕುಸಿತದ ಕಾರಣಗಳನ್ನು ಪರಿಶೀಲಿಸುವ ಸಾಧ್ಯತೆಯಿದೆ.

ಈ ಘಟನೆ ಕಾಫಿನಾಡಿನಲ್ಲಿ ಮಳೆಯ ತೀವ್ರತೆ ಮತ್ತು ಅವೈಜ್ಞಾನಿಕ ರಸ್ತೆ ಕಾಮಗಾರಿಗಳಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಗಂಭೀರ ಚರ್ಚೆಗೆ ಕಾರಣವಾಗಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಸೂಕ್ತ ಒಳಚರಂಡಿ ವ್ಯವಸ್ಥೆ ಮತ್ತು ಭೂಕಾಯ್ದಿರುವ ಗೋಡೆಗಳನ್ನು ನಿರ್ಮಿಸದಿರುವುದು ಈ ದುರಂತಕ್ಕೆ ಕಾರಣ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳನ್ನು ತಡೆಗಟ್ಟಲು ಸರ್ಕಾರ ಮತ್ತು ಸಂಬಂಧಿತ ಇಲಾಖೆಗಳು ಕಟ್ಟುನಿಟ್ಟಾದ ಕ್ರಮಗಳನ್ನು ಕೈಗೊಳ್ಳಬೇಕೆಂದು ಒತ್ತಾಯಿಸಲಾಗಿದೆ.

**ಜಿಲ್ಲಾಡಳಿತದ ಸೂಕ್ತ ಕ್ರಮಕ್ಕಾಗಿ ಕಾಯುತ್ತಿರುವ ಗ್ರಾಮಸ್ಥರು!:** ಚಿಕ್ಕಮಗಳೂರಿನ ಜಿಲ್ಲಾಧಿಕಾರಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ, ಸಂಕ್ಲಾಪುರ ಗ್ರಾಮದಲ್ಲಿ ಭೂಕುಸಿತದ ಅಪಾಯವಿರುವ ಪ್ರದೇಶಗಳನ್ನು ಗುರುತಿಸಿ, ಸ್ಥಳೀಯರಿಗೆ ಸುರಕ್ಷಿತ ಸ್ಥಳಾಂತರಕ್ಕೆ ಕ್ರಮ ಕೈಗೊಳ್ಳುವ ಸಾಧ್ಯತೆಯಿದೆ. ಈ ಘಟನೆಯಿಂದಾಗಿ ಗ್ರಾಮಸ್ಥರಲ್ಲಿ ಆತಂಕದ ವಾತಾವರಣ ಮನೆಮಾಡಿದ್ದು, ತಕ್ಷಣದ ಕ್ರಮಕ್ಕಾಗಿ ಕಾಯುತ್ತಿದ್ದಾರೆ.

**ಮೊದಲನೇ ಪುಟದಿಂದ...**

## ನದಿ ತೀರದಲ್ಲಿ ಪ್ರವಾಹ ಭೀತಿ

ಹೀರಣ್ಯಕೇಶಿ ನದಿ ಕೂಡ ಭರ್ತಿಯಾಗಿದ್ದು, ನದಿ ತೀರದ ಜಮೀನುಗಳು ಜಲಾವೃತವಾಗಿವೆ. ಚಿಕ್ಕೋಡಿ ಉಪ ವಿಭಾಗ ವ್ಯಾಪ್ತಿಯ 11 ಸೇತುವೆಗಳು ಜಲಾವೃತವಾಗಿದ್ದು, ಪರ್ಯಾಯ ಮಾರ್ಗಗಳ ಮೂಲಕ ಜನರ ಸಂಚಾರ ಮಾಡುತ್ತಿದ್ದಾರೆ.

ಹುಕ್ಕೇರಿ ತಾಲೂಕಿನ ಹೀರಣ್ಯಕೇಶಿ ನದಿಗೆ ಅಡ್ಡಲಾಗಿರುವ ಮದಮಕ್ಕನಾಳ-ಯರನಾಳ ಸೇತುವೆ ಜಲಾವೃತವಾಗಿದೆ. ಪ್ರವಾಹ ಭೀತಿ ಇದರೂ ಪ್ರಯಾಣಿಕರು ಸಂಚಾರ ಮಾಡುತ್ತಿದ್ದರು. ಮಾಧ್ಯಮಗಳ ವರದಿ ಬೆನ್ನಲ್ಲೇ ಎಚ್ಚೆತ್ತ ಬೆಳಗಾವಿ ಜಿಲ್ಲಾಡಳಿತ, ಬ್ಯಾರಿಕೇಡ್ ಅಳವಡಿಸಿ ಪೊಲೀಸರನ್ನ ನಿಯೋಜನೆ ಮಾಡಿದೆ.

ಚಿಕ್ಕೋಡಿ ತಾಲೂಕಿನ ಕಲ್ಲೋಳ ಗ್ರಾಮದ ಕೃಷ್ಣಾ ನದಿ ತೀರದ ದತ್ತ ದೇವಸ್ಥಾನ ಜಲಾವೃತವಾಗಿದೆ. ಈಗಾಗಲೇ ಅಪಾಯದ ಮಟ್ಟದಲ್ಲಿ ಕೃಷ್ಣಾ ನದಿ ಹರಿಯುತ್ತಿರುವ ಕಾರಣ, ಚಿಕ್ಕೋಡಿ ತಹಶೀಲ್ದಾರ್ ಚಿದಂಬರ ಕುಲಕರ್ಣಿ ನದಿ ತೀರಕ್ಕೆ ಭೇಟಿ ನೀಡಿ ಮುಂಜಾಗ್ರತಾ ಕ್ರಮಗಳನ್ನ ಪರಿಶೀಲಿಸಿದ್ದಾರೆ.

## ಟ್ರಂಪ್ ಘೋಷಣೆ

ಮೆಗಾ ವ್ಯಾಪಾರ ಒಪ್ಪಂದದ ಕುರಿತು ನಾಲ್ಕು ದಿನಗಳ ಮಾತುಕತೆ ವೇಳೆ ಎರಡೂ ದೇಶಗಳಲ್ಲಿ ಕೈಗಾರಿಕಾ ಮತ್ತು ಕೃಷಿ ಉತ್ಪನ್ನಗಳಿಗೆ ಹೆಚ್ಚಿನ ಮಾರುಕಟ್ಟೆ ಪ್ರವೇಶ, ಸುಂಕ ಕಡಿತ ಮತ್ತು ಸುಂಕ ರಹಿತ ವ್ಯಾಪಾರದ ಬಗ್ಗೆ ಚರ್ಚೆ ನಡೆಸಲಾಗಿದೆ.

ಮಾತುಕತೆ ವೇಳೆ ಎರಡು ದೇಶಗಳ ನಡುವೆ ಪ್ರಸ್ತುತ ಇರುವ 190 ಬಿಲಿಯನ್ ಡಾಲರ್ ವಾರ್ಷಿಕ ದ್ವಿಪಕ್ಷೀಯ ವ್ಯಾಪಾರವನ್ನು 2023ರ ವೇಳೆಗೆ 500 ಬಿಲಿಯನ್ ಡಾಲರ್‌ಗೆ ಕೊಂಡೊಯ್ಯುವ ಗುರಿಯನ್ನು ಹಾಕಲಾಗಿದೆ.

ಚೀನಾದ ಜೊತೆ ಅಮೆರಿಕದ ವ್ಯಾಪಾರ ಒಪ್ಪಂದದ ವಿವರ ಲಭ್ಯವಾಗದೇ ಇದ್ದರೂ ಅಪರೂಪದ ಭೂ ಖನಿಜ ರಫ್ತನ್ನು ತ್ವರಿತಗೊಳಿಸಲು ಈ ಒಪ್ಪಂದ ಗಮನಹರಿಸಿದೆ ಎಂದು ಶ್ವೇತಭವನದ ಅಧಿಕಾರಿಯೊಬ್ಬರು ದೃಢಪಡಿಸಿದ್ದಾರೆ.

## ಪಿಂಕ್ ಲೈನ್ ಆರು ಸ್ಟೇಷನ್‌ಗಳಲ್ಲಿ ಮೆಟ್ರೋ ಸಂಚಾರ

ಈ ಹಿನ್ನೆಲೆಯಲ್ಲಿ ಈ 12 ಅಂಡರ್ ಗ್ರೌಂಡ್ ಮೆಟ್ರೋ ಸ್ಟೇಷನ್‌ಗಳ ವ್ಯಾಪ್ತಿಯಲ್ಲಿ ಮುಂದಿನ ವರ್ಷ ಡಿಸೆಂಬರ್ ವೇಳೆಗೆ ಮೆಟ್ರೋ ರೈಲುಗಳು ಸಂಚಾರ ಮಾಡಲಿವೆ.

ಈಗಾಗಲೇ ಈ ಮಾರ್ಗಕ್ಕಾಗಿ ಬೆಮಲ್‌ನಲ್ಲಿ 16 ಚಾಲಕರಹಿತ ರೈಲುಗಳು ಸಿದ್ದವಾಗುತ್ತಿವೆ. ಮೊದಲ ರೈಲು ಸೆಪ್ಟೆಂಬರ್‌ಗೆ ಬರಲಿದೆ. ಪ್ರತಿ ತಿಂಗಳು ಎರಡು ಚಾಲಕರಹಿತ ರೈಲುಗಳು ಪೂರೈಕೆಯಾಗಲಿವೆ. ಈ ಬಗ್ಗೆ ಸಂತಸ ವ್ಯಕ್ತಪಡಿಸಿದ ವಾಹನ ಸವಾರರು ಮತ್ತು ಸ್ಥಳೀಯ ನಿವಾಸಿಗಳು, ಈ ಬನ್ನೇರುಘಟ್ಟ ರೋಡ್‌ನಲ್ಲಿ ವಿಪರೀತವಾದ ಟ್ರಾಫಿಕ್ ಇರುತ್ತದ. ಮೆಟ್ರೋ ಸಂಚಾರ ಆರಂಭವಾದರೆ ತುಂಬಾ ಉಪಯೋಗವಾಗಲಿದೆ ಎಂದಿದ್ದಾರೆ.

ಒಟ್ಟಿನಲ್ಲಿ ಈ ವರ್ಷ ಪಿಂಕ್ ಲೈನ್ ಮೆಟ್ರೋದ 6 ಮೆಟ್ರೋ ಸ್ಟೇಷನ್‌ಗಳ ವ್ಯಾಪ್ತಿಯಲ್ಲಿ ಡ್ರೈವರ್‌ಲೆಸ್ ರೈಲುಗಳು ಸಂಚಾರ ಮಾಡಲಿದ್ದು, ಪ್ರಯಾಣಿಕರು ಈ ಮಾರ್ಗದಲ್ಲಿ ಸಂಚಾರ ಮಾಡಲು ಕಾತರದಿಂದ ಕಾಯುತ್ತಿದ್ದಾರೆ.

## ಪತ್ನಿ ಕೊಂದು ಬಸ್‌ನಲ್ಲಿ ಲಗೇಜ್ ಎಂದು ಕಳುಹಿಸಿ ಪರಾರಿಯಾಗಿದ್ದ ವೃದ್ಧ ಕೊನೆಗೂ ಅರೆಸ್ಟ್

ಅದಾದ ನಂತರ ಆತ, ಎರಡನೇ ವಿವಾಹವಾಗಿದ್ದ. ಆಕೆ ಜಗಳವಾಡಿ ಪತಿಯನ್ನು ತೊರೆದು ಹೋಗಿದ್ದಳು. ನಂತರ, ಸರ್ಕಾರಿ ನೌಕರ ಎಂದು ಹೇಳಿಕೊಂಡು ಕೊಪ್ಪಳ ತಾಲೂಕಿನ ಇಂದರಗಿ ನಿವಾಸಿ ರೇಣುಕಮ್ಮರನ್ನು ಮೂರನೇ ಮದುವೆಯಾಗಿದ್ದ. ಮದುವೆಯಾದ ಬಳಿಕ ಗಂಗಾವತಿಯ ಲಕ್ಷ್ಮೀ ಕ್ಯಾಂಪ್‌ನಲ್ಲಿ ಪತ್ನಿ ಜೊತೆ ವಾಸ ಮಾಡತಿದ್ದ. ಹೆಂಡತಿಯನ್ನು ಕೊಚ್ಚಿ ಕೊಲೆ ಮಾಡಿದ್ದ ಹುಸೇನಪ್ಪ 2002 ರಲ್ಲಿ ಹೆಂಡತಿಯನ್ನು ಕೊಚ್ಚಿ ಕೊಲೆ ಮಾಡಿದ್ದ ಹುಸೇನಪ್ಪ, ಶವವನ್ನು ಲಗೇಜ್ ಎಂದು ಕಂಪ್ಲಿ ಬಸ್‌ನಲ್ಲಿ ಕಳುಹಿಸಿದ್ದ. ಆ ಬಳಿಕ ಪರಾರಿಯಾಗಿ ತಲೆಮರೆಸಿಕೊಂಡಿದ್ದ. ನಂತರ ದೂರು ದಾಖಲಿಸಿಕೊಂಡಿದ್ದ ಪೊಲೀಸರು ತನಿಖೆ ಆರಂಭಿಸಿದ್ದರು. ಆದರೆ, ಆರೋಪಿಯನ್ನು ಪತ್ತೆಹಚ್ಚಿ ಬಂಧಿಸಲು ಸಾಧ್ಯವಾಗಿರಲಿಲ್ಲ. ಆರು ತಿಂಗಳ ಹಿಂದೆ ಆರೋಪಿ ಸ್ವಗ್ರಾಮ ಹಾಲದಾಳಕ್ಕೆ ಬಂದಿರುವ ಬಗ್ಗೆ ಪೊಲೀಸರಿಗೆ ಖಚಿತ ಸುಳಿವು ದೊರೆತಿತ್ತು. ಅದರ ಆಧಾರದಲ್ಲಿ ಪೊಲೀಸರು ಆರೋಪಿಯ ಜಾಡು ಹಿಡಿದಿದ್ದರು. ನಂತರ ಕಾರ್ಯಾಚರಣೆ ನಡೆಸಿದ ಗಂಗಾವತಿ ಪೊಲೀಸರು, ರಾಯಚೂರ ಜಿಲ್ಲೆಯ ಮಾನ್ವಿಯಲ್ಲಿ ಹುಸೇನಪ್ಪನನ್ನು ಬಂಧಿಸಿದ್ದಾರೆ. ಇದರೊಂದಿಗೆ, 3 ವರ್ಷ ಹಳೆಯ ಕೊಲೆ ಪ್ರಕರಣವೊಂದನ್ನು ಪೊಲೀಸರು ಬಯಲಿಗೆಳೆದಂತಾಗಿದೆ.

# ಗೊಬ್ಬರದ ಗುಂಡಿಗೆ ಬಿದ್ದು ಎರಡು ವರ್ಷದ ಮಗು ಸಾವು



**ಕಾರವಾರ:** ತಂದೆಯ ನಿರ್ಲಕ್ಷ್ಯದಿಂದ ಗೊಬ್ಬರದ ಗುಂಡಿಗೆ ಬಿದ್ದು ಎರಡು ವರ್ಷದ ಹೆಣ್ಣುಮಗು ಸಾವನ್ನಪ್ಪಿದ ಘಟನೆ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಡೊಂಗ್ರಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಹಳವಳ್ಳಿಯಲ್ಲಿ ನಡೆದಿದೆ. ಸಾದ್ವಿ ಶ್ರೀಕಾಂತ್ ಹೆಬ್ಬಾರ್ (2) ಮೃತ ಹೆಣ್ಣುಮಗು. ಶ್ರೀಕಾಂತ್ ಹೆಬ್ಬಾರ್ ದನದ ಕೊಟ್ಟಿಗೆ ಕೆಲಸಕ್ಕಾಗಿ ಕೊಟ್ಟಿಗೆಗೆ ತೆರಳಿದ್ದು, ಇವರೊಂದಿಗೆ ಪುಟ್ಟ ಮಗುವನ್ನು ಕರೆದುಕೊಂಡು ಹೋಗಿದ್ದರು. ಈ ವೇಳೆ ಮಗು ಆಟವಾಡುತ್ತಾ ಕೊಟ್ಟಿಗೆ ಬಳಿ ಇದ್ದ ಗೊಬ್ಬರದ ಗುಂಡಿಗೆ ಬಿದ್ದಿದೆ. ಕೊಟ್ಟಿಗೆಯಲ್ಲಿ ಕೆಲಸದಲ್ಲಿ ಮಗ್ನರಾಗಿದ್ದ ಶ್ರೀಕಾಂತ್ ಮಗುವಿನ ಚಲನವಲನದ ಬಗ್ಗೆ ಗಮನ ಹರಿಸಿರಲಿಲ್ಲ. ಮಗು ಸದ್ದು ಮಾಡದಿದ್ದುದನ್ನು ಗಮನಿಸಿ ಹುಡುಕಿದಾಗ ಗೊಬ್ಬರದ ಗುಂಡಿಯಲ್ಲಿ ಬಿದ್ದಿರುವುದು ಗೊತ್ತಾಗಿದೆ. ತಕ್ಷಣವೇ ಅಂಕೋಲದ ಆಸ್ಪತ್ರೆಗೆ ಕರೆದೊಯ್ಯಲಾಯಿತಾದರೂ ಅಷ್ಟು ಹೊತ್ತಿಗಾಗಲೇ ಮಗುವಿನ ಪ್ರಾಣಪಕ್ಷಿ ಹಾರಿಹೋಗಿತ್ತು.

**ಪಟ್ಟಣ ಪಂಚಾಯಿತಿ ಕಾರ್ಯಾಲಯ, ಕಡಕೊಳ, ಮೈಸೂರು ಜಿಲ್ಲೆ.**
ಟೌನ್ ಪಂಚಾಯಿತ್, ಕಡಕೊಳ, ಮೈಸೂರು ಜಿಲ್ಲೆ -571311
ಕಛೇರಿ : 0821-2970319, ಇಮೇಲ್: itstaff_ulb_kadakola@yahoo.com

ಸಂ: ಪ.ಪಂ.ಕ/ತಾ.ಶಾ./ಟೆ.ಪ್ರ./ಸಿ.ಆರ್-01/2025-26 ದಿನಾಂಕ: 25.06.2025

**ಟೆಂಡರ್ ಪ್ರಕಟಣೆ** (ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ)

ಕಡಕೊಳ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ 2024-25 & 2025-26ನೇ ಸಾಲಿನ ಎಸ್.ಎಫ್.ಸಿ ಕುಡಿಯುವ ನೀರು ಅನುದಾನ ಮತ್ತು ಪಟ್ಟಣ ಪಂಚಾಯಿತಿ ಸಾಮಾನ್ಯ ನಿಧಿಯಡಿ ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸಲು ಲೋಕೋಪಯೋಗಿ ಇಲಾಖೆಯಲ್ಲಿ ಚಾಲ್ತಿ ಸಾಲಿಗೆ ನೊಂದಾಯಿತ ಅರ್ಹ ಸಿವಿಲ್ ಗುತ್ತಿಗೆದಾರರಿಂದ KW-1ರ ನಿಯಮಗಳ ಅನ್ವಯ ಮತ್ತು ಕಡಕೊಳ ಪಟ್ಟಣ ಪಂಚಾಯಿತಿ ಕಛೇರಿಗೆ ಅವಶ್ಯವಿರುವ ಮಾನವ ಸಂಪನ್ಮೂಲವನ್ನು ಹೊರಗುತ್ತಿಗೆ ಆಧಾರದ ಮೇಲೆ ಸರಬರಾಜು ಮಾಡಲು, 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು **https://kppp.karnataka.gov.in** ಪೋರ್ಟಲ್ ಮುಖಾಂತರ ಈ ಕೆಳಕಂಡ ಕಾಮಗಾರಿಗಳಿಗೆ ಟೆಂಡರ್ ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಗುತ್ತಿಗೆದಾರರು **https://kppp.karnataka.gov.in** ನಿಂದ ಟೆಂಡರ್ ಷರತ್ತು ಹಾಗೂ ದಾಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಇ-ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು.

1. ಭರ್ತಿ ಮಾಡಿದ ಟೆಂಡರ್‌ನ್ನು ಸಲ್ಲಿಸಲು ಕಡೆಯ **ದಿನಾಂಕ: 11/07/2025 ಸಂಜೆ 5.30 ಗಂಟೆಯವರೆಗೆ**
2. ಟೆಂಡರ್ ತೆರೆಯುವ **ದಿನಾಂಕ: 14/07/2025ರ ಬೆಳಿಗ್ಗೆ 11.30 ಗಂಟೆಗೆ** ಅಥವಾ ಮುಂದೆ ಸೂಚಿಸುವ ದಿನಾಂಕದಂದು ತೆರೆಯಲಾಗುವುದು.

| ಕ್ರ. ಸಂ. | ಕಾಮಗಾರಿ ಇಂಡೆಂಟ್ ಸಂಖ್ಯೆ | ಕಾಮಗಾರಿ ಮೊತ್ತ (ರೂ.ಲಕ್ಷಗಳಲ್ಲಿ) | ಇ.ಎಂ.ಡಿ.ಮೊತ್ತ (ರೂ.ಗಳಲ್ಲಿ) |
|---|---|---|---|
| 1. | DMA/2025-26/WS/WORK INDENT42984 | 5.00 | 12500 |
| 2. | DMA/2025-26/WS/WORK INDENT42982 | 3.53 | 8825 |
| 3. | DMA/2024-25/OW/WORK INDENT38225/CALL-2 | 10.50 | 26250 |
| 4. | DMA/2025-26/SE5594 | 14.03 | 35100 |
| 5. | DMA/2025-26/IND4806 | 1.02 | 2550 |

**ಸೂಚನೆ: 1)** ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಿದ್ದಲ್ಲಿ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಹೆಚ್ಚಿನ ವಿವರಗಳಿಗೆ ಸರಬರಾಜುದಾರರು **https://kppp.karnataka.gov.in** ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

ಸಹಿ/- ಆಡಳಿತಾಧಿಕಾರಿಗಳು, ಪಟ್ಟಣ ಪಂಚಾಯಿತಿ, ಕಡಕೊಳ
ಸಹಿ/- ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯಿತಿ, ಕಡಕೊಳ

DIPR/MYS/KAVITA/529/24-25

## ಹೆತ್ತ ತಾಯಿಯನ್ನೇ ಕೊಲೆಗೈದು ಸುಟ್ಟು ಹಾಕಿದ ಪಾಪಿ ಮಗ

**ಮಂಗಳೂರು:** ಹೆತ್ತ ತಾಯಿಯನ್ನೇ ಕೊಲೆಗೈದು ಪುತ್ರ ಸುಟ್ಟು ಹಾಕಿರುವ ಘಟನೆ ಮಂಗಳೂರು ಗಡಿಭಾಗ ಕಾಸರಗೋಡಿನ ವರ್ಕಾಡಿಯಲ್ಲಿ ನಡೆದಿದೆ.

ನಲ್ಲೆಂಗಿಯ ಹಿಲ್ಡಾ ಮೊಂತೇರೊ (59) ಕೊಲೆಗೀಡಾದ ದುರ್ದೈವಿ. ಮೆಲ್ವಿನ್ ಮೊಂತೇರೊ (26) ಕೃತ್ಯ ಎಸಗಿರುವ ಆರೋಪಿ ಮಗ. ಘಟನೆಯಲ್ಲಿ ನೆರೆಮನೆಯ ಲೋಲಿಟಾ ಎಂಬವರಿಗೂ ಗಂಭೀರ ಸುಟ್ಟ ಗಾಯಗಳಾಗಿವೆ.

ಮೃತ ಹಿಲ್ಡಾ ಪುತ್ರ ಮೆಲ್ವಿನ್ ಮೊಂತೆರೋನೊಂದಿಗೆ ವಾಸವಾಗಿದ್ದರು. ರಾತ್ರಿ ಊಟ ಮಾಡಿ ಮಲಗಿದ್ದ ಹಿಲ್ಡಾರನ್ನು ಮುಂಜಾನೆ ಕೊಲೆಗೈದು, ಮೃತದೇಹವನ್ನು ಮನೆಯ ಹಿಂಬದಿಗೆ ಕೊಂಡೊಯ್ದು ಬೆಂಕಿ ಹಚ್ಚಿ ಸುಟ್ಟು ಹಾಕಿದ್ದಾನೆ.

ನೋಡಲು ಬಂದ ನೆರೆ ಮನೆಯವರಿಗೂ ಬೆಂಕಿ ಹಚ್ಚಿದ್ದ. ಆರೋಪಿ ಮೆಲ್ವಿನ್ ಮೊಂತೆರೋನನ್ನು ಕುಂದಾಪುರದಲ್ಲಿ ಪೊಲೀಸರು ಬಂಧಿಸಿದ್ದಾರೆ. ಮಾದಕ ವ್ಯಸನಿಯಾಗಿದ್ದ ಮೆಲ್ವಿನ್ ಮೊಂತೆರೋ, ನಶೆಯಲ್ಲಿ ಕೊಂದಿರುವ ಸಾಧ್ಯತೆ ಇದೆ ಎಂದು ಪೊಲೀಸರು ಶಂಕಿಸಿದ್ದಾರೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಕಬಿನಿ ಡ್ಯಾಂಗೆ ಶಿವಣ್ಣ ದಂಪತಿ ಭೇಟಿ

ಮೈಸೂರಿನ ಹೆಚ್.ಡಿ.ಕೋಟೆಯ ಬೀಚನಹಳ್ಳಿಯಲ್ಲಿನ ಕಬಿನಿ ಡ್ಯಾಂಗೆ ನಟ ಶಿವರಾಜ್ ಕುಮಾರ್ ತಮ್ಮ ಪತ್ನಿ ಸಮೇತ ಭೇಟಿ ನೀಡಿದ್ದರು. ಕಬಿನಿ ಡ್ಯಾಂನಲ್ಲಿ ಶಿವಣ್ಣ ಜೊತೆ ಫೋಟೊಗೆ ಅಭಿಮಾನಿಗಳು ಮುಗಿಬಿದ್ದರು. ರಸ್ತೆಯಲ್ಲಿ ಹೋಗುವಾಗ ಹಾಡಿ ಮಕ್ಕಳನ್ನ ಕಂಡು ಮಕ್ಕಳ ಜೊತೆ ಶಿವಣ್ಣ ದಂಪತಿ ಫೋಟೊ ತೆಗೆಸಿಕೊಂಡರು. 1986ರಲ್ಲಿ 'ಆನಂದ್' ಸಿನಿಮಾ ಮೂಲಕ ಸ್ಯಾಂಡಲ್‌ವುಡ್‌ಗೆ ಶಿವಣ್ಣ ಎಂಟ್ರಿ ಕೊಟ್ಟರು. ಸಿನಿ ಜರ್ನಿಯಲ್ಲಿ 40 ವರ್ಷ ಪೂರೈಸಿದ್ದಾರೆ. ಕನ್ನಡದ ಜನಮಾನಸದಲ್ಲಿ ಹ್ಯಾಟ್ರಿಕ್ ಹೀರೋ, ಸೆಂಚುರಿ ಸ್ಟಾರ್ ಆಗಿ ಉಳಿದಿದ್ದಾರೆ. ಶಿವರಾಜ್‌ಕುಮಾರ್ ಸದ್ಯ 125 ಸಿನಿಮಾಗಳನ್ನು ಪೂರೈಸಿದ್ದಾರೆ. ಸದ್ಯ ಅವರ ಕೈಯಲ್ಲಿ ಐದಕ್ಕೂ ಹೆಚ್ಚು ಪ್ರಾಜೆಕ್ಟ್‌ಗಳಿವೆ. ಕೆಲ ದಿನಗಳ ಹಿಂದಷ್ಟೇ ಸಿನಿಪಯಣದಲ್ಲಿ 40 ವರ್ಷದ ಪೂರೈಸಿದ ಸಂಭ್ರಮವನ್ನು ಶಿವಣ್ಣ ಮಿಂದೆದ್ದರು.





# ಮತ್ತೆ ಬಣ್ಣಕ್ಕೆ ಮರಳುವ ಸುಳಿವು ಕೊಟ್ಟರಾ ನಟಿ ಅಮೂಲ್ಯ

ಮದುವೆಯ ಬಳಿಕ ನಟಿ ಅಮೂಲ್ಯ ಬಣ್ಣ ಹಚ್ಚಲಿಲ್ಲ. ಹಾಗಂತ ಬಣ್ಣಕ್ಕೆ ಅವರು ವಿದಾಯವನ್ನೂ ಹೇಳಿರಲಿಲ್ಲ. ಅನೇಕ ವರ್ಷಗಳಿಂದ ಅವರು ನಟನೆಗೆ ರೀ-ಎಂಟ್ರಿ ಕೊಡ್ತಾರೆ ಎಂಬ ವದಂತಿ ಇದೆ. ಮಕ್ಕಳಿಬ್ಬರೂ ಬೆಳೆದು ದೊಡ್ಡವರಾಗುತ್ತಿದ್ದಾರೆ. ಅಮೂಲ್ಯ ಲುಕ್ ವಿಚಾರದಲ್ಲೂ ಮತ್ತದೇ ಹಳೆಯ ಚಾರ್ಮ್‌ಗೆ ಮರಳಿದ್ದಾರೆ. ಇದೀಗ ಅವರು ಪೋಸ್ಟ್ ಮಾಡಿರುವ ಹೊಸದೊಂದು ಫೋಟೋಶೂಟ್ ಮತ್ತೆ ಮರಳುವ ತಯಾರಿಯ ಸುಳಿವನ್ನ ನೀಡುತ್ತಿದೆ.

ಸಾಮಾನ್ಯವಾಗಿ ಸಾಂಪ್ರದಾಯಿಕವಾಗೇ ಕಾಣಿಸಿಕೊಳ್ಳುವ ಅಮೂಲ್ಯ ಇದೀಗ ಜಬರ್ದಸ್ತ್ ಮಾಡರ್ನ್ ಲುಕ್‌ನಲ್ಲಿ ಫೋಟೋಶೂಟ್ ಮಾಡಿಸಿದ್ದಾರೆ. ಕಪ್ಪು ಬಿಳಿ ಮಾಡರ್ನ್ ಬಟ್ಟೆ ಧರಿಸಿ ಕನ್ನಡಿಯಲ್ಲಿ ಪ್ರತಿಬಿಂಬ ಕಾಣುವಂತೆ ಪೋಸ್ ಕೊಟ್ಟಿದ್ದಾರೆ. ಇದಕ್ಕವರು ವಿಶೇಷ ಕ್ಯಾಪ್ಷನ್ ಕೊಟ್ಟಿದ್ದು ''ಜೀವನವು ಅಸ್ಪಷ್ಟವಾದಾಗ ನಿಮ್ಮ ಗಮನವನ್ನು ಹೊಂದಿಸಿ'' ಎಂದಿದ್ದಾರೆ. ಇದರರ್ಥ ಸಿನಿಮಾಕ್ಕೆ ಮರಳುವತ್ತ ಗಮನ ಕೊಡ್ತಿದ್ದಾರೆ ಎನ್ನಬಹುದೇ?

ಸಿನಿಮಾರಂಗದಲ್ಲಿ ಪೀಕ್‌ನಲ್ಲಿದ್ದಾಗಲೇ ಅಮೂಲ್ಯ ಮದುವೆಯಾಗಿ ನಟನೆಯಿಂದ ಬ್ರೇಕ್ ಪಡೆದುಕೊಂಡರು. ಮುಗುಳುನಗೆ ಚಿತ್ರವೇ ಕೊನೆ. ಮತ್ತೆ ಅವರು ಬಿಗ್‌ಸ್ಕ್ರೀನ್‌ನಲ್ಲಿ ಕಾಣಿಸ್ಕೊಂಡಿರಲಿಲ್ಲ. ಮದುವೆ ಮಕ್ಕಳು ಎಂದು ಬ್ಯುಸಿಯಾಗಿದ್ದ ಅಮೂಲ್ಯ ಮತ್ತೆ ಬಣ್ಣಕ್ಕೆ ಮರಳಲಿದ್ದಾರೆ ಎಂಬ ವದಂತಿಗೆ ಪುಷ್ಟಿ ನೀಡುವಂತೆ ಇದೀಗ ಅಮೂಲ್ಯ ಫೋಟೋಶೂಟ್ ನಯಾ ಚಾಪ್ಟರ್ ಶುರುಮಾಡುತ್ತಿದೆ.

# ದೂರ ತೀರ ಯಾನ ಚಿತ್ರದಲ್ಲಿ ಶ್ರುತಿ ಹರಿಹರನ್ ಗೆಸ್ಟ್

ಮಂಸೋರೆ ನಿರ್ದೇಶಿಸಿರುವ 'ದೂರ ತೀರ ಯಾನ' ಸಿನೆಮಾ ಇದೇ ಜುಲೈ 11 ರಂದು ರಾಜ್ಯದಾದ್ಯಂತ ತೆರೆಕಾಣುತ್ತಿದೆ. ಈಗಾಗಲೇ ಬಿಡುಗಡೆ ಆಗಿರುವ ಸಿನೆಮಾದ ಎರಡು ಹಾಡುಗಳು ಜನರ ಮನ್ನಣೆ ಗಳಿಸುತ್ತಿವೆ. ಸಿನೆಮಾ ಆರಂಭದಿಂದ ಇಲ್ಲಿಯವರೆಗೂ ನಾಯಕಿ ಮತ್ತು ನಾಯಕನ ಪಾತ್ರಗಳನ್ನು ಹೊರತುಪಡಿಸಿ ಉಳಿದ ತಾರಾಗಣದ ಪರಿಚಯ ಮಾಡಿಸದೇ ಬಂದಿದ್ದ ಸಿನೆಮಾ ತಂಡ ಈಗ ಉಳಿದ ಪಾತ್ರಗಳ ಪರಿಚಯ ಆರಂಭಿಸಿದ್ದಾರೆ. ಅದರಲ್ಲಿ ಮೊದಲ ಪಾತ್ರ, ಗೌರಿ. ಈ ಪಾತ್ರದಲ್ಲಿ ನಟಿಸಿರುವವರು ಕನ್ನಡದ ಖ್ಯಾತ ನಟಿ ಶೃತಿ ಹರಿಹರನ್. ಕನ್ನಡ ಚಿತ್ರರಂಗದ ಇತಿಹಾಸದಲ್ಲಿ ಮೈಲಿಗಲ್ಲು ಸ್ಥಾಪಿಸಿದ ಸಿನೆಮಾ ''ನಾತಿಚರಾಮಿ''. ಮಂಸೋರೆ ನಿರ್ದೇಶನ ಮಾಡಿದ್ದ ಈ ಸಿನೆಮಾ ಕನ್ನಡ ಚಿತ್ರರಂಗದ ಇತಿಹಾಸದಲ್ಲೇ ಒಂದೇ ಸಿನೆಮಾಗೆ ಐದು ರಾಷ್ಟ್ರ ಪ್ರಶಸ್ತಿಗಳನ್ನು ಪಡೆಯುವ ಮೂಲಕ ಇತಿಹಾಸವನ್ನು ಸೃಷ್ಟಿಸಿತ್ತು. ಇದು ಕೇವಲ ಪ್ರಶಸ್ತಿಯ ಕಾರಣಕಷ್ಟೇ ಅಲ್ಲದೇ ಈ ಸಿನೆಮಾದ ಕಥಾ ವಸ್ತುವೂ ಹೆಚ್ಚು ಚರ್ಚಿತವಾಗಿ, ನೆಟ್ ಫ್ಲಿಕ್ಸ್ ಮೂಲಕ ದೇಶ ವಿದೇಶದ ಸಿನಿ ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಗಿತ್ತು. ಈ ಸಿನೆಮಾದಲ್ಲಿ ಗೌರಿ ಪಾತ್ರ ಮಾಡಿದ್ದ ಶೃತಿ ಹರಿಹರನ್ ಮತ್ತೆ ಮಂಸೋರೆ ಅವರ ಹೊಸ ಸಿನೆಮಾದಲ್ಲಿ ವಿಶೇಷ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಅವರ ಪಾತ್ರ ಪರಿಚಯದ ವಿಡಿಯೋ ಒಂದನ್ನು ಚಿತ್ರತಂಡ ಬಿಡುಗಡೆಗೊಳಿಸಿದೆ. ನಾತಿಚರಾಮಿಯ ದಿಟ್ಟ ಮಹಿಳೆ 'ಗೌರಿ' ಕನ್ನಡ ಚಿತ್ರರಂಗದಲ್ಲೇ ಒಂದು ಐಕಾನಿಕ್ ಪಾತ್ರ. ಕನ್ನಡ ಸಿನೆಮಾಗಳಲ್ಲಿ ನಿರ್ದೇಶಕರು ತಮ್ಮದೇ ಸಿನೆಮಾದ ಪಾತ್ರಗಳನ್ನು ಮತ್ತೊಂದು ಸಿನೆಮಾದಲ್ಲಿ ತರುವುದರ ಮೂಲಕ ತಮ್ಮದೇ ಆದ ಸಿನೆಮಾ ಪ್ರಪಂಚವನ್ನು ಸೃಷ್ಟಿಸಿರುವುದು ಅಪರೂಪ. ಅಂತಹ ಅಪರೂಪದ ಜಗತ್ತನ್ನು ಮಂಸೋರೆಯವರು ತಮ್ಮ ದೂರ ತೀರ ಯಾನದಲ್ಲಿ ಸೃಷ್ಟಿರುವ ಪ್ರಯತ್ನವನ್ನು ಈ ವಿಡಿಯೋದಲ್ಲಿ ಕಾಣಬಹುದು. ಇಂತಹ ಅಚ್ಚರಿ ನೀಡಿರುವ ಮಂಸೋರೆ ಮತ್ತು ಗೌರಿ ಕಾಂಬಿನೇಶನ್ ತೆರೆಯ ಮೇಲೆ ಯಾವ ರೀತಿ ಮ್ಯಾಜಿಕ್ ಮಾಡಲಿದ್ದಾರೆ ಎಂಬ ಕುತೂಹಲ ಅವರ ಪ್ರೇಕ್ಷಕ ವರ್ಗದಲ್ಲಿ ದೂರ ತೀರ ಯಾನ ಸಿನೆಮಾದ ಬಗ್ಗೆ ಕುತೂಹಲ ಹೆಚ್ಚಿಸುವಂತೆ ಮಾಡಿದೆ. ದೂರ ತೀರ ಯಾನ ಸಿನೆಮಾ ಸೆನ್ಸಾರ್ ಪೂರ್ಣಗೊಳಿಸಿ ಯು/ಎ ಪ್ರಮಾಣ ಪತ್ರವನ್ನು ಪಡೆದಿದ್ದು ಪ್ರಚಾರ ಕಾರ್ಯಗಳಲ್ಲಿ ನಿರತವಾಗಿದೆ, ಕನ್ನಡದ ಖ್ಯಾತ ನಟರಾದ ಕಿಚ್ಚ ಸುದೀಪ್ ರವರು ಜೂನ್ 28 ಶನಿವಾರ, ಬೆಳಗ್ಗೆ 11 ಗಂಟೆಗೆ ಡಿಜಿಟಲ್ ಮೂಲಕ ಸಿನೆಮಾದ ಟ್ರೈಲರ್ ಅನಾವರಣಗೊಳಿಸಲಿದ್ದಾರೆ.






# ತಲೈವಾ ಭೇಟಿಯಾದ ಧನ್ಯಾ ರಾಮ್‌ಕುಮಾರ್..

ಡಾ.ರಾಜ್‌ಕುಮಾರ್ ಹಾಗೂ ತಲೈವಾ ರಜನಿಕಾಂತ್ ಅವರ ನಡುವೆ ಗಾಢವಾದ ಗೆಳೆತನವಿತ್ತು. ರಜನಿಕಾಂತ್ ಅವರಿಗೆ ಈಗಲೂ ರಾಜ್‌ಕುಮಾರ್ ಕುಟುಂಬದ ಜೊತೆಗಿನ ನಂಟು, ಕುಟುಂಬದ ಮೇಲಿನ ಪ್ರೀತಿ, ಗೌರವ ಚೆನ್ನಾಗಿಯೇ ಇದೆ. ಇದೀಗ ರಾಜ್‌ಕುಮಾರ್ ಮೊಮ್ಮಗಳು ಧನ್ಯಾ ರಾಮ್‌ಕುಮಾರ್ ತಾಯಿ ಪೂರ್ಣಿಮಾ ಅವರೊಂದಿಗೆ ರಜನಿಕಾಂತ್‌ರನ್ನ ಭೇಟಿಯಾಗಿದ್ದಾರೆ. ಈ ಫೋಟೋಗಳನ್ನ ಇನ್‌ಸ್ಟಾಗ್ರಾಮ್‌ನಲ್ಲಿ ಧನ್ಯಾ ಶೇರ್ ಮಾಡಿದ್ದಾರೆ.

ಡಾ.ರಾಜ್‌ಕುಮಾರ್ ಪುತ್ರಿ ಪೂರ್ಣಿಮಾ ಕುರಿತು ರಜನಿಕಾಂತ್ ಅವರಿಗೆ ಪರಿಚಯ ಹಿಂದಿನಿಂದಲೂ ಇರುತ್ತೆ. ಆದರೆ ಧನ್ಯ ಈಗಿನ ಜನರೇಶನ್ ಆಗಿರೋದ್ರಿಂದ ಕಾಂಟ್ಯಾಕ್ಟ್ ಕಡಿಮೆ ಇರಬಹುದು. ಆದರೀಗ ದಿಢೀರ್ ಎಂದು ರಜನಿಕಾಂತ್ ಜೊತೆ ಧನ್ಯಾ ಪೋಸ್ಟ್ ಮಾಡಿರುವ ಫೋಟೋವನ್ನ ಥಟ್ ಅಂತ ನೋಡಿದ್ರೆ, ಜೊತೆಯಲ್ಲಿ ಸಿನಿಮಾ ಮಾಡ್ತಿದ್ದಾರೆ ಅನ್ನೋ ಅನುಮಾನ ಬರುತ್ತೆ. ಆದ್ರೆ ಇದು ಚಿತ್ರಕ್ಕಾಗಿ ಆಗಿರುವ ಭೇಟಿಯಲ್ಲ. ಜಸ್ಟ್ ಕ್ಯಾಶುವಲ್ ಭೇಟಿ.

ಅಮ್ಮನ ಜೊತೆ ಧನ್ಯಾ ಮೈಸೂರಿಗೆ ಹೋಗಿದ್ದಾರೆ ಅಲ್ಲಿ ರಜನಿಕಾಂತ್ ಅವರ 'ಜೈಲರ್-2' ಚಿತ್ರೀಕರಣ ನಡೆಯುತ್ತಿರುವುದು ಇವರಿಗೆ ತಿಳಿದಿತ್ತು. ಬಳಿಕ ಭೇಟಿಯಾಗಿ ಒಬ್ಬರಿಗೊಬ್ಬರು ಕುಶಲೋಪರಿ ವಿಚಾರಿಸಿಕೊಂಡಿದ್ದಾರೆ.

ಮೈಸೂರಲ್ಲಿ ಜೈಲರ್-2 ಚಿತ್ರೀಕರಣ ನಡೆಯುತ್ತಿತ್ತು. ಐದಾರು ದಿನ ಚಿತ್ರೀಕರಣವಾಗಿದೆ. ಈ ವೇಳೆ ರಜನಿಕಾಂತ್ ಮೈಸೂರಿನ ಹೋಟೇಲ್ ನಲ್ಲೇ ತಂಗಿದ್ದಾರೆ. ಈ ವೇಳೆ ಶೂಟಿಂಗ್ ಸ್ಪಾಟ್ ಗೆ ತೆರಳಿದ್ದ ಧನ್ಯ ಹಾಗೂ ಪೂರ್ಣಿಮಾ ರಾಮ್ ಕುಮಾರ್ ರಜನಿಕಾಂತ್‌ರನ್ನ ಭೇಟಿಯಾಗಿದ್ದಾರೆ. ಆ ಫೋಟೋಗಳು ಈಗ ವೈರಲ್ ಆಗಿದೆ.



## ಭಾರತ, ಪಾಕ್ ಮಧ್ಯೆ ಜುಲೈ 20 ರಂದು

# ಹೈವೋಲ್ಟೇಜ್ ಮ್ಯಾಚ್

ಭಾರತ ಮತ್ತು ಪಾಕಿಸ್ತಾನ ನಡುವಿನ ಬಹುನಿರೀಕ್ಷಿತ ಟಿ-20 ಕ್ರಿಕೆಟ್ ಪೈಪೋಟಿ ಮತ್ತೆ ಆರಂಭವಾಗಲಿದ್ದು ಜುಲೈ 20 ರಂದು ಎರಡು ತಂಡಗಳು ಮುಖಾಮುಖಿಯಾಗಲಿವೆ.

ಟೂರ್ನಿಯಲ್ಲಿ ಟೀಂ ಇಂಡಿಯಾದ ಸದಸ್ಯರು ಆಡುತ್ತಿಲ್ಲ. ಬದಲಾಗಿ ಟೀ ಇಂಡಿಯಾಗೆ ನಿವೃತ್ತಿ ಹೇಳಿದ ಹಿರಿಯ ಆಟಗಾರರು ಆಡಲಿದ್ದಾರೆ.

ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ 2025ರ ಭಾಗವಾಗಿ ಭಾರತ ಚಾಂಪಿಯನ್ಸ್ ಮತ್ತು ಪಾಕಿಸ್ತಾನ ಚಾಂಪಿಯನ್ಸ್ ಮಧ್ಯೆ ಜುಲೈ 20 ರಂದು ಬರ್ಮಿಂಗ್ಹ್ಯಾಮ್‌ನ ಎಡ್ಜ್‌ಬಾಸ್ಟನ್‌ನಲ್ಲಿ ಲೀಗ್ ಪಂದ್ಯ ನಡೆಯಲಿದೆ. ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್‌ನ ಎರಡನೇ ಆವೃತ್ತಿಯು ಜುಲೈ 18 ರಂದು ಪ್ರಾರಂಭವಾಗಲಿದ್ದು ಯುವರಾಜ್ ಸಿಂಗ್ ಭಾರತ ತಂಡವನ್ನು ಮುನ್ನಡೆಸಲಿದ್ದರೆ ಯೂನಿಸ್ ಖಾನ್ ಪಾಕಿಸ್ತಾನ ಚಾಂಪಿಯನ್ಸ್ ತಂಡವನ್ನು ಮುನ್ನಡೆಸಲಿದ್ದಾರೆ.

ಕಳೆದ ವರ್ಷ ವಿಶ್ವ ಚಾಂಪಿಯನ್‌ಶಿಪ್ ಆಫ್ ಲೆಜೆಂಡ್ಸ್ ಟೂರ್ನಿ ಆರಂಭಗೊಂಡಿತ್ತು. ಫೈನಲಿನಲ್ಲಿ ಪಾಕಿಸ್ತಾನವನ್ನು ಸೋಲಿಸಿ ಭಾರತ 5 ವಿಕೆಟ್ ಜಯ ಸಾಧಿಸಿ ಕಪ್ ಗೆದ್ದಿತ್ತು. ಭಾರತ, ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ, ಇಂಗ್ಲೆಂಡ್, ಪಾಕಿಸ್ತಾನ, ವೆಸ್ಟ್ ಇಂಡೀಸ್‌ನ ಹಿರಿಯ ಆಟಗಾರರು ಈ ಟೂರ್ನಿಯಲ್ಲಿ ಭಾಗವಹಿಸುತ್ತಾರೆ.



ಭಾರತ ಚಾಂಪಿಯನ್ಸ್ ತಂಡ: ಯುವರಾಜ್ ಸಿಂಗ್ (ನಾಯಕ), ಸುರೇಶ್ ರೈನಾ, ರಾಬಿನ್ ಉತ್ತಪ್ಪ, ಮೊಹಮ್ಮದ್ ಕೈಫ್, ಇರ್ಫಾನ್ ಪಠಾಣ್, ಪಾರ್ಥಿವ್ ಪಟೇಲ್, ವಿನಯ್ ಕುಮಾರ್, ಹರ್ಭಜನ್ ಸಿಂಗ್, ಪ್ರಗ್ಯಾನ್ ಓಜಾ, ಯೂಸುಫ್ ಪಠಾಣ್, ನಮನ್ ಓಜಾ, ಮುನಾಫ್ ಪಟೇಲ್, ರಿತಿಂದರ್ ಸಿಂಗ್ ಸೋಧಿ, ಆರ್‌ಪಿ ಸಿಂಗ್, ಅಶೋಕ್ ದಿಂಡಾ.

ಪಾಕಿಸ್ತಾನ ಚಾಂಪಿಯನ್ಸ್ ತಂಡ: ಯೂನಿಸ್ ಖಾನ್ (ನಾಯಕ), ಶಾಹಿದ್ ಅಫ್ರಿದಿ, ಶೋಯೆಬ್ ಮಲಿಕ್, ಮಿಸ್ಬಾ-ಉಲ್-ಹಕ್, ಇಮ್ರಾನ್ ನಜೀರ್, ಮೊಹಮ್ಮದ್ ಹಫೀಜ್, ಕಮ್ರಾನ್ ಅಕ್ಮಲ್, ಸಲ್ಮಾನ್ ಬಟ್, ಅಬ್ದುಲ್ ರಜಾಕ್, ವಹಾಬ್ ರಿಯಾಜ್, ಮೊಹಮ್ಮದ್ ಆಮಿರ್, ಯಾಸಿರ್ ಅರಾಫತ್, ಸೊಹೈಲ್ ತನ್ವೀರ್, ಸಯೀದ್ ಅಜ್ಮಲ್, ಉಮರ್ ಗುಲ್.

## ಬುಮ್ರಾ ವಿಚಾರವನ್ನು ಬಹಿರಂಗಪಡಿಸಿದ್ಯಾಕೆ?

# ಬಿಸಿಸಿಐ ವಿರುದ್ಧ ಮಾಜಿ ಕ್ರಿಕೆಟಿಗ ಗರಂ

ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯವನ್ನು ಸೋತಿರುವ ಟೀಂ ಇಂಡಿಯಾವನ್ನು ಎಲ್ಲಾ ಕಡೆಯಿಂದ ಟೀಕಿಸಲಾಗುತ್ತಿದೆ. ಇದಕ್ಕೆ ಕಾರಣವೂ ಇದ್ದು, ತಂಡದಿಂದ ಐದು ಶತಕ ಸಿಡಿದರೂ, ಮೊದಲ ಇನ್ನಿಂಗ್ಸ್‌ನಲ್ಲಿ ಬುಮ್ರಾ 5 ವಿಕೆಟ್ ಪಡೆದರೂ ತಂಡ ಸೋಲಬೇಕಾಯಿತು. ಇದಕ್ಕೆ ಪ್ರಮುಖ ಕಾರಣ, ಕೆಳ ಕ್ರಮಾಂಕದ ಕಳಪೆ ಬ್ಯಾಟಿಂಗ್ ಹಾಗೂ ಕಳಪೆ ಫೀಲ್ಡಿಂಗ್. ಇವೆರಡು ನ್ಯೂನತೆಗಳಿಂದ ಟೀಂ ಇಂಡಿಯಾ ಗೆಲ್ಲುವ ಪಂದ್ಯವನ್ನು ಕೈಚೆಲ್ಲಿತು ಎಂಬುದು ಅಭಿಮಾನಿಗಳಿಂದ ಹಿಡಿದು ಕ್ರಿಕೆಟ್ ಪಂಡಿತರ ವಾದವಾಗಿದೆ. ಏತನ್ಮಧ್ಯೆ, ಮಾಜಿ ಕ್ರಿಕೆಟಿಗ ಆಕಾಶ್ ಚೋಪ್ರಾ ವಿಭಿನ್ನ ವಿಷಯವನ್ನು ಮುನ್ನಲೆಗೆ ತಂದಿದ್ದು, ಜಸ್ಪ್ರೀತ್ ಬುಮ್ರಾ ಎಲ್ಲಾ ಟೆಸ್ಟ್ ಪಂದ್ಯಗಳನ್ನು ಆಡುವುದಿಲ್ಲ ಎಂಬ ಗೌಪ್ಯ ವಿಚಾರವನ್ನು ಟೆಸ್ಟ್ ಸರಣಿ ಆರಂಭಕ್ಕೂ ಮುನ್ನವೇ ಬಹಿರಂಗಪಡಿಸಿದ್ಯಾಕೆ ಎಂಬ ಪ್ರಶ್ನೆಯನ್ನು ಮುಂದಿಟ್ಟಿದ್ದಾರೆ.



### ಆಕಾಶ್ ಚೋಪ್ರಾ ಪ್ರಶ್ನೆ ಏನು?

**ತಮ್ಮ ಯೂಟ್ಯೂಬ್ ಚಾನೆಲ್‌ನಲ್ಲಿ ಅಭಿಪ್ರಾಯ ಹಂಚಿಕೊಂಡಿರುವ ಆಕಾಶ್ ಚೋಪ್ರಾ, 'ಬುಮ್ರಾ ಒಂದು ಸಂದರ್ಶನದಲ್ಲಿ ತಾನು ಕೇವಲ ಮೂರು ಪಂದ್ಯಗಳನ್ನು ಮಾತ್ರ ಆಡುತ್ತೇನೆ ಎಂದು ಹೇಳಿದರು. ಈಗ ಇದನ್ನು ಸಾರ್ವಜನಿಕಗೊಳಿಸುವ ಅಗತ್ಯ ನಿಜವಾಗಿಯೂ ಇತ್ತ ಎಂಬುದು ನನ್ನ ಪ್ರಶ್ನೆ. ಇದನ್ನು ಏಕೆ ರಹಸ್ಯವಾಗಿಡಲಿಲ್ಲ? ನಾವು ನಮ್ಮ ಆಡುವ ಹನ್ನೊಂದರ ಬಳಗವನ್ನು ಸರಣಿ ಆರಂಭಕ್ಕೂ ಮುನ್ನವೇ ಘೋಷಿಸಿರಲಿಲ್ಲ. ಹಾಗಿದ್ದಾಗ, ಈ ಸರಣಿಯ ಆರಂಭಕ್ಕೂ ಮೊದಲು, ಬುಮ್ರಾ ಕೇವಲ ಮೂರು ಪಂದ್ಯಗಳನ್ನು ಮಾತ್ರ ಆಡುತ್ತಾರೆ ಎಂದು ಪದೇ ಪದೇ ಹೇಳುವ ಅಗತ್ಯ ಏಕೆ ಇತ್ತು?. ಈ ಹಿಂದಿನ ವರದಿಯ ಪ್ರಕಾರ, ಬುಮ್ರಾ ಎಡ್ಜ್‌ಬಾಸ್ಟನ್‌ನಲ್ಲಿ ಎರಡನೇ ಟೆಸ್ಟ್ ಪಂದ್ಯವನ್ನು ಆಡಿದರೆ, ಉಳಿದ ಮೂರು ಪಂದ್ಯಗಳಲ್ಲಿ ಕೇವಲ ಒಂದರಲ್ಲಿ ಮಾತ್ರ ಆಡುತ್ತಾರೆ. ಆದ್ದರಿಂದ ಇಂಗ್ಲೆಂಡ್‌ಗೆ ಸರಣಿಯ ಇತರ ಪಂದ್ಯಗಳಿಗೆ ಪಿಚ್ ಸಿದ್ಧಪಡಿಸುವ ಅವಕಾಶ ಸಿಗುತ್ತದೆ ಎಂದು ಗಮನಿಸಬೇಕಾದ ವಿಷಯವನ್ನು ಚರ್ಚೆಗೆ ಹಚ್ಚಿದ್ದಾರೆ.**

# ಜೋಶಿ ವಿರುದ್ಧ ನಿಂದನೆ: ಪ್ರಕರಣ ದಾಖಲು

**ರಾಯಚೂರು:** ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹಾಗೂ ನಗರ ಶಾಸಕ ಶಿವರಾಜ್ ಪಾಟೀಲ್ ವಿರುದ್ಧ ಅವಾಚ್ಯವಾಗಿ ನಿಂದಿಸಿ ಜೀವ ಬೆದರಿಕೆ ಹಾಕಿದ ಆರೋಪದಲ್ಲಿ ಏಮ್ಸ್ ಹೋರಾಟಗಾರರ ವಿರುದ್ಧ ರಾಯಚೂರು ನಗರದ ಪಶ್ಚಿಮ ಠಾಣೆಯಲ್ಲಿ ಎಫ್ ಐಆರ್ ದಾಖಲಿಸಲಾಗಿದೆ. ರಾಯಚೂರು ಜಿಲ್ಲಾ ಬಿಜೆಪಿ ಘಟಕದ ಅಧ್ಯಕ್ಷ ವೀರನಗೌಡ ನೀಡಿದ್ದ ದೂರಿನ ಆಧಾರದಲ್ಲಿ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ. ಏಮ್ಸ್ ಹೋರಾಟಗಾರರಾದ ಅಶೋಕ್ ಜೈನ್, ಬಸವರಾಜ್ ಕಳಸ , ಎಂಆರ್ ಬೇರಿ, ಎಸ್ ಮಾರೆಪ್ಪ ಸೇರಿ ಆರು ಜನರ ಮೇಲೆ ಪ್ರಕರಣ ದಾಖಲಿಸಲಾಗಿದೆ.

**ಬಿಜೆಪಿ ನೀಡಿದ ದೂರಿನಲ್ಲೇನಿದೆ?:** ಆರೋಪಿಗಳು ಜೂನ್ 24 ರಂದು ರಾಯಚೂರಿನ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸುವಾಗ ಕೇಂದ್ರ ಸಚಿವರಾದ ಶ್ರೀ ಪ್ರಲ್ಹಾದ್ ಜೋಶಿ ಅವರಿಗೆ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಅವರು ಎಲ್ಲೇ ಸಿಕ್ಕರೂ ಅವರಿಗೆ ಕಲ್ಲಿನಿಂದ, ಬಾರಿಗೆಯಿಂದ ಮತ್ತು ಚಪ್ಪಲಿಯಿಂದ ಹೊಡೆಯುತ್ತೇವೆ ಎಂದು ಜೀವದ ಬೆದರಿಕೆ ಹಾಕಿರುತ್ತಾರೆ. ಆರೋಪಿಗಳ ಈ ಹೇಳಿಕೆಯಿಂದ ಸಮಾಜದಲ್ಲಿ ಅಶಾಂತಿಯುಂಟಾಗಿ ಸೌಹಾರ್ದತೆಗೆ ಧಕ್ಕೆಯುಂಟಾಗುತ್ತದೆ. ಒಬ್ಬ ಗೌರವಾನ್ವಿತ ಕೇಂದ್ರ ಸಚಿವರಿಗೆ ಅವಾಚ್ಯ ಶಬ್ದಗಳಿಂದ ನಿಂದನೆ ಮಾಡಿ ಕೊಲೆ ಬೆದರಿಕೆ ಹಾಕಿರುವುದರಿಂದ ತಕ್ಷಣವೇ ಆರೋಪಿಗಳು ಮತ್ತು ಅವರ ಸಹಚರರ ಮೇಲೆ ಕ್ರಿಮಿನಲ್ ಪ್ರಕರಣವನ್ನು ದಾಖಲಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ವಿನಂತಿಸುತ್ತಿದ್ದೇವೆ ಎಂದು ಪೊಲೀಸರಿಗೆ ನೀಡಿದ ದೂರಿನಲ್ಲಿ ರಾಯಚೂರು ಜಿಲ್ಲಾ ಬಿಜೆಪಿ ಘಟಕದ ಅಧ್ಯಕ್ಷ ವೀರನಗೌಡ ಉಲ್ಲೇಖಿಸಿದ್ದಾರೆ.

ಈ ದೂರಿನ ಆಧಾರದಲ್ಲಿ ಆರೋಪಿಗಳ ವಿರುದ್ಧ ಬಿಎನ್‌ಎಸ್ ಕಾಯ್ದೆಯ ಕಲಂ 325, 351(2)(3), 190 ರ ಅಡಿ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಲಾಗಿದೆ ಎಂದು ರಾಯಚೂರು ನಗರದ ಪಶ್ಚಿಮ ಠಾಣೆ ಪೊಲೀಸರು ತಿಳಿಸಿದ್ದಾರೆ.



# ಆಟೋ ದರ ಮಿನಿಮಮ್ ರೇಟ್ 36ರೂಪಾಯಿ ಏರಿಕೆ!

**ಬೆಂಗಳೂರು:** ದುಬಾರಿ ದುನಿಯಾದಲ್ಲಿ ಬೆಂಗಳೂರಿಗರಿಗೆ ಮತ್ತೊಂದು ಬೆಲೆ ಏರಿಕೆ ಬಿಸಿ ತಟ್ಟಲಿದೆ. ಆಟೋ ದರ ಏರಿಕೆ ಮಾಡಲು ಜಿಲ್ಲಾಡಳಿತ ಗ್ರೀನ್ ಸಿಗ್ನಲ್ ಕೊಟ್ಟಿದ್ದು, ಇನ್ನು ಅಧಿಕೃತ ಆದೇಶ ಹೊರ ಬೀಳುವುದು ಮಾತ್ರ ಬಾಕಿ ಇದೆ. ಈ ನಡುವೆ ಬೈಕ್ ಟ್ಯಾಕ್ಸಿ ಕೂಡ ಇಲ್ಲದೆ ಇರೋದು ಗ್ರಾಹಕರಿಗೆ ಬಿಸಿ ತಟ್ಟೋದು ನಿಶ್ಚಿತ.

ಬೆಂಗಳೂರಲ್ಲಿ ಆಟೋ ಮೀಟರ್ ದರ ಏರಿಕೆ ಮಾಡುವಂತೆ ಕಳೆದ ಮೂರು ವರ್ಷಗಳಿಂದ ಆಟೋ ಸಂಘಟನೆಗಳು ನಿರಂತರ ಹೋರಾಟ ಮಾಡುತ್ತಲೇ ಬಂದಿದ್ದವು. ಇದೀಗ ವಿಷಯವನ್ನು ಗಂಭೀರವಾಗಿ ಪರಿಗಣಿಸಿರುವ ಜಿಲ್ಲಾಡಳಿತ ಆಟೋ ಚಾಲಕರ ಮನವಿಯನ್ನು ಪುರಸ್ಕರಿಸಿ, ಆಟೋ ದರ ಏರಿಕೆ ಮಾಡಲು ಮನಸ್ಸು ಮಾಡಿದೆ. ಈಗಾಗಲೇ ಎಲ್ಲಾ ದರ ಏರಿಕೆ ಆಗಿದ್ದು, ಆಟೋ ಮೀಟರ್ ದರವನ್ನು ಏರಿಕೆ ಮಾಡಲು ಜಿಲ್ಲಾಧಿಕಾರಿ ಕೂಡಲೇ ಗ್ರೀನ್ ಸಿಗ್ನಲ್ ನೀಡಬೇಕು ಅಂತಾ ಆಟೋ ಚಾಲಕರು ಆಗ್ರಹಿಸಿದ್ದಾರೆ.

ಸದ್ಯ ಬೆಂಗಳೂರಿನಲ್ಲಿ ಆಟೋ ಮಿನಿಮಮ್ ಚಾರ್ಜ್ 30 ರೂಪಾಯಿ ಹಾಗೂ ನಂತರ ಪ್ರತಿ ಕಿಲೋ ಮೀಟರ್ ಗೆ 15 ರೂಪಾಯಿ ದರ ಇದೆ. ಇದೀಗ ಪರಿಷ್ಕೃತ ದರ ಪಟ್ಟಿ ಪ್ರಕಾರ ಮಿನಿಮಮ್ ಚಾರ್ಜ್ 36 ರೂಪಾಯಿ ಆಗಲಿದ್ದು, ಆರು ರೂಪಾಯಿ ಏರಿಕೆಯಾಗುವ ಸಾಧ್ಯತೆಯಿದೆ. ಆ ಬಳಿಕ ಪ್ರತಿ ಕಿಲೋ ಮೀಟರ್ ದರ 15 ರಿಂದ 18 ರೂಪಾಯಿಯಂತೆ ಮೂರು ರೂಪಾಯಿ ಏರಿಕೆ ಆಗಲಿದೆ. ಇದಕ್ಕೆ ಪ್ರಯಾಣಿಕರು ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ಬೆಂಗಳೂರಿನಲ್ಲಿ ಮೀಟರ್ ಹಾಕ್ತಿಲ್ಲ ಚಾಲಕರು..



ಬೆಂಗಳೂರಿನಲ್ಲಿ ಆಟೋ ಚಾಲಕರು ಮೀಟರ್ ಹಾಕೋದನ್ನೇ ಬಿಟ್ಟು ಬಿಟ್ಟಿದ್ದಾರೆ. ಅಷ್ಟು ಕೊಡಿ ಇಷ್ಟು ಕೊಡಿ ಅಂತಾರೆ. ಅದನ್ನು ಬಿಟ್ಟರೆ, ಕೆಲವು ಆಪ್‌ಗಳಲ್ಲಿ ಆಟೋ ಬುಕ್ ಮಾಡಿದರೂ ಸರ್ಕಾರ ನಿಗದಿ ಮಾಡಿದ ರೇಟ್ ಇರೋದಿಲ್ಲ. ಅದು ಸಮಯಕ್ಕೆ ತಕ್ಕಂತೆ ಬದಲಾಗುತ್ತದೆ. ಇನ್ನು ರ್‍ಯಾಪಿಡೋ ಬೈಕ್ ಟ್ಯಾಕ್ಸಿಯಲ್ಲಿ ಹೋಗೋಣ ಅನ್ಕೊಂಡ್ರೆ ಅದನ್ನೂ ಸರ್ಕಾರ ಬ್ಯಾನ್ ಮಾಡಿದೆ. ಹೈಕೋರ್ಟ್ ವಿಭಾಗೀಯ ಪೀಠದಲ್ಲಿ ವಿಚಾರಣೆ ನಡೀತಿದ್ದು, ಸದ್ಯ ಪರ ವಿರೋಧ ವಾದ ಪ್ರತಿವಾದ ನಡೆಯುತ್ತಿದೆ.

ಆಟೋ ದರ ಏರಿಕೆ ಆಗೋದು ಪಕ್ಕಾ. ಕೆಲವೇ ದಿನಗಳಲ್ಲಿ ಪರಿಷ್ಕರಣೆ ಆಗುತ್ತದೆ. ಅಪಿಡೋ ಬೈಕ್ ಟ್ಯಾಕ್ಸಿ ಕೂಡ ಇಲ್ಲ. ಆಪ್‌ನಲ್ಲಿ ಮತ್ತಷ್ಟು ಏರಿಕೆ ಆಗುತ್ತದೆ. ಆಟೋ ಡ್ರೈವರ್‌ಗಳು ಕೇಳೋದು ಕೂಡ ಗಗನದಲ್ಲೇ ಇರುತ್ತದೆ. ಒಟ್ನಾರೆ ಬೆಂಗಳೂರಿನ ಶ್ರೀಸಾಮಾನ್ಯನಿಗೆ ಹೊರೆ ಬೀಳೋದು ಗ್ಯಾರಂಟಿ.

## ಮಹದೇಶ್ವರ ಬೆಟ್ಟದಲ್ಲಿ 4 ಹುಲಿಗಳ ಅಸಹಜ ಸಾವು

# ತನಿಖೆಗೆ ಆದೇಶ

**ಬೆಂಗಳೂರು/ಚಾಮರಾಜನಗರ:** ಮಲೆ ಮಹದೇಶ್ವರ ಬೆಟ್ಟದ ಅರಣ್ಯ ಪ್ರದೇಶದಲ್ಲಿ ಒಂದು ಹುಲಿ ಹಾಗೂ ಮೂರು ಮರಿಗಳು ಅಸಹಜವಾಗಿ ಸಾವಿಗೀಡಾಗಿದ್ದು, ಪಿಸಿಸಿಎಫ್ ನೇತೃತ್ವದ ತಂಡದ ತನಿಖೆ ನಡೆಸಬೇಕು ಎಂದು ಪರಿಸರ ಸಚಿವ ಈಶ್ವರ ಖಂಡ್ರೆ ಆದೇಶ ಹೊರಡಿಸಿದ್ದಾರೆ.

ಈ ಬಗ್ಗೆ ದುಃಖ ವ್ಯಕ್ತಪಡಿಸಿದ ಅವರು, ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಮುಖ್ಯ ವನ್ಯಜೀವಿ ಪರಿಪಾಲಕರಿಗೆ ಲಿಖಿತ ಸೂಚನೆ ನೀಡಿದ್ದಾರೆ. ಕಾನನದಲ್ಲಿ 4 ಹುಲಿಗಳು ಸಾವಿಗೀಡಾಗಿರುವುದನ್ನು ಸರ್ಕಾರ ಅತ್ಯಂತ ಗಂಭೀರವಾಗಿ ಪರಿಗಣಿಸಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಸೂಚಿಸಿದ್ದಾರೆ. ಅಳಿವಿನಂಚಿನಲ್ಲಿರುವ ಹುಲಿಗಳ ಸಂರಕ್ಷಣೆಗೆ ದಿವಂಗತ ಪ್ರಧಾನಿ ಇಂದಿರಾ ಗಾಂಧಿ ಅವರು ಹುಲಿ ಯೋಜನೆ (ಪ್ರಾಜೆಕ್ಟ್ ಟೈಗರ್) ಆರಂಭಿಸಿದ ತರುವಾಯ ರಾಜ್ಯದಲ್ಲಿಯೂ ಹುಲಿಗಳ ಸಂರಕ್ಷಣೆಗೆ ಕ್ರಮ ವಹಿಸಲಾಗಿದೆ. 563 ಹುಲಿಗಳೊಂದಿಗೆ ಕರ್ನಾಟಕ ದೇಶದಲ್ಲೇ 2ನೇ ಸ್ಥಾನದಲ್ಲಿದೆ. ಹುಲಿ ಸಂರಕ್ಷಣೆಗೆ ಹೆಸರಾಗಿರುವ ರಾಜ್ಯದಲ್ಲಿ, ಒಂದೇ ದಿನ 4 ಹುಲಿಗಳು ಅಸಹಜ ಸಾವಿಗೀಡಾಗಿರುವುದು ಅತ್ಯಂತ ನೋವು ತಂದಿದೆ ಎಂದು ತಿಳಿಸಿದ್ದಾರೆ. ಕೂಡಲೇ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳ ನೇತೃತ್ವದಲ್ಲಿ ತಂಡ ರಚಿಸಿ, ಸ್ಥಳ ತನಿಖೆ ಕೈಗೊಂಡು, ಅರಣ್ಯ ಸಿಬ್ಬಂದಿ ನಿರ್ಲಕ್ಷ್ಯ ಇದ್ದರೆ ಅವರ ವಿರುದ್ಧ ಅಥವಾ ವಿದ್ಯುತ್ ಸ್ಪರ್ಶ, ವಿಷ ಪ್ರಾಷನ ಇತ್ಯಾದಿ ಸಾವಿಗೆ ಕಾರಣವಾಗಿದ್ದರೆ ಅದಕ್ಕೆ ಕಾರಣರಾದವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಕ್ರಮ ವಹಿಸುವಂತೆ ಸೂಚಿಸಿದ್ದಾರೆ ಹಾಗೂ 3 ದಿನಗಳ ಒಳಗಾಗಿ ವರದಿಯನ್ನು ಸಲ್ಲಿಸುವಂತೆ ಆದೇಶ ನೀಡಿದ್ದಾರೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054

# ಶಾಂಘೈ ಜಂಟಿ ಹೇಳಿಕೆಗೆ ಸಹಿ ಹಾಕಲು ಭಾರತ ನಿರಾಕರಣೆ



**ಶಿಂಗ್ದಾಂವ್ (ಚೀನಾ) :** ಗಡಿಯಾಚೆಗಿನ ಭಯೋತ್ಪಾದನೆಯ ಬಗ್ಗೆ ಸ್ಪಷ್ಟ ನಿಲುವು ತಳೆಯದ ಶಾಂಘೈ ಸಹಕಾರ ಸಂಘಟನೆಯ (ಎಸ್‌ಸಿಒ) ಜಂಟಿ ಹೇಳಿಕೆಗೆ ಸಹಿ ಹಾಕಲು ಭಾರತ ನಿರಾಕರಿಸಿದೆ. ಈ ಮೂಲಕ ಚೀನಾದ ನೆಲದಲ್ಲಿ ನಿಂತು, ಪಾಕಿಸ್ತಾನ ಮತ್ತು ಅದನ್ನು ಬೆಂಬಲಿಸುವ ರಾಷ್ಟ್ರಗಳಿಗೆ ಖಡಕ್ ಸೂಚನೆ ರವಾನಿಸಿದೆ.

ಚೀನಾದ ಶಿಂಗ್ದಾಂವ್‌ನಲ್ಲಿ ಶಾಂಘೈ ಸಹಕಾರ ಸಂಘಟನೆಯ ರಕ್ಷಣಾ ಸಚಿವರ ಸಭೆ ಇಂದು (ಗುರುವಾರ) ನಡೆಯಿತು. ಇದರಲ್ಲಿ ಭಾರತದ ಪರವಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಭಾಗವಹಿಸಿದ್ದರು.

ಸಭೆಯಲ್ಲಿ ಸದಸ್ಯ ರಾಷ್ಟ್ರಗಳ ಒಮ್ಮತದ ಅಭಿಪ್ರಾಯವುಳ್ಳ ಜಂಟಿ ಹೇಳಿಕೆಯನ್ನು ಬಿಡುಗಡೆ ಮಾಡಲಾಗುತ್ತದೆ. ಆದರೆ, ಪಾಕಿಸ್ತಾನ ಪ್ರಾಯೋಜಿತ ಗಡಿಯಾಚೆಗಿನ ಉಗ್ರವಾದದ ಕುರಿತು ಭಾರತದ ಕಳವಳವನ್ನು ಸ್ಪಷ್ಟವಾಗಿ ಉಲ್ಲೇಖಿಸದ ಕಾರಣ, ಶಾಂಘೈ ಸಹಕಾರ ಸಂಘಟನೆಯ ಪ್ರಕಟಣೆಗೆ ಸಹಿ ಹಾಕದಿರಲು ರಾಜನಾಥ್ ಸಿಂಗ್ ಅವರು ನಿರ್ಧರಿಸಿದರು. ಈ ವೇಳೆ ಮಾತನಾಡಿರುವ ಅವರು,ಭಯೋತ್ಪಾದಕರು ಮತ್ತು ಭಯೋತ್ಪಾದನೆಯನ್ನು ಬೆಂಬಲಿಸುವವರನ್ನು ಹೊಣೆಗಾರರನ್ನಾಗಿ ಮಾಡಬೇಕು. ಇಲ್ಲವಾದಲ್ಲಿ ರಾಷ್ಟ್ರಗಳ ನಡುವೆ ಶಾಂತಿ, ಸಹಕಾರ ಮುಂದುವರಿಯಲು ಸಾಧ್ಯವಿಲ್ಲಎಂದು ಪಾಕಿಸ್ತಾನವನ್ನು ಗುರಿಯಾಗಿಸಿ ಹೇಳಿಕೆ ನೀಡಿದರು.

ಗಡಿಯಾಚೆಗಿನ ಭಯೋತ್ಪಾದಕ ಚಟುವಟಿಕೆಗಳು ಸೇರಿದಂತೆ ಭಯೋತ್ಪಾದನೆಯನ್ನು ಎದುರಿಸಲು ಯಾವುದೇ ಸ್ಪಷ್ಟ ನಿರ್ಧಾರಗಳಿಲ್ಲ. ಉಗ್ರವಾದವನ್ನು ಎದುರಿಸುವಲ್ಲಿ ಎರಡು ಮಾನದಂಡಗಳು ಇರಬಾರದು. ಎಸ್‌ಸಿಒ ಸದಸ್ಯ ರಾಷ್ಟ್ರಗಳು ಒಗ್ಗಟ್ಟಿನಿಂದ ಇಂತಹ ಬೆದರಿಕೆಯನ್ನು ಖಂಡಿಸಬೇಕುಎಂದು ಒತ್ತಾಯಿಸಿದರು.

ಕೆಲವು ದೇಶಗಳು ಭಯೋತ್ಪಾದಕರಿಗೆ ಆಶ್ರಯ ನೀಡುವುದನ್ನೇ ನೀತಿಯನ್ನಾಗಿ ಮಾಡಿಕೊಂಡಿವೆ. ಹೀಗಾಗಿ, ಉಗ್ರವಾದ ಮತ್ತು ಶಾಂತಿ ಹಾಗೂ ಅಭಿವೃದ್ಧಿಯು ಒಟ್ಟಿಗೆ ಸಾಗಲು ಸಾಧ್ಯವಿಲ್ಲ. ಈ ಬೆದರಿಕೆಯನ್ನು ನಿಭಾಯಿಸಲು ನಿರ್ಣಾಯಕ ಕ್ರಮದ ಅಗತ್ಯವಿದೆ. ಸಾಮೂಹಿಕ ಭದ್ರತೆಗಾಗಿ ಈ ದುಷ್ಟಶಕ್ತಿಗಳ ವಿರುದ್ಧದ ಹೋರಾಟದಲ್ಲಿ ನಾವೆಲ್ಲರೂ ಒಂದಾಗಬೇಕು ಎಂದು ಅವರು ಕರೆ ನೀಡಿದರು.

## ನಟ ಕೃಷ್ಣ ಬಂಧಿಸಿದ ಪೊಲೀಸರು

**ಚೆನ್ನೈ:** ಬ್ಯಾಂಕ್ ವಹಿವಾಟಿನ ಮೂಲಕ ನಟ ಕೃಷ್ಣ ಅವರು ಮಾದಕ ದ್ರವ್ಯ ಖರೀದಿಸಿರುವ ಆರೋಪಕ್ಕೆ ಸಂಬಂಧಿಸಿದಂತೆ ಪೊಲೀಸರು ಅವರನ್ನು ಪ್ರಾಥಮಿಕ ತನಿಖೆಗೊಳಪಡಿಸಿ ಬಳಿಕ ಬಂಧಿಸಿದ್ದಾರೆ. ಮಾಜಿ ಎಐಎಡಿಎಂಕೆ ಕಾರ್ಯನಿರ್ವಾಹಕ ಅಧಿಕಾರಿ ಪ್ರಸಾದ್ ಅವರಿಂದ ಮಾದಕ ದ್ರವ್ಯ ಖರೀದಿಸಿದ



ಆರೋಪ ಎದುರಿಸುತ್ತಿದ್ದ ನಟ ಶ್ರೀಕಾಂತ್ ಅವರನ್ನು ಬಂಧಿಸಿ ಜೈಲಿಗೆ ಕಳುಹಿಸಲಾಗಿದೆ. ಅಲ್ಲದೇ, ಈ ಪ್ರಕರಣದಲ್ಲಿ ಬಂಧಿತರಾಗಿರುವ ಪ್ರದೀಪ್ ಅವರನ್ನು ವಿಚಾರಿಸುವ ಸಮಯದಲ್ಲಿ ಪೊಲೀಸರಿಗೆ ಮತ್ತೊಬ್ಬ ನಟ ಕೃಷ್ಣ ಕೂಡ ಭಾಗಿಯಾಗಿರುವುದು ಬಹಿರಂಗವಾಗಿತ್ತು.ಇದರ ಬೆನ್ನಲ್ಲೇ, ನುಂಗಂಬಾಕ್ಕಂ ಪೊಲೀಸರು ಕೇರಳದಲ್ಲಿದ್ದ ಕೃಷ್ಣ ಅವರನ್ನು ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ಜಾರಿ ಮಾಡಿದ್ದರು. ಇದರ ನಂತರ, ನಟ ಕೃಷ್ಣ ನಿನ್ನೆ ಮಧ್ಯಾಹ್ನ (ಜೂನ್ 25) ಜಿಲ್ಲಾಧಿಕಾರಿ ಜಯಚಂದ್ರನ್ ಸಮ್ಮುಖದಲ್ಲಿ ತಮ್ಮ ವಕೀಲರೊಂದಿಗೆ ಪೊಲೀಸ್ ಠಾಣೆಗೆ ಹಾಜರಾಗಿದ್ದರು. ಇದಾದ ನಂತರ ಪೊಲೀಸರು ನಿನ್ನೆ ಮಧ್ಯಾಹ್ನದಿಂದ ನಟ ಕೃಷ್ಣ ಅವರ ವಿಚಾರಣೆ ನಡೆಸಿದ್ದರು. ಅವರು ಆತನನ್ನು ಸರ್ಕಾರಿ ಆಸ್ಪತ್ರೆಗೆ ಕರೆದೊಯ್ದು, ಆತ ಮಾದಕ ದ್ರವ್ಯ ಸೇವಿಸಿದ್ದಾನೆಯೇ ಎಂದು ಕಂಡುಹಿಡಿಯಲು ರಕ್ತ ಪರೀಕ್ಷೆ ನಡೆಸಿದರು. ಅಲ್ಲಿ ಈತ ಕಳೆದ 45 ದಿನಗಳಲ್ಲಿ ಯಾವುದೇ ಮಾದಕ ದ್ರವ್ಯಗಳನ್ನು ಸೇವಿಸಿಲ್ಲ ಎಂದು ತಿಳಿದು ಬಂದಿದೆ.

## ಮೆಕ್ಸಿಕೋದಲ್ಲಿ ಸಂಭ್ರಮಾಚರಣೆ ವೇಳೆ ಗುಂಡಿನ ದಾಳಿ; 12 ಮಂದಿ ಸಾವು

**ಮೆಕ್ಸಿಕೋ:** ಮೆಕ್ಸಿಕೋದ ಗ್ವಾನಾಜುವಾಟೊದಲ್ಲಿನ ಇರಪುವಾಟೊ ನಗರದಲ್ಲಿ ಸಂಭ್ರಮಾಚರಣೆಯಲ್ಲಿ ತೊಡಗಿದ್ದ ಜನರ ಗುಂಪಿನ ಮೇಲೆ ದುಷ್ಕರ್ಮಿಗಳು ಮನಬಂದಂತೆ ಗುಂಡಿನ ದಾಳಿ ನಡೆಸಿದ್ದು, ಕನಿಷ್ಠ 12 ಜನರು ಸಾವನ್ನಪ್ಪಿದ್ದಾರೆ. ಬುಧವಾರ ರಾತ್ರಿ ಸೇಂಟ್ ಜಾನ್ ದಿ ಬ್ಯಾಪ್ಟಿಸ್ಟ್ ಆಚರಣೆಯ ಹಿನ್ನೆಲೆಯಲ್ಲಿ ಜನರು ರಸ್ತೆಯಲ್ಲಿ ನೃತ್ಯ ಮಾಡುತ್ತಿದ್ದರು. ಈ ವೇಳೆ ಗುಂಡಿನ ದಾಳಿ ನಡೆದಿದೆ. ಜನರು ಭಯಭೀತರಾಗಿ ದಿಕ್ಕಾಪಾಲಾಗಿ ಓಡುತ್ತಿರುವ ದೃಶ್ಯಗಳನ್ನು ಅಲ್ಲಿನ ಸುದ್ದಿ ವಾಹಿನಿಗಳು ಪ್ರಸಾರ ಮಾಡಿವೆ. ಈ ದಾಳಿಯಲ್ಲಿ 20 ಜನರು ಗಾಯಗೊಂಡಿದ್ದಾರೆ ಎಂದು ಇರಾಪುವಾಟೊ ನಗರದ ಪೊಲೀಸ್ ಅಧಿಕಾರಿ ರೊಡಾಲ್ಫೊ ಗೊಮೆಜ್ ಸೆರ್ವಾಂಟೆಸ್ ತಿಳಿಸಿದರು. ಮೆಕ್ಸಿಕೋ ಅಧ್ಯಕ್ಷೆ ಕ್ಲೌಡಿಯಾ ಶೀನ್‌ಬಾಮ್ ಅವರು ಗುಂಡಿನ ದಾಳಿಯನ್ನು ಖಂಡಿಸಿದ್ದು, ತನಿಖೆ ನಡೆಯುತ್ತಿದೆ ಎಂದಿದ್ದಾರೆ. ಕಳೆದ ತಿಂಗಳು ಗ್ವಾನಾಜುವಾಟೊದ ಸ್ಯಾನ್ ಬಾರ್ಟೊಲೊ ಡಿ ಬೆರಿಯೊಸ್ ಎಂಬಲ್ಲಿ ಕ್ಯಾಥೊಲಿಕ್ ಚರ್ಚ್ ಆಯೋಜಿಸಿದ್ದ ಪಾರ್ಟಿ ವೇಳೆ ನಡೆದ ಗುಂಡಿನ ದಾಳಿಯಲ್ಲಿ 7 ಜನರು ಸಾವನ್ನಪ್ಪಿದ್ದರು. ಮೆಕ್ಸಿಕೋ ನಗರದ ವಾಯುವ್ಯದಲ್ಲಿ ಈ ಗ್ವಾನಾಜುವಾಟೊ ನಗರವಿದ್ದು, ದೇಶದ ಹಿಂಸಾತ್ಮಕ ರಾಜ್ಯವೆಂದೇ ಕುಖ್ಯಾತಿ ಗಳಿಸಿದೆ. ಇಲ್ಲಿ ಕಳೆದ ಐದು ತಿಂಗಳಲ್ಲಿ ನಡೆದ ಹಿಂಸಾಚಾರದಲ್ಲಿ 1,435 ಜನರು ಸಾವನ್ನಪ್ಪಿದ್ದಾರೆ. ದೇಶದ ಇತರೆ ರಾಜ್ಯಗಳಿಗೆ ಹೋಲಿಸಿದರೆ, ಇಲ್ಲಿ ಹಿಂಸಾಚಾರ ದುಪ್ಪಟ್ಟಾಗಿದೆ.

## ರೈಲೆ ಹಳಿಗಳ ಮೇಲೆ ಕಾರು ಚಲಾಯಿಸಿದ ಯುವತಿ

**ಚೆವೆಲ್ಲಾ(ರಂಗಾರೆಡ್ಡಿ):** ರಂಗಾರೆಡ್ಡಿ ಜಿಲ್ಲೆಯ ನಾಗುಲಾಪಲ್ಲಿ – ಶಂಕರಪಲ್ಲಿಗೆ ಹೋಗುವ ದಾರಿಯಲ್ಲಿ ಸುಮಾರು 7 ಕಿ.ಮೀ. ದೂರ ರೈಲ್ವೆ ಹಳಿಗಳ ಮೇಲೆ ಯುವತಿಯೊಬ್ಬಳು ಕಾರು ಚಲಾಯಿಸಿದ್ದು, ಮಾತ್ರವಲ್ಲದೇ ಕಾರನ್ನು ತಡೆದ ಸ್ಥಳೀಯರಿಗೆ ಚಾಕುವಿನಿಂದ ಬೆದರಿಕೆ ಹಾಕಿರುವ ಘಟನೆ ನಡೆದಿದೆ. ಯುವತಿಯ ಕೃತ್ಯದಿಂದಾಗಿ ಸುಮಾರು 2 ಗಂಟೆಗಳ ಕಾಲ ರೈಲು ಸಂಚಾರ ಸ್ಥಗಿತಗೊಂಡಿದೆ. ಬೆಳಗ್ಗೆ 7 ಗಂಟೆ ಸುಮಾರಿಗೆ ಯುವತಿ ರೈಲು ಹಳಿಗಳ ಮೇಲೆ ವೇಗವಾಗಿ ಕಾರು ಚಲಾಯಿಸಿದ್ದಾಳೆ. ಯುವತಿ ನರಸಿಂಗಿಯಿಂದ ಬಂದು ಕೊಂಡಕಲ್‌ನಲ್ಲಿ ಹಳಿಗಳ ಮೇಲೆ ಕಾರನ್ನು ಚಲಾಯಿಸಿಕೊಂಡು ಅಲ್ಲಿಂದ ವಿಕಾರಾಬಾದ್ ಕಡೆಗೆ ಸುಮಾರು 7 ಕಿಲೋಮೀಟರ್ ದೂರ ಹಳಿಗಳ ಮೇಲೆ ಕಾರನ್ನು ಚಲಾಯಿಸಿದ್ದಾಳೆ. ಕೊಂಡಕಲ್‌ನಲ್ಲಿ ಹಳಿಗಳ ಮೇಲೆ ಆಕೆಯನ್ನು ಗಮನಿಸಿದ ರೈಲ್ವೆ ಸಿಬ್ಬಂದಿ ಸ್ಟೇಷನ್ ಮಾಸ್ಟರ್‌ಗೆ ಮಾಹಿತಿ ನೀಡಿದ್ದಾರೆ ಎಂದು ತಿಳಿದುಬಂದಿದೆ. ಹಳಿಗಳ ಮೇಲೆ ವೇಗವಾಗಿ ಚಲಿಸುತ್ತಿದ್ದ ಕಾರು ಗಮನಿಸಿದ ಸ್ಥಳೀಯರು ನಾಗುಲಪಲ್ಲಿಯಲ್ಲಿ ಕಾರನ್ನು ಬಹಳ ಕಷ್ಟಪಟ್ಟು ತಡೆದು ಯುವತಿಯನ್ನು ಹಿಡಿದಿದ್ದಾರೆ. ಕಾರನ್ನು ತಡೆದ ಸ್ಥಳೀಯರಿಗೆ ಯುವತಿ ಚಾಕುವಿನಿಂದ ಬೆದರಿಕೆ ಹಾಕಿದ್ದಾಳೆ. ಶಂಕರಪಲ್ಲಿಯಿಂದ ಹಾದುಹೋಗುವ ರೈಲು ಮಾರ್ಗ ಸಿಕಂದರಾಬಾದ್‌ನಿಂದ ಮುಂಬೈಗೆ ಹೋಗುವ ಮುಖ್ಯ ಮಾರ್ಗವಾಗಿರುವುದರಿಂದ, ಅಧಿಕಾರಿಗಳು ಆ ಮಾರ್ಗದಲ್ಲಿ ಚಲಿಸುವ ಎಲ್ಲ ರೈಲುಗಳನ್ನು ನಿಲ್ಲಿಸಿದರು. ಯುವತಿಯ ವರ್ತನೆಯಿಂದ ಸುಮಾರು 2 ಗಂಟೆಗಳ ಕಾಲ ಹಲವಾರು ರೈಲುಗಳ ಸಂಚಾರಕ್ಕೆ ಅಡ್ಡಿಯಾಯಿತು. ಅಲ್ಲದೆ ಅದೇ ಹಳಿಯಲ್ಲಿ ಬರುತ್ತಿದ್ದ ಒಂದು ರೈಲಿನ ಲೋಕೋಪೈಲಟ್ ಕಾರನ್ನು ಗಮನಿಸಿ ರೈಲನ್ನು ನಿಲ್ಲಿಸಿದ್ದು, ದೊಡ್ಡ ಅಪಾಯವೊಂದು ತಪ್ಪಿದೆ. ಶಂಕರಪಲ್ಲಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ, ಯುವತಿಯನ್ನು ವಶಕ್ಕೆ ಪಡೆದಿದ್ದಾರೆ. ಹಾಗೂ ವೈದ್ಯಕೀಯ ಪರೀಕ್ಷೆಗಾಗಿ ಆಸ್ಪತ್ರೆಗೆ ಕರೆದೊಯ್ದಿದ್ದಾರೆ ಎಂದು ವರದಿಯಾಗಿದೆ. ಹಳಿಗಳ ಮೇಲೆ ಕಾರು ಚಲಾಯಿಸಿದ ಯುವತಿಯನ್ನು ಲಕ್ನೋದ ರವಿಕಾ ಸೋನಿ ಎಂದು ಗುರುತಿಸಲಾಗಿದೆ. ಈಕೆ ಹೈದರಾಬಾದ್‌ನ ಕಂಪನಿಯೊಂದರಲ್ಲಿ ಸಾಫ್ಟ್‌ವೇರ್ ಇಂಜಿನಿಯರ್ ಆಗಿ ಕೆಲಸ ಮಾಡುತ್ತಿದ್ದು, ನರಸಿಂಗಿಯಲ್ಲಿ ವಾಸಿಸುತ್ತಿದ್ದಾಳೆ. ಕೆಲವು ದಿನಗಳ ಹಿಂದೆ ಕೆಲಸ ಕಳೆದುಕೊಂಡಿದ್ದು, ಮಾನಸಿಕ ಅಸ್ವಸ್ಥಳಾಗಿರಬಹುದು ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಇರಾನ್‌ಗೆ ಟ್ರಂಪ್ ಅವಮಾನ!



**ಇರಾನ್:** ಇರಾನ್-ಇಸ್ರೇಲ್ ಯುದ್ಧ ಕೊನೆಗೊಂಡಿದೆ ಎಂಬ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಘೋಷಣೆಯನ್ನು ಇರಾನ್ ತಿರಸ್ಕರಿಸಿದೆ. ಇಸ್ರೇಲ್ ಜೊತೆ ಇದುವರೆಗೆ ಯಾವುದೇ ಕದನ ವಿರಾಮ ಒಪ್ಪಂದಕ್ಕೆ ಬಂದಿಲ್ಲವೆಂದು ಇರಾನ್ ವಿದೇಶಾಂಗ ಸಚಿವ ಸಯ್ಯದ್ ಅಬ್ಬಾಸ್ ಅರಘ್ಚಿ ಸ್ಪಷ್ಟಪಡಿಸಿದ್ದಾರೆ. ಇಸ್ರೇಲ್ ನಿಲ್ಲಿಸಿದರೆ ದಾಳಿಗಳನ್ನು ಮುಂದುವರಿಸುವ ಇಚ್ಛೆಯನ್ನು ಇರಾನ್ ವ್ಯಕ್ತಪಡಿಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕದನ ವಿರಾಮದ ಕುರಿತು ಪೋಸ್ಟ್ ಮಾಡಿದ ಕೆಲವೇ ಗಂಟೆಗಳ ನಂತರ, ಅಬ್ಬಾಸ್ ಅರಘ್ಚಿ ಎರಡು ವಿಭಿನ್ನ ಪೋಸ್ಟ್‌ಗಳನ್ನು ಹಂಚಿಕೊಂಡಿದ್ದಾರೆ. ಈ ವಿರೋಧಾತ್ಮಕ ಹೇಳಿಕೆಗಳು ಕದನ ವಿರಾಮ ಒಪ್ಪಂದದ ಮೇಲೆ ಕರಿನೆರಳು ಬೀರಿವೆ.

ನಿನ್ನೆ ರಾತ್ರಿಯವರೆಗೆಇಸ್ರೇಲ್‌ಅಥವಾ ಇರಾನಿನ ಅಧಿಕಾರಿಗಳು ಯಾವುದೇ ಒಪ್ಪಂದವನ್ನ ಸಾರ್ವಜನಿಕವಾಗಿ ಒಪ್ಪಿಕೊಂಡಿರಲಿಲ್ಲ. ಶ್ವೇತಭವನ ಮತ್ತು ಪೆಂಟಗನ್ ಸಹ ಅಧಿಕೃತ ಹೇಳಿಕೆಗಳನ್ನ ನೀಡಿಲ್ಲ. ಈ ಒಪ್ಪಂದವನ್ನ ರಾಜತಾಂತ್ರಿಕ ಮಾರ್ಗಗಳ ಮೂಲಕ ತಿಳಿಸಲಾಗಿದೆಯೇ? ಅಥವಾ ಇಲ್ಲವೇ? ಇದೂ ಸಹ ಸ್ಪಷ್ಟವಾಗಿಲ್ಲ. ಎರಡೂ ಕಡೆಯವರು ಈ ನಿಯಮಗಳನ್ನು ಪಾಲಿಸಲು ಸಿದ್ಧರಿದ್ದಾರೆಯೇ ಎಂಬುದು ಸಹ ಸ್ಪಷ್ಟವಾಗಿಲ್ಲ. ಈ ಬೆಳವಣಿಗೆಯ ಬಗ್ಗೆ ಇದು ಅಂತಾರಾಷ್ಟ್ರೀಯ ಮಟ್ಟದಲ್ಲಿ ದೊಡ್ಡ ಉದ್ವಿಗ್ನತೆಯನ್ನು ಸೃಷ್ಟಿಸಿದೆ.

ಒಟ್ಟಾರೆ ಟ್ರಂಪ್ ಅವರ ಕದನ ವಿರಾಮ ಘೋಷಣೆಯ ನಂತರ, ಇರಾನ್ ತನ್ನ ಬೆನ್ನನ್ನು ತಿರುಗಿಸಿ ಟ್ರಂಪ್ ಅವರ ಖ್ಯಾತಿಗೆ ಕಳಂಕ ತಂದಿದೆ. ಒಟ್ಟಾರೆ ವಿಶ್ವದ ದೊಡ್ಡಣ್ಣ ಎಂದು ಮಾತನಾಡುವ ಅಮೆರಿಕದ ಮಾತುಗಳು ಈಗ ತಮ್ಮ ಮೌಲ್ಯವನ್ನು ಕಳೆದುಕೊಂಡಿವೆ. ಹಿಂದಿನಂತೆ ಅಮೆರಿಕದ ಮಾತುಗಳನ್ನು ಕೇಳುವ ದೇಶಗಳಿಲ್ಲ ಎಂಬುದು ಇದರಿಂದ ಸ್ಪಷ್ಟವಾಗಿದೆ. ಅಮೆರಿಕವು ಪಾಕಿಸ್ತಾನದಂತಹ ಭಯೋತ್ಪಾದಕ ರಾಷ್ಟ್ರಗಳೊಂದಿಗೆ ಸ್ನೇಹ ಬೆಳೆಸುತ್ತಿದ್ದು, ಭಾರತವನ್ನು ಸಮಾನವಾಗಿ ನೋಡುತ್ತಿದೆ ಎಂದು ಯಾರೂ ಸಂತೋಷಪಡುತ್ತಿಲ್ಲ. ಒಂದೆಡೆ ಜಾಗತಿಕ ಭಯೋತ್ಪಾದನೆಯ ವಿರುದ್ಧ ಎಂದು ಹೇಳಿಕೊಳ್ಳುವ ಅಮೆರಿಕವು ಪಾಕಿಸ್ತಾನದ ಪರವಾಗಿ ನಿಂತಿದೆ. ಈಗಾಗಲೇ ದಿವಾಳಿಯಾಗಿರೋ ಪಾಕಿಸ್ತಾನಕ್ಕೆ ವಿಶ್ವಬ್ಯಾಂಕ್‌ನಿಂದ ಸಾಲ ನೀಡಿ ಆ ದೇಶವನ್ನು ಇನ್ನೂ ಜೀವಂತವಾಗಿರಿಸಿದೆ. ಪಾಕಿಸ್ತಾನವು ಕೊಲ್ಲಿ ಮತ್ತು ಮಧ್ಯಪ್ರಾಚ್ಯ ದೇಶಗಳ ನಡುವೆ ಇದೆ. ಅದು ತನ್ನ ಮಿಲಿಟರಿ ಪ್ರಭಾವವನ್ನು ಹೆಚ್ಚಿಸಲು ಪಾಕಿಸ್ತಾನಕ್ಕೆ ಲಗತ್ತಿಸಿದೆ.

# ಪುರಿ ಜಗನ್ನಾಥ ವಾರ್ಷಿಕ ರಥಯಾತ್ರೆಗೆ ರಿಲಯನ್ಸ್‌ನಿಂದ ನಾನಾ ವಿಧದ ಸೇವಾ ಕಾರ್ಯ

**ಭುವನೇಶ್ವರ್ (ಒಡಿಶಾ):** ಒಡಿಶಾದಲ್ಲಿ ನಡೆಯುವಂಥ ರಥಯಾತ್ರೆಗೆ ಎಲ್ಲ ರೀತಿಯಲ್ಲೂ ಸಿದ್ಧತೆ ನಡೆಯುತ್ತಿದೆ. ಇನ್ನು ಈ ಅದ್ಭುತ ರಥಯಾತ್ರೆಯ ಸಂದರ್ಭಕ್ಕೆ ಪುರಿಯ ಜಿಲ್ಲಾಡಳಿತದ ಜೊತೆಗೆ ಕೈ ಜೋಡಿಸಿರುವ ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್, ಇಲ್ಲಿಗೆ ಭೇಟಿ ನೀಡುವ ಭಕ್ತರು, ಸಂದರ್ಶಕರ ಸುರಕ್ಷಿತ, ಆರಾಮದಾಯಕ ಹಾಗೂ ಸಮೃದ್ಧವಾದ ಪಯಣದ ಅನುಭವ ದೊರಕಿಸುವ ನಿಟ್ಟಿನಲ್ಲಿ ಸಮಗ್ರವಾದ ಸರಣಿ ಪ್ರಯತ್ನಗಳನ್ನು ಆರಂಭಿಸಿದೆ. ಪುರಿಯಲ್ಲಿ ನಡೆಯುವ ವಾರ್ಷಿಕ ರಥಯಾತ್ರೆಗೆ ಲಕ್ಷಾಂತರ ಭಕ್ತರು ಸೇರುತ್ತಾರೆ. ಜಗನ್ನಾಥ, ಬಲಭದ್ರ ಹಾಗೂ ಸುಭದ್ರ ದೇವರ ಮನಮೋಹಕವಾದ ಮೆರವಣಿಗೆಯನ್ನು ಜಗನ್ನಾಥ ದೇವಾಲಯದಿಂದ ಗುಂಡಿಚಾ ದೇವಾಲಯದ ತನಕ ನಡೆಸಲಾಗುತ್ತದೆ.

ಈ 13 ದಿನಗಳ ಪವಿತ್ರ ಪ್ರಯಾಣದಲ್ಲಿ ಅರ್ಥಪೂರ್ಣವಾದ ಕೊಡುಗೆಯೊಂದಿಗೆ ರಿಲಯನ್ಸ್ ಫೌಂಡೇಷನ್ ''ವೀ ಕೇರ್'' ಸ್ಫೂರ್ತಿ ಮೂಲಕ ಬೆಂಬಲ ನೀಡಲಿದೆ.

''ವೀ ಕೇರ್ ಎಂಬ ಸಿದ್ಧಾಂತದಲ್ಲಿ ಸೇವೆ ಎಂಬುದು ಆಳವಾಗಿ ಬೇರೂರಿದೆ. ಮತ್ತು ಪುರಿಯಲ್ಲಿ ಭಕ್ತಾದಿಗಳಿಗೆ ಸೇವೆ ಒದಗಿಸಲು ಸಿಕ್ಕಿರುವ ಅವಕಾಶವು ನಿಜವಾಗಿಯೂ ಆಶೀರ್ವಾದ. ರಥಯಾತ್ರೆಯ ಸಂದರ್ಭದಲ್ಲಿ ಭಕ್ತಾದಿಗಳು ಹಾಗೂ ಈ ರಥಯಾತ್ರೆಗಾಗಿ ಶ್ರಮಿಸುವವರಿಗೆ ಸೇವೆ ಒದಗಿಸುವುದು ಅಂದರೆ ದೈವಿಕವಾದ ಸೇವೆ ಮಾಡುತ್ತಿದ್ದೇವೆ ನಾವು ಎಂಬುದನ್ನು ನಂಬುತ್ತೇವೆ. ಆಹಾರದಿಂದ ಸುರಕ್ಷತೆ ತನಕ ವಿವಿಧ ಉಪಕ್ರಮಗಳ ಮೂಲಕವಾಗಿ ಪುರಿಗೆ ಭೇಟಿ ನೀಡುವವರ ಅನುಭವವನ್ನು ಹೆಚ್ಚಿಸುವುದಕ್ಕೆ ನಾವು ಬದ್ಧರಾಗಿದ್ದೇವೆ. ಅವರ ಪ್ರಯಾಣ ಸಲೀಸಾಗಿ, ಸುರಕ್ಷಿತವಾಗಿ ಹಾಗೂ ಹೆಚ್ಚು ಆರಾಮದಾಯಕವಾಗಿ ಇರುವಂತೆ ಮಾಡುವುದಕ್ಕೆ ಬದ್ಧರಾಗಿದ್ದೇವೆ,'' ಎಂದು ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ಕಾರ್ಯನಿರ್ವಾಹಕ



ನಿರ್ದೇಶಕ ಅನಂತ್ ಅಂಬಾನಿ ಹೇಳಿದ್ದಾರೆ.

**ಅನ್ನದಾನ ಸೇವೆ:** ಯಾತ್ರೆಯ ಮಾರ್ಗದಲ್ಲಿ ಆರು ಪ್ರಮುಖ ಸ್ಥಳಗಳಲ್ಲಿ ಲಕ್ಷಾಂತರ ಭಕ್ತರು ಮತ್ತು ಪೊಲೀಸ್ ಸಿಬ್ಬಂದಿಗೆ ಬಿಸಿ, ಆರೋಗ್ಯಕರ ಊಟವನ್ನು ರಿಲಯನ್ಸ್ ಫೌಂಡೇಷನ್ ನೀಡುತ್ತಿದೆ, ಯಾರೂ ಹಸಿವಿನಿಂದ ಇರದಂತೆ ನೋಡಿಕೊಳ್ಳುತ್ತದೆ.

**ನೈರ್ಮಲ್ಯದ ಗಮನ:** ಆಹಾರ ಮಳಿಗೆಗಳಲ್ಲಿ ಸಂಪರ್ಕವಿಲ್ಲದ ಸ್ಯಾನಿಟೈಸರ್‌ಗಳನ್ನು ಸ್ಥಾಪಿಸುವುದು, ಪುರಸಭೆಯ ಸಹಯೋಗದೊಂದಿಗೆ ಶುಚಿತ್ವಕ್ಕಾಗಿ ಕಸದ ಚೀಲಗಳನ್ನು ಪೂರೈಸುವುದು ಮತ್ತು ಪೊಲೀಸ್ ಶಿಬಿರಗಳಿಗೆ ನೈರ್ಮಲ್ಯ ಸೌಲಭ್ಯಗಳನ್ನು ವಿಸ್ತರಿಸುವುದು.

**ಜನಸಂದಣಿ ನಿರ್ವಹಣೆ:** ಸ್ಪಷ್ಟ ನಿರ್ದೇಶನ ಫಲಕಗಳು ಮತ್ತು ಗುರುತುಗಳೊಂದಿಗೆ ಭಕ್ತರಿಗೆ ಮಾರ್ಗದರ್ಶನ ನೀಡಲು ಪುರಸಭೆ ಹಾಗೂ ಪೊಲೀಸ್ ಅಧಿಕಾರಿಗಳೊಂದಿಗೆ ಸಹಕರಿಸುವುದು, ದೂರದಿಂದ ಬರುವ ಸಂದರ್ಶಕರಿಗೆ ಸುಗಮ ನೇವಿಗೇಷನ್ ಖಚಿತಪಡಿಸುವುದು.

**ಸ್ವಯಂಸೇವಕರ ಬೆಂಬಲ:** 4,000ಕ್ಕೂ ಹೆಚ್ಚು ತರಬೇತಿ ಪಡೆದ ಸ್ವಯಂಸೇವಕರು, ಸಮವಸ್ತ್ರಗಳನ್ನು ಧರಿಸಿ, ಜನಸಂದಣಿಯನ್ನು ನಿರ್ವಹಿಸುತ್ತಾರೆ ಹಾಗೂ ಬಿಸಿಲ ಶಾಖದಲ್ಲಿ ಭಕ್ತರಿಗೆ ದೇಹದಲ್ಲಿ ನೀರಿನ ಅಂಶಕ್ಕೆ ಕೊರತೆ ಬಾರದಂತೆ ನೀರಿನ ಪಾಯಿಂಟ್ ಗಳನ್ನು ನೋಡಿಕೊಳ್ಳುತ್ತಾರೆ.

**ಬಿಸಿಲಿನಲ್ಲಿ ಸೌಕರ್ಯ:** ಯಾತ್ರಿಕರು ಬಿಸಿಲ ತಾಪದಿಂದ ರಕ್ಷಿಸಿಕೊಳ್ಳಲು 1.5 ಲಕ್ಷಕ್ಕೂ ಹೆಚ್ಚು ಪರಿಸರಸ್ನೇಹಿ ಹ್ಯಾಂಡ್ ಫ್ಯಾನ್‌ಗಳನ್ನು ವಿತರಿಸುತ್ತಿದ್ದಾರೆ.

**ಪೊಲೀಸ್ ಬೆಂಬಲ:** ಕರ್ತವ್ಯದಲ್ಲಿರುವ ಸಿಬ್ಬಂದಿಗೆ ಆಶ್ರಯಗಳೊಂದಿಗೆ 100 ಪೊಲೀಸ್ ಸಹಾಯ ಕೇಂದ್ರಗಳನ್ನು ಸ್ಥಾಪಿಸುವುದು, ಭಕ್ತರಿಗೆ ಸುಲಭವಾಗಿ ಸಹಾಯ ಕೇಂದ್ರಗಳಿಗೆ ಸಂಪರ್ಕ ಒದಗಿಸುವುದು.

**ಹವಾಮಾನ ಸಿದ್ಧತೆ:** ಮಳೆಗಾಲವನ್ನು ಗಮನದಲ್ಲಿಟ್ಟುಕೊಂಡು, ಪೊಲೀಸ್ ಸಿಬ್ಬಂದಿಗೆ 3,500 ರೇನ್ ಕೋಟ್‌ಗಳನ್ನು ಸಹ ವಿತರಿಸಲಾಗಿದೆ. ಸ್ವಯಂಸೇವಕರು, ಪುರಸಭೆ ಸಿಬ್ಬಂದಿ ಮತ್ತು ಪೊಲೀಸ್ ಸಿಬ್ಬಂದಿಗೆ ರಿಫ್ರೆಶ್ ಮೆಂಟ್ ಕಿಟ್‌ಗಳನ್ನು ಒದಗಿಸಲಾಗುವುದು.

ಈ ವರ್ಷದ ಆರಂಭದಲ್ಲಿ, 2025ರ ಮಹಾ ಕುಂಭದ ಸಮಯದಲ್ಲಿ ರಿಲಯನ್ಸ್ ಪ್ರಯಾಗರಾಜ್ ನಲ್ಲಿ ಊಟದಿಂದ ಆರೋಗ್ಯದವರೆಗೆ ಸಾರಿಗೆ ಸೇವೆಗಳವರೆಗೆ ಹಲವಾರು ಲಕ್ಷ ಸಂದರ್ಶಕರಿಗೆ ಸೇವೆ ಒದಗಿಸುವಲ್ಲಿ ಯಲ್ಲಿ ತೊಡಗಿಸಿಕೊಂಡಿತ್ತು. ಆಧ್ಯಾತ್ಮಿಕ ಕಾರ್ಯಕ್ರಮಗಳ ಸಮಯದಲ್ಲಿ ಸಮುದಾಯಗಳನ್ನು ಬೆಂಬಲಿಸುವ ಬಲವಾದ ಬದ್ಧತೆಯೊಂದಿಗೆ, ರಿಲಯನ್ಸ್ ಎಲ್ಲರಿಗೂ ಸುರಕ್ಷಿತ, ಆರೋಗ್ಯಕರ ಅನುಭವವನ್ನು ಖಚಿತಪಡಿಸಿಕೊಳ್ಳಲು ಬಲವಾದ ಬದ್ಧತೆಯನ್ನು ಪ್ರದರ್ಶಿಸುತ್ತಿದೆ. ಈ ವರ್ಷ ಶ್ರೀ ಕ್ಷೇತ್ರದಲ್ಲಿ ರಥಯಾತ್ರೆಯ ಚಟುವಟಿಕೆಗಳು ಮಾನವೀಯತೆ ಮತ್ತು ದೈವಿಕ ಸೇವೆ ಮಾಡಲು ಮತ್ತೊಂದು ಅವಕಾಶವಾಗಿದೆ.

# ವೀಸಾ ಹೊಸ ನಿಯಮ ಜಾರಿಗೆ ತಂದ ಅಮೆರಿಕ

**ದೆಹಲಿ:** ನೀವು ಅಮೆರಿಕಕ್ಕೆ ಹೋಗಲು ಯೋಜಿಸುತ್ತಿದ್ದರೆ, ನಿಮ್ಮ ಸಾಮಾಜಿಕ ಮಾಧ್ಯಮ ಖಾತೆಯ ಗೌಪ್ಯತೆ ಸೆಟ್ಟಿಂಗ್‌ಗಳನ್ನು ಒಮ್ಮೆ ಪರಿಶೀಲಿಸಿ. ಅಮೆರಿಕ ತನ್ನ ವೀಸಾ ಸ್ಕ್ರೀನಿಂಗ್ ಪ್ರಕ್ರಿಯೆಯನ್ನು ಹೆಚ್ಚು ಬಲಿಷ್ಠಗೊಳಿಸಲು ಒಂದು ದೊಡ್ಡ ಹೆಜ್ಜೆ ಇಟ್ಟಿದೆ. ಹೊಸ ನಿಯಮದ ಅಡಿಯಲ್ಲಿ, ಈ ದೇಶಕ್ಕೆ ಪ್ರಯಾಣಿಸುವ ಜನರು ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಸಾರ್ವಜನಿಕವಾಗಿ ಇಡಬೇಕಾಗುತ್ತದೆ.




ಎಫ್, ಎಂ ಮತ್ತು ಜೆ ವರ್ಗಗಳವಲಸೆರಹಿತ ವೀಸಾಗಳಿಗೆಅರ್ಜಿ ಸಲ್ಲಿಸುವ ಎಲ್ಲರೂ ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಸಾರ್ವಜನಿಕಗೊಳಿಸುವಂತೆ ಅಮೆರಿಕ ಆದೇಶಿಸಿದೆ.ಈ ನಿಯಮವು ತಕ್ಷಣದಿಂದಲೇ ಜಾರಿಗೆ ಬಂದಿದೆ. ಈ ನಿಯಮದ ಮೂಲಕ, ಅಮೇರಿಕನ್ ಕಾನೂನಿನಡಿಯಲ್ಲಿ ವ್ಯಕ್ತಿಯ ಗುರುತು ಮತ್ತು ಪ್ರವೇಶವನ್ನು ಸ್ಥಾಪಿಸಲು ಅಗತ್ಯ ತನಿಖೆಯನ್ನು ಮಾಡಬಹುದು. ಭಾರತದಲ್ಲಿನ ಯುಎಸ್ ರಾಯಭಾರ ಕಚೇರಿ ಈ ಮಾಹಿತಿಯನ್ನು ನೀಡಿದೆ. ರಾಯಭಾರ ಕಚೇರಿಯು ತನ್ನಸಾಮಾಜಿಕ ಮಾಧ್ಯಮ ವೇದಿಕೆ 'ಎಕ್ಸ್' ನಲ್ಲಿಈ ಮಾಹಿತಿ ನೀಡಿದೆ. 'ತಕ್ಷಣದಿಂದಲೇ ಜಾರಿಗೆ ಬರುವಂತೆ, ಈ, ಒ ಮತ್ತು ಎ ವಲಸೆರಹಿತ ವೀಸಾಗಳಿಗೆ ಅರ್ಜಿ ಸಲ್ಲಿಸುವ ಎಲ್ಲಾ ಅರ್ಜಿದಾರರು ತಮ್ಮ ಎಲ್ಲಾ ಸಾಮಾಜಿಕ ಮಾಧ್ಯಮ ಖಾತೆಗಳ ಗೌಪ್ಯತಾ ಸೆಟ್ಟಿಂಗ್ ಗಳನ್ನು ಸಾರ್ವಜನಿಕಗೊಳಿಸುವಂತೆ ವಿನಂತಿಸಲಾಗಿದೆ ಎಂದು ಅದು ಹೇಳಿದೆ. '2019 ರಿಂದ, ಅಮೆರಿಕ ವೀಸಾ ಅರ್ಜಿದಾರರು ವಲಸೆ ಮತ್ತು ವಲಸೆಯೇತರ ವೀಸಾ ಅರ್ಜಿಗಳ ಕುರಿತು ಸಾಮಾಜಿಕ ಮಾಧ್ಯಮ ಮಾಹಿತಿಯನ್ನು ಒದಗಿಸುವುದನ್ನು ಕಡ್ಡಾಯಗೊಳಿಸಿದೆ ಎಂದು ಮತ್ತೊಬ್ಬ ಪೋಸ್ಟ್ ನಲ್ಲಿ ಹೇಳಿದೆ. ವೀಸಾ ಸ್ಕ್ರೀನಿಂಗ್‌ನಲ್ಲಿ ಲಭ್ಯವಿರುವ ಎಲ್ಲಾ ಮಾಹಿತಿಯನ್ನು ನಾವು ಬಳಸುತ್ತೇವೆ. ಈ ಮೂಲಕ ಅಮೆರಿಕಕ್ಕೆ ಪ್ರವೇಶಿಸಲು ಅನರ್ಹರಾಗಿರುವ ವೀಸಾ ಅರ್ಜಿದಾರರನ್ನು ಗುರುತಿಸುತ್ತೇವೆ ಎಂದು ಹೇಳಿದೆ.

# ಕೇರಳದಲಿ ಮತ್ತೆ ಮುಂಗಾರಿನ ಆರ್ಭಟ

**ತಿರುವನಂತಪುರ:** ಕೇರಳದಲ್ಲಿ ಮುಂಗಾರು ಮಳೆ ಚುರುಕುಗೊಂಡಿದ್ದು, ಗುರುವಾರ ಸುರಿದ ಭಾರೀ ಮಳೆಯಿಂದಾಗಿ ರಾಜ್ಯದ ಎರ್ನಾಕುಲಂ,ಇಡುಕ್ಕಿ ಹಾಗೂ ತ್ರಿಶೂರು ಜಿಲ್ಲೆಗಳು ಜಲಾವೃತಗೊಂಡಿವೆ. ರಾಜ್ಯದ ಏಳು ಜಿಲ್ಲೆಗಳಲ್ಲಿ ಗುರುವಾರ ಬೆಳಗ್ಗೆ ಹವಾಮಾನ ಇಲಾಖೆಯು ಆರೆಂಜ್ ಅಲರ್ಟ್ ಘೋಷಿಸಿದೆ.

ಕೊಲ್ಲಂ, ಪಟ್ಟಣಂತಿಟ್ಟ, ಅಲಪ್ಪುಳ, ಕೊಟ್ಟಾಯಂ, ಇಡುಕ್ಕಿ, ಎರ್ನಾಕುಲಂ ಹಾಗೂ ತ್ರಿಶೂರು ಜಿಲ್ಲೆಗಳಲ್ಲಿ ಗುರುವಾರ ಬೆಳಗ್ಗೆ ಮೂರು ತಾಸುಗಳ ಕಾಲ ಆರೆಂಜ್ ಅಲರ್ಟ್ ಘೋಷಿಸಲಾಗಿತ್ತು. 11 ಸೆಂ.ಮೀ.ಗಳಿಂದ 20 ಸೆಂ.ಮೀ.ವರೆಗೆ ಭಾರೀ ಮಳೆಯಾಗು ಸಾಧ್ಯತೆಯಿದ್ದಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗುತ್ತದೆ.



ಈ ಮಧ್ಯೆ ಕಳೆದ ವರ್ಷದ ಮಳೆಗಾಲದಲ್ಲಿ ಭೀಕರ ಭೂಕುಸಿತಕ್ಕೆ ಸಾಕ್ಷಿಯಾದ ವಯನಾಡ್ ಜಿಲ್ಲೆಯ ಮುಂಡಕ್ಕೈ-ಚೂರಾನ್‌ಮಲ ಪ್ರದೇಶದಲ್ಲಿ ಸತತವಾಗಿ ಮಳೆಯಾಗುತ್ತಿದ್ದು, ಚೂರಾಲ್‌ಮಲ ನದಿಯು ಅಪಾಯಕಾರಿ ಮಟ್ಟದಲ್ಲಿ ಹರಿಯುತ್ತಿದೆ. ಮಣ್ಣುಮಿಶ್ರಿತವಾದ ನದಿ ನೀರು ಬಿರುಸಿನಿಂದ ಹರಿಯುತ್ತಿದ್ದು, ಬೈಲೆಯಿ ಸೇತುವೆಯ ಸಮೀಪದ ದಡಗಳು ಒಡೆದುಹೋಗಿವೆ.

# ನೆತನ್ಯಾಹು ವಿರುದ್ಧದ ಕ್ರಿಮಿನಲ್ ವಿಚಾರಣೆಯನ್ನು ಮುಂದೂಡಬೇಕು

**ಟೆಲ್ ಅವೀವ್:** ಮುಂದಿನ ಹದಿನೈದು ದಿನಗಳ ಕಾಲ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ವಿರುದ್ಧ ನಡೆಯುತ್ತಿರುವ ಕ್ರಿಮಿನಲ್ ಪ್ರಕರಣದಲ್ಲಿ ಅವರ ಸಾಕ್ಷ್ಯದ ವಿಚಾರಣೆಯನ್ನು ಮುಂದೂಡಬೇಕು ಎಂದು ಅವರ ಪರ ವಕೀಲರು ಇಸ್ರೇಲ್ ನ್ಯಾಯಾಲಯಕ್ಕೆ ಮನವಿ ಮಾಡಿದ್ದಾರೆ ಎಂದು ಇಸ್ರೇಲ್ ಮಾಧ್ಯಮ ಸಂಸ್ಥೆ ವರದಿ ಮಾಡಿದೆ.

''ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರಿಗೆ ಗಾಝಾದಲ್ಲಿ ನಡೆಯುತ್ತಿರುವ ಯುದ್ಧ ಹಾಗೂ ಒತ್ತೆಯಾಳು ಬಿಕ್ಕಟ್ಟನ್ನು ನಿರ್ವಹಿಸುವುದು ಸೇರಿದಂತೆ, ರಾಜತಾಂತ್ರಿಕ, ರಾಷ್ಟ್ರೀಯ ಹಾಗೂ ಭದ್ರತಾ ಸಮಸ್ಯೆಗಳು ಪ್ರಮುಖ ಆದ್ಯತೆಗಳಾಗಿರುವುದರಿಂದ, ಅವರು ತಮ್ಮ ತಮ್ಮ ಎಲ್ಲ ಸಮಯಾವಕಾಶ ಹಾಗೂ



ಶಕ್ತಿಯನ್ನು ಅದಕ್ಕಾಗಿ ಮೀಸಲಿಡಬೇಕಾಗಿ ಬಂದಿದೆ'' ಎಂದು ಅವರ ಪರ ವಕೀಲ ಅಮಿತ್ ಹದಾದ್ ನ್ಯಾಯಾಲಯಕ್ಕೆ ತಿಳಿಸಿದರು ಎಂದು ವರದಿಯಾಗಿದೆ. ಇದರೊಂದಿಗೆ ಇರಾನ್ ನೊಂದಿಗಿನ ಯುದ್ಧ ಹಾಗೂ ಇನ್ನಿತರ ಪ್ರಾಂತೀಯ ಮತ್ತು ಜಾಗತಿಕ ಬೆಳವಣಿಗೆಗಳನ್ನೂ ಅವರು ಈ ವೇಳೆ ಉಲ್ಲೇಖಿಸಿದರು ಎಂದು ಹೇಳಲಾಗಿದೆ.

ಲಂಚ, ವಂಚನೆ ಹಾಗೂ ವಿಶ್ವಾಸ ದ್ರೋಹದ ಆರೋಪಗಳಲ್ಲಿ 2019ರಲ್ಲಿ ನೆತನ್ಯಾಹು ವಿರುದ್ಧ ದೋಷಾರೋಪ ಪಟ್ಟಿ ಸಲ್ಲಿಕೆಯಾದ ನಂತರ, 2020ರಿಂದ ಅವರ ವಿಚಾರಣೆ ಪ್ರಾರಂಭಗೊಂಡಿತ್ತು. ಆದರೆ, ತಮ್ಮ ವಿರುದ್ಧದ ಆರೋಪಗಳನ್ನು ಅಲ್ಲಗಳೆದಿದ್ದ ನೆತನ್ಯಾಹು, ತಾನು ನಿರ್ದೋಷಿ ಎಂದು ವಾದಿಸಿದ್ದರು.

# ಬಿಷ್ಣೋಯ್ ಗ್ಯಾಂಗ್‌ಗೆ ಭಯೋತ್ಪಾದಕ ಸಂಘಟನೆ ಎಂದು ಹೆಸರಿಸುವಂತೆ ಮನವಿ

**ನವದೆಹಲಿ:** ಕೆನಡಾದ ಕಾನೂನಿನ ಅಡಿಯಲ್ಲಿ ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಮತ್ತು ಸುಲಿಗೆ ಹಾಗೂ ಹಿಂಸಾಚಾರದಲ್ಲಿ ಭಾಗಿಯಾಗಿರುವ ಇತರರನ್ನು ಭಯೋತ್ಪಾದಕರು ಎಂದು ಹೆಸರಿಸುವಂತೆ ಕೆನಡಾದ ಬ್ರಿಟಿಷ್ ಕೊಲಂಬಿಯಾದ ಸರ್ರೆಯ ಮೇಯರ್ ಬ್ರೆಂಡಾ ಲಾಕ್ ಬುಧವಾರ ಮಾರ್ಕ್ ಕಾರ್ನಿ ನೇತೃತ್ವದ ಫೆಡರಲ್ ಸರ್ಕಾರಕ್ಕೆ ಮನವಿ ಮಾಡಿದ್ದಾರೆ. ಲಾಕ್ ನಗರ ಸರ್ಕಾರದ ವೆಬ್ ಸೈಟ್‌ನಲ್ಲಿ ಮಾಹಿತಿ ಬಿಡುಗಡೆ ಮಾಡಲಾಗಿದ್ದು ಇದರಲ್ಲಿ



ಸರ್ರೆಯ ಮೇಯರ್ ಬ್ರೆಂಡಾ ಲಾಕ್ ಅವರ ಹೇಳಿಕೆಯನ್ನು ಉಲ್ಲೇಖಿಸಲಾಗಿದೆ. ಲಾರೆನ್ಸ್ ಬಿಷ್ಣೋಯ್ ಗ್ಯಾಂಗ್ ಮತ್ತು ದಕ್ಷಿಣ ಏಷ್ಯಾ ಮೂಲದ ಕೆನಡಿಯನ್ನರನ್ನು ಗುರಿಯಾಗಿಸಿಕೊಂಡು ಸುಲಿಗೆ ಮತ್ತು ಹಿಂಸಾಚಾರದಲ್ಲಿ ಭಾಗಿಯಾಗಿರುವ ಇತರ ಯಾವುದೇ ಗುಂಪುಗಳಿದ್ದರೂ ಕೆನಡಾದ ಕಾನೂನಿನಡಿಯಲ್ಲಿ ಭಯೋತ್ಪಾದಕ ಸಂಘಟನೆಗಳೆಂದು ಫೆಡರಲ್ ಸರ್ಕಾರ ಘೋಷಿಸಬೇಕು ಎಂದು ಸರ್ರೆಯ ಮೇಯರ್ ಬ್ರೆಂಡಾ ಲಾಕ್ ಆಗ್ರಹಿಸಿದ್ದಾರೆ.

ಸುಲಿಗೆ ಮತ್ತು ಹಿಂಸಾಚಾರದಲ್ಲಿ ಭಾಗಿಯಾಗಿರುವ ಸ್ಥಳೀಯ ಅಥವಾ ಅಂತಾರಾಷ್ಟ್ರೀಯ ಗುಂಪುಗಳ ಜಾಲಗಳನ್ನು ಕೆಡವಲು ಇದು ಅಗತ್ಯ. ನಮ್ಮ ನಿವಾಸಿಗಳು ಮತ್ತು ವ್ಯವಹಾರಗಳನ್ನು ರಕ್ಷಿಸಲು, ಇವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳಲು ಈ ಪದನಾಮವು ನಿರ್ಣಾಯಕವಾಗಿದೆ. ಸರ್ರೆ ಸಮುದಾಯವು ಈ ಗ್ಯಾಂಗ್‌ಗಳಿಂದ ಎದುರಿಸುತ್ತಿರುವ ಹಿಂಸಾಚಾರ ಮತ್ತು ಬೆದರಿಕೆ ಸ್ವೀಕಾರಾರ್ಹವಲ್ಲ ಎಂದು ಅವರು ಹೇಳಿದ್ದಾರೆ. ಕೆನಡಾದಲ್ಲಿ ನೆಲೆಸಿರುವ ಹಲವಾರು ದರೋಡೆಕೋರರು ಭಾರತದೊಂದಿಗೆ ನಿಕಟ ಸಂಪರ್ಕ ಹೊಂದಿದ್ದಾರೆ. ಇವರು ಕಳೆದ ಕೆಲವು ವರ್ಷಗಳಿಂದ ಒಂಟಾರಿಯೊ, ಬ್ರಿಟಿಷ್ ಕೊಲಂಬಿಯಾ ಮತ್ತು ಆಲ್ಬರ್ಟಾದಲ್ಲಿ ಭಾರತೀಯರ ಮೇಲೆ ಅನೇಕ ದಾಳಿಗಳನ್ನು ನಡೆಸಿದ್ದಾರೆ ಎಂದು ರಾಯಲ್ ಕೆನಡಿಯನ್ ಮೌಂಟೆಡ್ ಪೊಲೀಸರು ಆರೋಪಿಸಿದ್ದಾರೆ.

# ಮಧ್ಯ ಆಫ್ರಿಕಾ ಗಣರಾಜ್ಯದ ಶಾಲೆಯಲ್ಲಿ ಸ್ಫೋಟ,ಕಾಲ್ತುಳಿತ ; 29 ಮಕ್ಕಳ ಸಾವು

**ಮಧ್ಯ ಆಫ್ರಿಕಾದ:** ಮಧ್ಯ ಆಫ್ರಿಕಾದ ಗಣರಾಜ್ಯದ ರಾಜಧಾನಿಯಲ್ಲಿರುವ ಪ್ರೌಢಶಾಲೆಯಲ್ಲಿ ಸಂಭವಿಸಿದ ಸ್ಫೋಟದ ನಂತರ ಕಾಲ್ತುಳಿತ ಸಂಭವಿಸಿ ಕನಿಷ್ಠ 29 ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ ಮತ್ತು 250ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಗುರುವಾರ ವರದಿ ಮಾಡಿದ್ದಾರೆ.

ಬಂಗುಯಿಯಲ್ಲಿರುವ ಬಾರ್ತೆಲೆಮಿ ಬೊಗಾಂಡಾ ಪ್ರೌಢಶಾಲೆಯಲ್ಲಿ ಬುಧವಾರ ಶಾಲಾ ಆವರಣದಲ್ಲಿ ಅಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದ್ದ ವಿದ್ಯುತ್ ಟ್ರಾನ್ಸ್‌ಫಾರ್ಮರ್'ಗೆ ವಿದ್ಯುತ್ ಸಂಪರ್ಕ ಪುನಃಸ್ಥಾಪಿಸುತ್ತಿದ್ದಾಗ ಸ್ಫೋಟ ಸಂಭವಿಸಿದೆ ಎಂದು ದೇಶದ ರಾಷ್ಟ್ರೀಯ ಶಿಕ್ಷಣ ಸಚಿವಾಲಯ ತಿಳಿಸಿದೆ. ಬಾರ್ತೆಲೆಮಿ ಬೊಗಾಂಡಾ ಪ್ರೌಢಶಾಲೆಯಲ್ಲಿ ಬುಧವಾರ ಈ ಘಟನೆ ನಡೆದಿದ್ದು, ಅಲ್ಲಿ 5,300ಕ್ಕೂ ಹೆಚ್ಚು ವಿದ್ಯಾರ್ಥಿಗಳು ತಮ್ಮ ಬ್ಯಾಕಲೌರಿಯೇಟ್ ಪರೀಕ್ಷೆಗಳ ಎರಡನೇ ದಿನವನ್ನು ತೆಗೆದುಕೊಳ್ಳುತ್ತಿದ್ದರು. ರಾಷ್ಟ್ರೀಯ ಶಿಕ್ಷಣ ಸಚಿವಾಲಯದ ಪ್ರಕಾರ, ಶಾಲಾ ಆವರಣದಲ್ಲಿ ದೋಷಪೂರಿತ ವಿದ್ಯುತ್ ಟ್ರಾನ್ಸ್‌ಫಾರ್ಮರ್ ಗೆ ವಿದ್ಯುತ್ ಪುನಃಸ್ಥಾಪಿಸುವ ಪ್ರಯತ್ನದ ಸಮಯದಲ್ಲಿ ಸ್ಫೋಟ ಸಂಭವಿಸಿದೆ.



ಗ್ರೇಟರ್ ಬೆಂಗಳೂರು ಅಥಾರಿಟಿ (ಬಿಬಿಎಂಪಿ)
ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ

ಸರ್ವಶ್ರೇಷ್ಠ ದಾರ್ಶನಿಕ - ಅಪ್ರತಿಮ ಆಡಳಿತಗಾರ, ಬೆಂಗಳೂರು ಮಹಾನಗರ ನಿರ್ಮಾತೃ

# ನಾಡಪ್ರಭು ಶ್ರೀ ಕೆಂಪೇಗೌಡರ 516ನೇ ಜಯಂತ್ಯುತ್ಸವ

27 ಜೂನ್, 2025 ಶುಕ್ರವಾರ





ಉದ್ಘಾಟನೆ
**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಘನ ಉಪಸ್ಥಿತಿ
**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ



ಮಾನ್ಯ ಕಂದಾಯ ಸಚಿವರು ಮತ್ತು ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ **ಶ್ರೀ ಕೃಷ್ಣ ಭೈರೇಗೌಡ ರವರು** ಸಮಾರಂಭವೊಂದರಲ್ಲಿ ಭಾಷಣ.



ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು, ಹಾಗೂ ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರ ಪದನಿಮಿತ್ತ ಸದಸ್ಯರಾದ **ಶ್ರೀ ಶಿವರಾಜ್ ಎಸ್. ತಂಗಡಗಿ ರವರು** ಸಮಾರಂಭವೊಂದರಲ್ಲಿ ಭಾಷಣ.

## ಕೆಂಪೇಗೌಡ ಭವನ ನಿರ್ಮಾಣದ ಶಂಕುಸ್ಥಾಪನಾ ಸಮಾರಂಭ

ಮಧ್ಯಾಹ್ನ 12.00 ಕ್ಕೆ

## ಕೆಂಪೇಗೌಡ ಜಯಂತಿ ಹಾಗೂ ಅಂತಾರಾಷ್ಟ್ರೀಯ ಕೆಂಪೇಗೌಡ ಪ್ರಶಸ್ತಿ ಪ್ರದಾನ ಕಾರ್ಯಕ್ರಮ

ಮಧ್ಯಾಹ್ನ 12.30 ಕ್ಕೆ

**ಸ್ಥಳ:** ಡಾ. ಬಾಬು ಜಗಜೀವನರಾಂ ಭವನ (ಸಂಶೋಧನಾ ಸಂಸ್ಥೆ)
ಹೊರವರ್ತುಲ ರಸ್ತೆ (ಮಾಗಡಿ ರಸ್ತೆ), ಸುಮನಹಳ್ಳಿ ಸರ್ಕಲ್, ಬೆಂಗಳೂರು.

## ನಾಡಪ್ರಭು ಕೆಂಪೇಗೌಡ ಪ್ರಶಸ್ತಿ ಪ್ರದಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ

ಸಂಜೆ 6.00 ಕ್ಕೆ

**ಸ್ಥಳ:** ಡಾ. ರಾಜಕುಮಾರ್ ಗಾಜಿನಮನೆ
ಜಿಬಿಎ (ಬಿಬಿಎಂಪಿ) ಕೇಂದ್ರ ಕಚೇರಿ ಆವರಣ, ಬೆಂಗಳೂರು.

ಗಣ್ಯರುಗಳಿಂದ **ನಾಡಪ್ರಭು ಕೆಂಪೇಗೌಡ ಪ್ರತಿಮೆ ಹಾಗೂ ಮಹಾತ್ಯಾಗಿ ಲಕ್ಷ್ಮೀದೇವಿ ಪ್ರತಿಮೆಗೆ ಮಾಲಾರ್ಪಣೆ ಮತ್ತು ಪುಷ್ಪ ನಮನ**

**ಬೆಳಿಗ್ಗೆ 9.30ಕ್ಕೆ ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಹತ್ತಿರ | ಬೆಳಿಗ್ಗೆ 10.30ಕ್ಕೆ ಜಿಬಿಎ (ಬಿಬಿಎಂಪಿ) ಕೇಂದ್ರ ಕಚೇರಿ ಮುಂಭಾಗ,**
**ಬೆಳಿಗ್ಗೆ 10.45ಕ್ಕೆ ವಿಧಾನಸೌಧ ಮುಂಭಾಗ**

### ದಿವ್ಯ ಸಾನಿಧ್ಯ

ಪರಮಪೂಜ್ಯ ಜಗದ್ಗುರು
**ಶ್ರೀ ಶ್ರೀ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಯವರು**
ಪೀಠಾಧ್ಯಕ್ಷರು, ಶ್ರೀ ಸುತ್ತೂರು ಮಹಾಸಂಸ್ಥಾನ ಮಠ

ಪರಮಪೂಜ್ಯ ಜಗದ್ಗುರು
**ಶ್ರೀ ಶ್ರೀ ಶ್ರೀ ಡಾ|| ನಿರ್ಮಲಾನಂದನಾಥ ಮಹಾಸ್ವಾಮೀಜಿಯವರು**
ಪೀಠಾಧ್ಯಕ್ಷರು, ಶ್ರೀ ಆದಿಚುಂಚನಗಿರಿ ಮಹಾಸಂಸ್ಥಾನ ಮಠ

ಪರಮಪೂಜ್ಯ ಜಗದ್ಗುರು
**ಶ್ರೀ ಶ್ರೀ ಶ್ರೀ ಡಾ|| ನಂಜಾವದೂತ ಮಹಾಸ್ವಾಮೀಜಿಯವರು**
ಪೀಠಾಧ್ಯಕ್ಷರು, ಶ್ರೀ ಸ್ಫಟಿಕಪುರಿ ಮಹಾಸಂಸ್ಥಾನ ಮಠ, ಶ್ರೀಕ್ಷೇತ್ರ ಪಟ್ಟನಾಯಕನಹಳ್ಳಿ

ಪರಮಪೂಜ್ಯ
**ಶ್ರೀ ಶ್ರೀ ಶ್ರೀ ಡಾ|| ನಿಶ್ಚಲಾನಂದನಾಥ ಸ್ವಾಮೀಜಿಯವರು,** ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠ, ಕೆಂಗೇರಿ, ಬೆಂಗಳೂರು

### ಗೌರವ ಉಪಸ್ಥಿತಿ

**ಶ್ರೀ ಆರ್. ಅಶೋಕ**
ಮಾನ್ಯ ವಿರೋಧ ಪಕ್ಷದ ನಾಯಕರು-ವಿಧಾನಸಭೆ

**ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ**
ಮಾನ್ಯ ವಿರೋಧ ಪಕ್ಷದ ನಾಯಕರು-ವಿಧಾನ ಪರಿಷತ್

**ಡಾ. ಹೆಚ್.ಸಿ. ಮಹದೇವಪ್ಪ**
ಮಾನ್ಯ ಸಮಾಜ ಕಲ್ಯಾಣ ಸಚಿವರು

**ಡಾ. ಸಿ.ಎನ್. ಮಂಜುನಾಥ್**
ಮಾನ್ಯ ಸಂಸದರು, ಬೆಂಗಳೂರು
ಗ್ರಾಮಾಂತರ ಲೋಕಸಭಾ ಕ್ಷೇತ್ರ

**ಶ್ರೀ ಪಿ.ಸಿ. ಮೋಹನ್**
ಮಾನ್ಯ ಸಂಸದರು, ಬೆಂಗಳೂರು
ಕೇಂದ್ರ ಲೋಕಸಭಾ ಕ್ಷೇತ್ರ

### ಅಧ್ಯಕ್ಷತೆ

**ಶ್ರೀ ಮುನಿರತ್ನ**
ಮಾನ್ಯ ಶಾಸಕರು, ರಾಜರಾಜೇಶ್ವರಿ ವಿಧಾನಸಭಾ ಕ್ಷೇತ್ರ

**ಶ್ರೀ ರಿಜ್ವಾನ್ ಹರ್ಷದ್**
ಮಾನ್ಯ ಶಾಸಕರು, ಶಿವಾಜಿನಗರ ವಿಧಾನಸಭಾ ಕ್ಷೇತ್ರ

3 ಐತಿಹಾಸಿಕ ಸ್ಥಳಗಳು ಮತ್ತು 4 ಗಡಿ ಗೋಪುರಗಳಿಂದ ಆಗಮಿಸುವ

## ಪುರಜ್ಯೋತಿಗೆ ಚಾಲನೆ

ಬೆಳಿಗ್ಗೆ 7.00 ರಿಂದ



| | |
|---|---|
| ಹುತ್ರಿದುರ್ಗ, ಕುಣಿಗಲ್ ತಾಲ್ಲೂಕು | **ಡಾ. ಜಿ. ಪರಮೇಶ್ವರ** ಮಾನ್ಯ ಗೃಹ ಸಚಿವರು ಕರ್ನಾಟಕ ಸರ್ಕಾರ |
| ಆವತಿ, ದೇವನಹಳ್ಳಿ ತಾಲ್ಲೂಕು | **ಶ್ರೀ ಕೆ.ಹೆಚ್. ಮುನಿಯಪ್ಪ** ಮಾನ್ಯ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಸಚಿವರು, ಕರ್ನಾಟಕ ಸರ್ಕಾರ |
| ಕೆಂಪಾಪುರ, ಮಾಗಡಿ ತಾಲ್ಲೂಕು | **ಶ್ರೀ ರಾಮಲಿಂಗಾರೆಡ್ಡಿ** ಮಾನ್ಯ ಸಾರಿಗೆ ಹಾಗೂ ಮುಜರಾಯಿ ಸಚಿವರು ಕರ್ನಾಟಕ ಸರ್ಕಾರ ಮತ್ತು ಉಪಾಧ್ಯಕ್ಷರು, ನಾಡಪ್ರಭು ಕೆಂಪೇಗೌಡ ಅಭಿವೃದ್ಧಿ ಪ್ರಾಧಿಕಾರ |
| ಹಲಸೂರು ಕೆರೆ ಗಡಿ ಗೋಪುರ | **ಶ್ರೀ ಕೆ.ಜೆ. ಜಾರ್ಜ್** ಮಾನ್ಯ ಇಂಧನ ಸಚಿವರು ಕರ್ನಾಟಕ ಸರ್ಕಾರ |
| ಲಾಲ್‌ಬಾಗ್ ಗಡಿ ಗೋಪುರ | **ಶ್ರೀ ದಿನೇಶ್ ಗುಂಡೂರಾವ್** ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು, ಕರ್ನಾಟಕ ಸರ್ಕಾರ |
| ಮೇಖ್ರಿ ವೃತ್ತ ಗಡಿ ಗೋಪುರ | **ಶ್ರೀ ಸುರೇಶ್. ಬಿ.ಎಸ್.** ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು, ಕರ್ನಾಟಕ ಸರ್ಕಾರ |
| ಕೆಂಪಾಂಬುಧಿ ಕೆರೆ ಗಡಿ ಗೋಪುರ | **ಶ್ರೀ ಬಿ.ಜಡ್. ಜಮೀರ್ ಅಹ್ಮದ್ ಖಾನ್** ಮಾನ್ಯ ವಸತಿ, ವಕ್ಫ್ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು, ಕರ್ನಾಟಕ ಸರ್ಕಾರ |

**ಈ ಸಮಾರಂಭದಲ್ಲಿ ಮಾನ್ಯ ಸಚಿವರುಗಳು, ಮಾನ್ಯ ಸಂಸದರು (ಲೋಕಸಭೆ/ರಾಜ್ಯಸಭೆ), ಮಾನ್ಯ ಶಾಸಕರುಗಳು (ವಿಧಾನಸಭೆ / ವಿಧಾನ ಪರಿಷತ್), ನಿಗಮ ಮಂಡಳಿಗಳ ಅಧ್ಯಕ್ಷರು / ಉಪಾಧ್ಯಕ್ಷರು ಹಾಗೂ ಸ್ಥಳೀಯ ಸಂಸ್ಥೆಗಳ ಚುನಾಯಿತ ಜನಪ್ರತಿನಿಧಿಗಳು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು.**

ಸರ್ವಜನರ ಒಳಿತಿಗಾಗಿ ನಾಡುಕಟ್ಟಿದ ನಾಡಪ್ರಭು ಕೆಂಪೇಗೌಡರು - ನಾಡ ಪ್ರಭುವಿಗೆ ನಮನ, ಬನ್ನಿ, ಪಾಲ್ಗೊಳ್ಳಿ.

**ತಮಗೆ ಆದರದ ಸ್ವಾಗತ**

ಎಲ್ಲಾ ವೈಯಕ್ತಿಕ ಮತ್ತು ಸಾಮೂಹಿಕ ಚಟುವಟಿಕೆಗಳಲ್ಲಿ ಉನ್ನತಿ ಸಾಧಿಸಲು ಪ್ರಯತ್ನಿಸಿ ದೇಶದ ಪ್ರಗತಿಗಾಗಿ ಶ್ರಮಿಸುವುದು ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ